Bruhat Bengaluru
Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಕನ್ನಡ ದಿನಪತ್ರಿಕೆಗಳ ತುಣಕು

## 26-11-2020



# ಪರಿವಿಡಿ

1. ಪ್ರಜಾ ವಾಣಿ
2. ಕನ್ನಡ ಪ್ರಭ
3. ವಿಜಯ ಕರ್ನಾಟಕ
4. ವಿಜಯ ವಾಣಿ
5. ವಿಶ್ವ ವಾಣಿ
6. ಉದಯ ವಾಣಿ
7. ಸಂಯುಕ್ತ ಕರ್ನಾಟಕ
8. ಹೊಸ ದಿಗಂತ
9. ವಾರ್ತಾ ಭಾರತಿ
10. ಜಯಕಿರಣ
11. ಸಂಜೆ ವಾಣಿ
12. ಈ ಸಂಜೆ

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

| Date | 26-11-2020 |
|---|---|
| Page No | II |


# ಕಸ ಸಂಸ್ಕರಣೆ ನಿರ್ವಹಣೆಗೆ ನಿಗಮ?

## ಪ್ರಸ್ತಾವನೆ ಸಿದ್ಧಪಡಿಸುತ್ತಿದೆ ಬಿಬಿಎಂಪಿ: ಶೀಘ್ರ ನಗರಾಭಿವೃದ್ಧಿ ಇಲಾಖೆಗೆ ಸಲ್ಲಿಕೆ

ಪ್ರಜಾವಾಣಿ ವಾರ್ತೆ

ಬೆಂಗಳೂರು: ರಾಜ್ಯ ಸರ್ಕಾರವು ರಚಿಸಲಿರುವ ಹೊಸ ನಿಗಮಗಳ ಪಟ್ಟಿಗೆ ಮತ್ತೊಂದು ನಿಗಮ ಸೇರ್ಪಡೆಯಾಗುವ ಸಾಧ್ಯತೆ ಇದೆ. ಬಿಬಿಎಂಪಿ ವ್ಯಾಪ್ತಿಯಲ್ಲಿರುವ ಏಳು ಕಸ ಸಂಸ್ಕರಣಾ ಘಟಕಗಳ ನಿರ್ವಹಣೆಗೆ ಪ್ರತ್ಯೇಕ ನಿಗಮವನ್ನು ಸ್ಥಾಪಿಸುವ ಕುರಿತು ಬಿಬಿಎಂಪಿ ಪ್ರಸ್ತಾವ ಸಿದ್ಧಪಡಿಸುತ್ತಿದೆ.

ಹಸಿಕಸದಿಂದ ಸಾವಯವ ಗೊಬ್ಬರ ತಯಾರಿಸುವ ಉದ್ದೇಶದಿಂದ ಬಿಬಿಎಂಪಿ ವ್ಯಾಪ್ತಿಯಲ್ಲಿ ಒಟ್ಟು ಏಳು ಕಡೆ ಕಸ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲಾಗಿದೆ. ಈ ಘಟಕಗಳು ನಿತ್ಯ 2,300 ಟನ್‌ಗಳಷ್ಟು ಕಸವನ್ನು ಸಂಸ್ಕರಣೆಗೆ ಒಳಪಡಿಸುವ ಸಾಮರ್ಥ್ಯ ಹೊಂದಿವೆ. ಆದರೆ, ಇವುಗಳಲ್ಲಿ ನಿತ್ಯ 1000 ಟನ್‌ಗಳಷ್ಟು ಕಸ ಮಾತ್ರ ಸಂಸ್ಕರಣೆಯಾಗುತ್ತಿದೆ. ಈ ಘಟಕಗಳಲ್ಲಿ ಉತ್ಪಾದನೆಯಾಗುವ ಕಾಂಪೋಸ್ಟ್‌ಗೆ ಉತ್ತಮ ಮಾರುಕಟ್ಟೆ ವ್ಯವಸ್ಥೆ ಕಂಡುಕೊಳ್ಳುವಲ್ಲೂ ಬಿಬಿಎಂಪಿ ಯಶಸ್ವಿಯಾಗಿಲ್ಲ.

ಸ್ಥಳೀಯರ ಪ್ರತಿರೋಧದಿಂದಾಗಿ ಕೆಲವು ಘಟಕಗಳನ್ನು ಪದೇ ಪದೇ ಸ್ಥಗಿತಗೊಳಿಸಬೇಕಾದ ಸ್ಥಿತಿ ಇದೆ. ಘಟಕಗಳ ಉಪಉತ್ಪನ್ನವಾದ 16 ಮಿ.ಮಿ ದಪ್ಪದ ಹಾಗೂ 35 ಮಿ.ಮೀ ದಪ್ಪದ ಸಾವಯವ ಗೊಬ್ಬರವನ್ನು ದಾಸ್ತಾನು ಇಡುವುದಕ್ಕೂ ಬಿಬಿಎಂಪಿ ಸಮಸ್ಯೆ ಎದುರಿಸುತ್ತಿದೆ. ಇವುಗಳನ್ನು ರೈತರಿಗೆ ಉಚಿತವಾಗಿ ನೀಡುತ್ತಿದೆ.

‘ಬಿಬಿಎಂಪಿಯ ಕಸ ಸಂಸ್ಕರಣೆ ಘಟಕಗಳ ನಿರ್ವಹಣೆಗೆ ಪ್ರತ್ಯೇಕ ನಿಗಮ ಸ್ಥಾಪಿಸುವಂತೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಸಲಹೆ ನೀಡಿದ್ದಾರೆ. ಈ ಕುರಿತು ನಾವು ರೂಪರೇಷೆ ಸಿದ್ಧಪಡಿಸುತ್ತಿದ್ದೇವೆ. ಶೀಘ್ರವೇ ನಗರಾಭಿವೃದ್ಧಿ ಇಲಾಖೆಗೆ ಪ್ರಸ್ತಾವನೆ ಸಲ್ಲಿಸುತ್ತೇವೆ’ ಎಂದು ಬಿಬಿಎಂಪಿ ಆಯುಕ್ತ ಎನ್. ಮಂಜುನಾಥ ಪ್ರಸಾದ್ ‘ಪ್ರಜಾವಾಣಿ’ಗೆ ತಿಳಿಸಿದರು.

‘ಕಸ ಸಂಸ್ಕರಣಾ ಘಟಕಕ್ಕೆ ಪ್ರತ್ಯೇಕ ನಿಗಮ ರೂಪಿಸಿದ್ದೇ ಆದರೆ, ಅವುಗಳ ನಿರ್ವಹಣೆಯಲ್ಲಿ ವೃತ್ತಿಪರತೆ ಹೆಚ್ಚಲಿದೆ. ಈ ಘಟಕಗಳಲ್ಲಿ ನಿರ್ವಹಣೆ ವೇಳೆ ಎದುರಿಸುತ್ತಿರುವ ಅನೇಕ ಸಮಸ್ಯೆಗಳಿಗೆ ತ್ವರಿತ ಪರಿಹಾರ ಕಂಡುಕೊಳ್ಳುವುದು ಸುಲಭವಾಗಲಿದೆ. ಈ ಘಟಕಗಳಲ್ಲಿ ತಯಾರಾಗುವ ಕಾಂಪೋಸ್ಟ್‌ಗಳಿಗೆ ಉತ್ತಮ ಮಾರುಕಟ್ಟೆ ಕಂಡುಕೊಳ್ಳಲು ಸಾಧ್ಯವಾಗಲಿದೆ’ ಎಂದರು.



ಕನ್ನಹಳ್ಳಿ ಕಸ ಸಂಸ್ಕರಣಾ ಘಟಕ (ಸಂಗ್ರಹ ಚಿತ್ರ)

### ಬಿಬಿಎಂಪಿ ಕಸ ಸಂಸ್ಕರಣಾ ಘಟಕಗಳ ವಿವರ

| ಘಟಕ | ವಿಸ್ತೀರ್ಣ (ಎಕರೆ) | ದೈನಂದಿನ ನಿರ್ವಹಣಾ ಸಾಮರ್ಥ್ಯ (ಟನ್‌ಗಳಲ್ಲಿ) | ನಿತ್ಯ ಸಂಸ್ಕರಣೆ ಆಗುತ್ತಿರುವುದು |
|---|---|---|---|
| ಕೂಡ್ಲು | 30 | 500 | 300 ಟನ್ |
| ಕನ್ನಹಳ್ಳಿ | 29 | 500 | 200 ಟನ್ |
| ಸೀಗೇಹಳ್ಳಿ | 7 | 150 | 100 ಟನ್ |
| ಚಿಕ್ಕನಾಗಮಂಗಲ | 31 | 500 | 100 ಟನ್ |
| ಸುಬ್ಬರಾಯನಪಾಳ್ಯ | 10 | 200 | ಶೇ 30ರಷ್ಟು |
| ಲಿಂಗದೀರನಹಳ್ಳಿ | 9 | 200 | 150 ಟನ್ |
| ದೊಡ್ಡಬಿದರಕಲ್ಲು | 10 | 300 | 120 ಟನ್ |

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

| Date | 26-11-2020 |
|---|---|
| Page No | II |

# ತ್ಯಾಜ್ಯ ನಿರ್ವಹಣೆಗೆ ಪ್ರತ್ಯೇಕ ಮಂಡಳಿ: ವಿರೋಧ

**ಬೆಂಗಳೂರು:** 'ನಗರದ ಕಸ ನಿರ್ವಹಣೆಗೆ ಪ್ರತ್ಯೇಕ ಸ್ವಾಯತ್ತ ಮಂಡಳಿ ಸ್ಥಾಪನೆಗೆ ಪ್ರಸ್ತಾವನೆ ಸಲ್ಲಿಸುವುದಾಗಿ ಬಿಬಿಎಂಪಿ ಆಯುಕ್ತ ಎನ್. ಮಂಜುನಾಥ್ ಪ್ರಸಾದ್ ಹೇಳಿದ್ದು, ಈ ನಡೆಯನ್ನು ಆಮ್ ಆದ್ಮಿ ಪಕ್ಷ ವಿರೋಧಿಸುತ್ತದೆ' ಎಂದು ಎಎಪಿ ರಾಜ್ಯ ಸಹ ಸಂಚಾಲಕಿ ಶಾಂತಲಾ ದಾಮ್ಲೆ ಹೇಳಿದರು.

ಬುಧವಾರ ಇಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 'ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಾಗಿ ಬದಲಾಗುವುದಕ್ಕಿಂತ ಮೊದಲು ನಗರದ ಕಸ ನಿರ್ವಹಣೆ ಆರೋಗ್ಯ ಅಧಿಕಾರಿಗಳ ಅಡಿಯಲ್ಲಿ ಬರುತ್ತಿತ್ತು. ಬಳಿಕ ಅದನ್ನು ಎಂಜಿನಿಯರಿಂಗ್ ವಿಭಾಗಕ್ಕೆ ವರ್ಗಾಯಿಸಲಾಯಿತು. ಇದಾದ ನಂತರ ಕಸದ ಮಾಫಿಯಾ ಕೈಗೆ ಸಿಲುಕಿದ ವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟು ಇಡೀ ಬೆಂಗಳೂರು ಕಸದ ಕೊಂಪೆಯಾಗಿ ಮಾರ್ಪಟ್ಟಿದೆ' ಎಂದು ಆರೋಪಿಸಿದರು.

'ಇಡೀ ಸರ್ಕಾರವನ್ನೇ ನಿಯಂತ್ರಣ ಮಾಡುವಷ್ಟು ಬೆಳೆದಿರುವ ಕಸದ ಮಾಫಿಯಾಗಳ ಚಿತಾವಣೆಯಿಂದ ಈ ಕೆಲಸಕ್ಕೆ ಬಿಬಿಎಂಪಿ ಕೈ ಹಾಕಿದೆ. ₹150 ಕೋಟಿ ವೆಚ್ಚದ ಕಸ ನಿರ್ವಹಣೆ ಬಜೆಟ್ ಈಗಾಗಲೇ ₹1200 ಕೋಟಿಗೆ ಮುಟ್ಟಿದೆ. ಪ್ರತ್ಯೇಕ ಮಂಡಳಿ ರಚಿಸಿ ಜನರ ಮತ್ತಷ್ಟು ಹಣ ಲೂಟಿ ಹೊಡೆಯಲು ಹುನ್ನಾರ ನಡೆಸಲಾಗಿದೆ' ಎಂದರು.

'ಪ್ರಸ್ತುತ ಹಲ್ಲು ಕಿತ್ತು ಹಾವಿನಂತಾಗಿರುವ ಬಿಬಿಎಂಪಿಯನ್ನು ಮತ್ತಷ್ಟು ದುರ್ಬಲಗೊಳಿಸುವ ಹುನ್ನಾರ ಇದಾಗಿದೆ. ನೀರು ಸರಬರಾಜನ್ನು ಜಲಮಂಡಳಿಗೆ ನೀಡಲಾಗಿದೆ. ಆಸ್ತಿ ನಿರ್ವಹಣೆ, ಶಾಲೆಗಳ, ಆಸ್ಪತ್ರೆಗಳ ನಿರ್ವಹಣೆ... ಹೀಗೆ ಒಂದೊಂದೇ ಜವಾಬ್ದಾರಿಗಳನ್ನು ತೆಗೆದು ಅತೃಪ್ತರನ್ನು ಕೂರಿಸುವ ಆವಾಸಸ್ಥಾನ ಮಾಡಲಾಗುತ್ತಿದೆ' ಎಂದು ತಿಳಿಸಿದರು.

# 'ಕಸ ಸಂಗ್ರಹಕ್ಕೆ 600 ವಾಹನ'

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ಒಣ ಕಸವನ್ನು ಮನೆ ಮನೆಯಿಂದ ಸಂಗ್ರಹಿಸಲು ಹೊಸದಾಗಿ 600 ವಾಹನಗಳನ್ನು ಒದಗಿಸಲು ಟೆಂಡರ್ ಕರೆಯಲಾಗಿದೆ ಎಂದು ಬಿಬಿಎಂಪಿ ಆಯುಕ್ತ ಎನ್. ಮಂಜುನಾಥ ಪ್ರಸಾದ್ ತಿಳಿಸಿದರು.

ಹಸಿರು ದಳ, ಬಿಬಿಸಿ ಮೀಡಿಯಾ ಆ್ಯಕ್ಷನ್, ಕೇರ್, ಲೇಬರ್ ನೆಟ್, ಸೇವ್ ದಿ ಚಿಲ್ಡ್ರನ್, ಸೋಷಿಯಲ್ ಅಲ್ಫಾ ಹಾಗೂ ವಿವಿಧ ನಾಗರಿಕ ಸಂಘಟನೆಗಳು 'ಸಾಮೂಹಿಕ ಶಕ್ತಿ' ಹೆಸರಿನಲ್ಲಿ ಆಯೋಜಿಸಿದ್ದ ಕಸ ಆಯುವವರ ಸವಾಲುಗಳು ಮತ್ತು ಪರಿಸರ ಸಂರಕ್ಷಣೆಯಲ್ಲಿ ಅವರ ಪಾತ್ರದ ಕುರಿತ



ಮಂಜುನಾಥ ಪ್ರಸಾದ್

ವೆಬಿನಾರ್‌ನಲ್ಲಿ ಮಾತನಾಡಿದರು.

'ಕಸ ಸಂಗ್ರಹ ಮಾಡುವವರ ಮೇಲೆ ಪೊಲೀಸರು ಮತ್ತು ಬಿಬಿಎಂಪಿ ಸಿಬ್ಬಂದಿಯಿಂದ ದೌರ್ಜನ್ಯ ನಡೆಯುತ್ತಿದೆ ಎಂಬ ಆರೋಪ ಇದೆ. ಅವರ ಗೌರವಯುತ ಜೀವನಕ್ಕೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ 8 ಸಾವಿರ ಜನರಿಗೆ ಗುರುತಿನ ಚೀಟಿಗಳನ್ನು ನೀಡಲಾಗಿದೆ. ವಾಹನಗಳನ್ನು ಒದಗಿಸಲಾಗಿದೆ' ಎಂದರು.

'ಇವುಗಳ ಹೊರತಾಗಿಯೂ ಅವರ ಆರೋಗ್ಯ ಮತ್ತು ಜೀವನಮಟ್ಟ ಸುಧಾರಣೆಗೆ ಒತ್ತು ನೀಡಬೇಕಾಗಿದೆ. ಅವರ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡಿಸುವ ಮತ್ತು ಸರ್ಕಾರದ ಸವಲತ್ತುಗಳನ್ನು ಬಳಸಿಕೊಳ್ಳಲು ಅವರನ್ನು ಜಾಗೃತಗೊಳಿಸಬೇಕಾಗಿದೆ. ಈ ಕೆಲಸಕ್ಕೆ ನಾಗರಿಕ ಸಂಸ್ಥೆಗಳ ಸಹಕಾರ ಅತೀ ಮುಖ್ಯ' ಎಂದು ಹೇಳಿದರು.

ನಂತರ ನಡೆದ ಸಂವಾದದಲ್ಲಿ ಬಿಬಿಎಂಪಿ ವಿಶೇಷ ಆಯುಕ್ತ(ಕಸ ನಿರ್ವಹಣೆ) ಡಿ. ರಂದೀಪ್, ಹಸಿರು ದಳ ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕಿ ನಳಿನಿ ಶೇಖರ್, ಭಾರತಿ ದೇವನ್ ಪಾಲ್ಗೊಂಡು ಘನತ್ಯಾಜ್ಯ ನಿರ್ವಹಣೆಯಲ್ಲಿ ಚಿಂದಿ ಆಯುವವರ ಪಾತ್ರದ ಕುರಿತು ಚರ್ಚಿಸಿದರು.

# ಮುಗಿಯದ 'ಟೊಯೊಟಾ' ಸಂಘರ್ಷ

**ರಾಮನಗರ:** ಬಿಡದಿಯ ಟೊಯೊಟಾ ಕಿರ್ಲೋಸ್ಕರ್ ಮೋಟಾರ್ಸ್ ಕಾರ್ಖಾನೆಯ ಆಡಳಿತ ಮಂಡಳಿ ಮತ್ತು ನೌಕರರ ನಡುವಿನ ಸಂಘರ್ಷ ಮತ್ತೊಂದು ಹಂತ ತಲುಪಿದೆ. ಆಡಳಿತ ಮಂಡಳಿ ಮತ್ತು ನೌಕರರ ಸಂಘದ ಪ್ರತಿನಿಧಿಗಳು ಬುಧವಾರ ಪ್ರತ್ಯೇಕ ಪತ್ರಿಕಾಗೋಷ್ಠಿ ನಡೆಸಿ ತಮ್ಮ ನಿಲುವುಗಳನ್ನು ಪ್ರಕಟಿಸಿದ್ದಾರೆ.

'ಟೊಯೊಟಾ ವಿವಾದ ಬಗೆಹರಿಸಲು ರಾಜ್ಯ ಸರ್ಕಾರ ಹಾಗೂ ಕಾರ್ಮಿಕ ಇಲಾಖೆ ಮಧ್ಯಪ್ರವೇಶಿಸಲಿ' ಎಂದು ಕಾರ್ಮಿಕ ಸಂಘಟನೆ ಒತ್ತಾಯಿಸಿದೆ. ಮಾತುಕತೆ ಮೂಲಕ ಸಮಸ್ಯೆ ಇತ್ಯರ್ಥಗೊಳಿಸಲು ಸಿದ್ಧ ಎಂಬ ಸಂದೇಶ ರವಾನಿಸಿದೆ. 'ಶಿಸ್ತು ಉಲ್ಲಂಘಿಸಿದ

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

| Date | 26-11-2020 |
| --- | --- |
| Page No | 1 |

# ಬಿಬಿಎಂಪಿ ಚುನಾವಣೆ: ತೀರ್ಪು ಕಾಯ್ದಿರಿಸಿದ ಹೈಕೋರ್ಟ್

ಪ್ರಜಾವಾಣಿ ವಾರ್ತೆ



ಬೆಂಗಳೂರು: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ (ಬಿಬಿಎಂಪಿ) ತ್ವರಿತವಾಗಿ ಚುನಾವಣೆ ನಡೆಸುವಂತೆ ಕೋರಿ ಸಲ್ಲಿಸಲಾಗಿರುವ ಅರ್ಜಿಗಳ ವಿಚಾರಣೆಯನ್ನು ಬುಧವಾರ ಪೂರ್ಣಗೊಳಿಸಿರುವ ಹೈಕೋರ್ಟ್ ವಿಭಾಗೀಯ ಪೀಠ ತೀರ್ಪು ಕಾಯ್ದಿರಿಸಿದೆ.

ಮುಖ್ಯ ನ್ಯಾಯಮೂರ್ತಿ ಅಭಯ್ ಶ್ರೀನಿವಾಸ್ ಓಕಾ ನೇತೃತ್ವದ ವಿಭಾಗೀಯ ಪೀಠದಲ್ಲಿ ನಡೆದ ವಿಚಾರಣೆಯಲ್ಲಿ ರಾಜ್ಯ ಸರ್ಕಾರದ ಪರ ವಾದ ಮಂಡಿಸಿದ ಅಡ್ವೊಕೇಟ್ ಜನರಲ್ ಪ್ರಭುಲಿಂಗ ನಾವಡಗಿ, ಅರ್ಜಿದಾರರ ಪರ ವಕೀಲರು ಎತ್ತಿದ್ದ ಪ್ರಶ್ನೆಗಳಿಗೆ ಉತ್ತರಿಸಿದರು.

ಕರ್ನಾಟಕ ನಗರಾಡಳಿತ ಕಾಯ್ದೆ 1976ಕ್ಕೆ ತಂದಿರುವ ತಿದ್ದುಪಡಿಯ ಪ್ರಕಾರ, ಬಿಬಿಎಂಪಿ ವಾರ್ಡ್‌ಗಳ ಸಂಖ್ಯೆಯನ್ನು 198ರಿಂದ 243ಕ್ಕೆ ಹೆಚ್ಚಿಸಲಾಗುತ್ತಿದೆ. ವಿಧಾನಮಂಡಲ ರೂಪಿಸಿರುವ ಕಾಯ್ದೆಯ ಆಧಾರದಲ್ಲಿ ವಾರ್ಡ್‌ಗಳ ಮರುವಿಂಗಡಣೆ ಪ್ರಕ್ರಿಯೆ ಆರಂಭಿಸಲಾಗಿದೆ. ವಿಧಾನಮಂಡಲದಲ್ಲಿ ಹೊಸ ಕಾಯ್ದೆ ರೂಪಿಸಿದರೆ ಮಾತ್ರವೇ ಈ ಪ್ರಕ್ರಿಯೆಯನ್ನು ತಡೆಯಲು ಸಾಧ್ಯ. ಅಂತಹ ಯಾವ ಅವಕಾಶಗಳೂ ಈಗ ಇಲ್ಲ. ವಾರ್ಡ್‌ಗಳ ಮರುವಿಂಗಡಣೆಯಿಂದ ಯಾರದ್ದೇ ಮೂಲಭೂತ ಹಕ್ಕುಗಳಿಗೆ ಧಕ್ಕೆ ಆಗುವುದಿಲ್ಲ ಎಂದು ಅಡ್ವೊಕೇಟ್ ಜನರಲ್ ವಾದಿಸಿದರು.

ಸಕಾಲಕ್ಕೆ ಚುನಾವಣೆ ನಡೆಸಬೇಕೆಂಬ ಅರ್ಜಿದಾರರ ಬೇಡಿಕೆಯನ್ನು ರಾಜ್ಯ ಸರ್ಕಾರ ವಿರೋಧಿಸುವುದಿಲ್ಲ. ಆದರೆ, ಕೋವಿಡ್-19 ಕಾರಣದಿಂದಾಗಿ ಚುನಾವಣೆ ವಿಳಂಬವಾಗಿದೆ ಎಂದರು.

ಅಡ್ವೊಕೇಟ್ ಜನರಲ್ ವಾದವನ್ನು ವಿರೋಧಿಸಿದ ಅರ್ಜಿದಾರರ ಪರ ವಕೀಲರು, 'ವಾರ್ಡ್‌ಗಳ ಮರುವಿಂಗಡಣೆಯು ಚುನಾವಣೆಯ ವಿಳಂಬಕ್ಕೆ ಕಾರಣವಾಗಲಿದೆ. ಹೊಸದಾಗಿ ಮೀಸಲಾತಿ ನಿಗದಿ ಮಾಡಬೇಕಾಗುತ್ತದೆ. ಅದು ಚುನಾವಣೆ ಇನ್ನೂ ತಡವಾಗಲು ಕಾರಣವಾಗುತ್ತದೆ. 2021ರಲ್ಲಿ ಜನಗಣತಿ ಕೂಡ ನಡೆಯಲಿದೆ. ಇದರಿಂದಾಗಿ ಚುನಾವಣೆ ಮತ್ತಷ್ಟು ಕಾಲ ಮುಂದಕ್ಕೆ ಹೋಗುತ್ತದೆ' ಎಂದು ಹೇಳಿದರು.

ಪಾಲಿಕೆಗೆ ಶೀಘ್ರ ಚುನಾವಣೆ ನಡೆಸುವಂತೆ ಕೋರಿ ಪಾಲಿಕೆಯ ಮಾಜಿ ಸದಸ್ಯರಾದ ಎಂ.ಶಿವರಾಜ್ ಹಾಗೂ ಅಬ್ದುಲ್ ವಾಜಿದ್ ಅರ್ಜಿ ಸಲ್ಲಿಸಿದ್ದಾರೆ.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

| Date | 26-11-2020 |
|---|---|
| Page No | 2 |

### ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಕೋವಿಡ್ ನಿಯಂತ್ರಣಕ್ಕೆ ಸಿದ್ಧತೆ

# 25 ಲಕ್ಷ ಲಸಿಕೆ ಸಂಗ್ರಹಕ್ಕೆ ಸೌಕರ್ಯ ಸಜ್ಜು

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ನಗರದಲ್ಲಿ 25 ಲಕ್ಷ ಕೋವಿಡ್ ಲಸಿಕೆಯನ್ನು ಸಂಗ್ರಹಿಸುವುದಕ್ಕೆ ಅಗತ್ಯವಿರುವ ಮೂಲಸೌಕರ್ಯ ಸಜ್ಜುಗೊಳಿಸಲಾಗಿದೆ ಎಂದು ಬಿಬಿಎಂಪಿ ಆಯುಕ್ತ ಎನ್.ಮಂಜುನಾಥ ಪ್ರಸಾದ್ ತಿಳಿಸಿದರು.

'ಪಾಲಿಕೆಯಲ್ಲಿ ಐಸ್‌ಲೈನ್ಡ್ ರೆಫ್ರಿಜರೇಟರ್‌ಗಳು (ಐಎಲ್‌ಆರ್) ಹಾಗೂ ಡೀಪ್ ಫ್ರೀಜರ್‌ಗಳು ಸೇರಿ 330 ರೆಫ್ರಿಜರೇಟರ್‌ಗಳು ಲಭ್ಯ ಇವೆ. ಪ್ರತಿ ಐಎಲ್‌ಆರ್‌ನಲ್ಲಿ 50 ಸಾವಿರ ಲಸಿಕೆಗಳನ್ನು ಸಂಗ್ರಹಿಸಬಹುದು. ಇಂತಹ 44 ಈಎಲ್‌ಆರ್‌ಗಳು ಲಭ್ಯವಿದ್ದು, ಇವುಗಳಲ್ಲೇ 22 ಲಕ್ಷ ಲಸಿಕೆಗಳನ್ನು ಸಂಗ್ರಹಿಸಿಡ ಬಹುದು' ಎಂದು ಅವರು 'ಪ್ರಜಾವಾಣಿ'ಗೆ ತಿಳಿಸಿದರು.

'ಕೇಂದ್ರ ಸರ್ಕಾರದಿಂದ ಲಸಿಕೆಗಳನ್ನು ಹಂತ ಹಂತವಾಗಿ ಹಂಚಿಕೆ ಮಾಡಲಿದೆ. ಹಾಗಾಗಿ, ಲಸಿಕೆ ದಾಸ್ತಾನು ಮಾಡಲು ಈಗಿರುವ ಮೂಲಸೌಕರ್ಯ ಸಾಕಾಗಬಹುದು. ಒಂದು ವೇಳೆ ಸಾಕಾಗದಿದ್ದರೆ, ಇನ್ನಷ್ಟು ಐಎಲ್‌ಆರ್‌ಗಳನ್ನು ಖರೀದಿ ಮಾಡಲು ಸಿದ್ಧತೆ ಮಾಡಿಕೊಂಡಿದ್ದೇವೆ. ಜರ್ಮನಿ ಕಂಪನಿ ತಯಾರಿಸಿದ ಐಎಲ್‌ಆರ್‌ಗೆ ತಲಾ ₹ 3.5 ಲಕ್ಷ ದರವಿದೆ. ಲಸಿಕೆ ಸಂಗ್ರಹಕ್ಕೆ ಅಗತ್ಯವಿರುವ ಪರಿಕರಗಳನ್ನು ಕೇಂದ್ರ ಸರ್ಕಾರದ ಅಧೀನದ ಜೆಮ್ ಪೋರ್ಟಲ್‌ನಿಂದ ನೇರವಾಗಿ ಖರೀದಿಸಲು ಅವಕಾಶ ಇದೆ' ಎಂದರು.

'ಇಡೀ ಕೊಠಡಿಯನ್ನೇ ರೆಫ್ರಿಜರೇಟರ್ ಆಗಿ ಪರಿವರ್ತಿಸುವ ವಾಕಿಂಗ್ ಕೂಲರ್‌ಗಳು ಕೇಂದ್ರದಿಂದ ಮಂಜೂರಾಗಿವೆ. ಪಾಲಿಕೆಗೂ ಒಂದು ವಾಕಿಂಗ್ ಕೂಲರ್ ಲಭಿಸುವ ನಿರೀಕ್ಷೆ ಇದೆ. ಒಂದು ವೇಳೆ ಸರ್ಕಾರದಿಂದ ವಾಕಿಂಗ್ ಕೂಲರ್ ಮಂಜೂರಾಗದಿದ್ದರೂ, ಪಾಲಿಕೆ ವತಿಯಿಂದಲೇ ಅದನ್ನು ನಿರ್ಮಿಸಲಿದ್ದೇವೆ. ಅದನ್ನು ಸಜ್ಜುಗೊಳಿಸಲು ₹ 50 ಲಕ್ಷ ವೆಚ್ಚವಾಗಲಿದೆ' ಎಂದು ಅವರು ವಿವರಿಸಿದರು.

'ಕೋವಿಡ್ ಲಸಿಕೆ ನೀಡುವುದಕ್ಕೆ ಶುಶ್ರೂಷಕಿಯರು ಹಾಗೂ ಸಹಾಯಕ ಆರೋಗ್ಯ ಕಾರ್ಯಕರ್ತೆಯರು ಸೇರಿ 500 ಸಿಬ್ಬಂದಿ ಬಿಬಿಎಂಪಿಯಲ್ಲಿ ಲಭ್ಯ ಇದ್ದಾರೆ. ಅಗತ್ಯ ಬಿದ್ದರೆ ವೈದ್ಯಕೀಯ ಪದವಿಯ ಅಂತಿಮ ವರ್ಷದ ವಿದ್ಯಾರ್ಥಿಗಳು ಹಾಗೂ ಇಂಟರ್ನಿಗಳ ನೆರವು ಪಡೆಯಲಿದ್ದೇವೆ' ಎಂದು ತಿಳಿಸಿದರು.

'ಬಿಬಿಎಂಪಿಯು 2017ರಲ್ಲಿ ದಡಾರ (ಅಮ್ಮ) ವಿರುದ್ಧ ಸಾಮೂಹಿಕ ಲಸಿಕೆ ಅಭಿಯಾನವನ್ನು ಯಶಸ್ವಿಯಾಗಿ ನಿರ್ವಹಿಸಿದೆ. ಆಗ ಒಂದೇ ಕಂತಿನಲ್ಲಿ 23 ಲಕ್ಷ ಮಂದಿಗೆ ಲಸಿಕೆ ಹಾಕಲಾಗಿತ್ತು. ಹಾಗಾಗಿ ಕೋವಿಡ್ ಲಸಿಕೆ ನೀಡುವುದು ಕಷ್ಟವಾಗಲಿಕ್ಕಿಲ್ಲ' ಎಂದು ಅವರು ಅಭಿಪ್ರಾಯಪಟ್ಟರು.



### ನಗರದ ಕೋವಿಡ್ ಪ್ರಕರಣಗಳ ಅಂಕಿ–ಅಂಶ

**3,66,233** ಒಟ್ಟು ಸೋಂಕಿತರು

**3,43,771** ಗುಣಮುಖರಾದವರು

**18,360** ಸಕ್ರಿಯ ಪ್ರಕರಣ



**4,101** ಸಾವು

**ಬುಧವಾರದ ಏರಿಕೆ**

**916** ದೃಢಪಟ್ಟ ಪ್ರಕರಣ

**602** ಗುಣಮುಖ

**11** ಸಾವು

### ಬಿಬಿಎಂಪಿ: ಮೊದಲ ಹಂತದಲ್ಲಿ ಯಾರಿಗೆ ಲಸಿಕೆ?

| | |
|---|---|
| ಸರ್ಕಾರಿ ವೈದ್ಯಕೀಯ ಸಿಬ್ಬಂದಿ | 15,072 |
| ಮೇಲ್ವಿಚಾರಕರು, ಆಶಾ ಕಾರ್ಯಕರ್ತೆಯರು, ಆರೋಗ್ಯ ಸಹಾಯಕಿಯರು | 2,884 |
| ಖಾಸಗಿ ವೈದ್ಯಕೀಯ ಸಿಬ್ಬಂದಿ | 12,400 |
| ಖಾಸಗಿ ಅರೆ ವೈದ್ಯಕೀಯ ಮತ್ತು ನರ್ಸಿಂಗ್ ಕಾಲೇಜು ಸಿಬ್ಬಂದಿ | 64,555 |

### ಮೊದಲ ಹಂತ: 95 ಸಾವಿರ ಮಂದಿಗೆ ಲಸಿಕೆ

'ಮೊದಲ ಹಂತದಲ್ಲಿ ಯಾರಿಗೆ ಆದ್ಯತೆ ಮೇರೆಗೆ ಲಸಿಕೆ ನೀಡಬೇಕು ಎಂದು ಕೇಂದ್ರ ಸರ್ಕಾರ ಸೂಚಿಸಿದೆ. ಅಂತಹ ಒಟ್ಟು 95,011 ಮಂದಿಯನ್ನು ಬಿಬಿಎಂಪಿ ಇದುವರೆಗೆ ಗುರುತಿಸಿದೆ. ಈ ಸಂಖ್ಯೆ ಇನ್ನಷ್ಟು ಹೆಚ್ಚಳವಾಗುವ ಸಾಧ್ಯತೆ ಇದೆ' ಎಂದು ಆಯುಕ್ತರು ತಿಳಿಸಿದರು.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

| Date | 26-11-2020 |
|---|---|
| Page No | 2 |



## ಮಂಜಿನ ಹಾದಿ

ನಗರದಲ್ಲಿ ಬುಧವಾರ ಮುಂಜಾನೆ ಮಂಜು ಕವಿದ ಹಾದಿಯಲ್ಲಿ ಸಾಗಿದ ಮೆಟ್ರೊ ರೈಲು

ಪ್ರಜಾವಾಣಿ ಚಿತ್ರ: ಬಿ.ಎಚ್. ಶಿವಕುಮಾರ್

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

| Date | 26-11-2020 |
| --- | --- |
| Page No | 3A |


ಚಿಕ್ಕಪೇಟೆ, ಅವೆನ್ಯೂ ರಸ್ತೆ ಆಸುಪಾಸಿನ ಕಾಮಗಾರಿ ಪರಿಶೀಲನೆ

# ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಿ: ಸೂಚನೆ

ಪ್ರಜಾವಾಣಿ ವಾರ್ತೆ

ಬೆಂಗಳೂರು: ನಗರದ ಅವೆನ್ಯೂ ರಸ್ತೆ ಹಾಗೂ ಸುತ್ತಮುತ್ತಲಿನ ರಸ್ತೆಗಳಲ್ಲಿ ನಡೆಯುತ್ತಿರುವ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಸಂಸದ ಪಿ.ಸಿ. ಮೋಹನ್ ಹಾಗೂ ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತ ಅವರು ಬಿಬಿಎಂಪಿ, ಸ್ಮಾರ್ಟ್ ಸಿಟಿ ಸಂಸ್ಥೆ ಹಾಗೂ ಜಲಮಂಡಳಿ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಅವೆನ್ಯೂ ರಸ್ತೆಯ ಬಳಿ ನಡೆಯುತ್ತಿರುವ ಕಾಮಗಾರಿಗಳನ್ನು ಪಿ.ಸಿ.ಮೋಹನ್ ಹಾಗೂ ಗೌರವ್ ಗುಪ್ತ ಬುಧವಾರ ಪರಿಶೀಲಿಸಿದರು. ಬಿಬಿಎಂಪಿಯ ವಿಶೇಷ ಆಯುಕ್ತರಾದ ಬಸವರಾಜು, ತುಳಸಿ ಮದ್ದಿನೇನಿ, ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಎಂ.ಆರ್.ವೆಂಕಟೇಶ್, ಪಶ್ಚಿಮ ವಲಯದ ಜಂಟಿ ಆಯುಕ್ತ ಚಿದಾನಂದ, ದಕ್ಷಿಣ ವಲಯದ ಜಂಟಿ ಆಯುಕ್ತ ವೀರಭದ್ರಸ್ವಾಮಿ ಹಾಗೂ ಜಲಮಂಡಳಿ (ಪಶ್ಚಿಮ) ಮುಖ್ಯ ಎಂಜಿನಿಯರ್ ದೇವರಾಜ್ ಇದ್ದರು.

## ಎಸ್‌ಜೆಪಿ ರಸ್ತೆ ಕಾಮಗಾರಿ– ಕಾರ್ಯಸಾಧ್ಯತೆ ಪರಿಶೀಲನೆ

ಎಸ್‌ಜೆಪಿ ರಸ್ತೆಯನ್ನು ಸಹ ಸ್ಮಾರ್ಟ್ ಸಿಟಿ ಯೋಜನೆಯಡಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. ಈ ಕಾಮಗಾರಿ ಅನುಷ್ಠಾನ ವಾಸ್ತವದಲ್ಲಿ ಸಾಧ್ಯವೇ ಎಂಬ ಕಾರ್ಯಸಾಧ್ಯತಾ ವರದಿ ತಯಾರಿಸಲು ಆಡಳಿತಾಧಿಕಾರಿ ಸೂಚಿಸಿದರು.

ಚಿಕ್ಕಪೇಟೆ ವ್ಯಾಪ್ತಿಯ ಅವೆನ್ಯೂ ರಸ್ತೆಯನ್ನು ಸ್ಮಾರ್ಟ್ ಸಿಟಿ ಯೋಜನೆಯಡಿ ಅಭಿವೃದ್ಧಿ ಪಡಿಸಲಾಗುತ್ತಿದೆ. ಇಲ್ಲಿ ಜಲಮಂಡಳಿ ವತಿಯಿಂದ ಒಳಚರಂಡಿ ಕಾಮಗಾರಿ ಪೂರ್ಣಗೊಳಿಸಿದ್ದು, ತಾತ್ಕಾಲಿಕವಾಗಿ ಡಾಂಬರೀಕರಣ ಮಾಡಲಾಗಿದೆ. ಗುಂಡಪ್ಪ ಸ್ಟ್ರೀಟ್, ಮಾಮೂಲ್ ಪೇಟೆ, ಹಳೆ ತರಗುಪೇಟೆ, ಸುಲ್ತಾನ್‌ಪೇಟೆ, ಒ.ಟಿ.ಸಿ ರಸ್ತೆ, ಅಕ್ಕಿಪೇಟೆ ಹಾಗೂ ಬಳೆಪೇಟೆ ಸೇರಿದಂತೆ ಹಲವು ಕಡೆ, ಅಗೆದ ರಸ್ತೆಗಳನ್ನು ಜಲಮಂಡಳಿಯೇ ದುರಸ್ತಿ ಮಾಡಿದೆ. ಇನ್ನೂ ಕೆಲವು ರಸ್ತೆಗಳಲ್ಲಿ ದುರಸ್ತಿ ಕಾಮಗಾರಿ ಬಾಕಿ ಇದೆ. ಅರೆಬರೆ ಕಾಮಗಾರಿಗಳಿಂದಾಗಿ ಇಲ್ಲಿ ಜನರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ 'ಪ್ರಜಾವಾಣಿ'ಯ ನ.19ರ ಸಂಚಿಕೆಯಲ್ಲಿ 'ಅವೆನ್ಯೂ ರಸ್ತೆ ಅವ್ಯವಸ್ಥೆ' ಶೀರ್ಷಿಕೆಯಲ್ಲಿ ವಿಶೇಷ ವರದಿ ಪ್ರಕಟಿಸಿತ್ತು.

ಈ ಪ್ರದೇಶದ ಕಾಮಗಾರಿಗಳನ್ನು ಸಂಸದ ಹಾಗೂ ಆಡಳಿತಾಧಿಕಾರಿ ಬುಧವಾರ ಪರಿಶೀಲಿಸಿದರು. ರಸ್ತೆ ಅಗೆದಿರುವ ಕಡೆ ಶೀಘ್ರವೇ ಕಾಂಕ್ರೀಟೀಕರಣ ಅಥವಾ ಡಾಂಬರೀಕರಣ ಕಾಮಗಾರಿ ಕೈಗೆತ್ತಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮಾಮೂಲ್ ಪೇಟೆ ಮುಖ್ಯರಸ್ತೆಯಲ್ಲಿ ಜಲಮಂಡಳಿಯು ಒಳಚರಂಡಿ ಕೊಳವೆ ಅಳವಡಿಸಲು ರಸ್ತೆ ಅಗೆದಿರುವ ಪರಿಣಾಮ ವಾಹನಗಳ ಓಡಾಟಕ್ಕೆ ತೀರಾ ಸಮಸ್ಯೆ ಆಗುತ್ತಿದೆ. ಮಳೆ ಬಂದಾಗ ರಸ್ತೆಯಲ್ಲೇ ನೀರು ನಿಲ್ಲುತ್ತದೆ ಎಂದು ಸ್ಥಳೀಯ ವ್ಯಾಪಾರಿಗಳು ದೂರಿದರು.

'ರಸ್ತೆ ಇಕ್ಕೆಲಗಳ ಚರಂಡಿಗಳಲ್ಲಿ ಹೂಳೆತ್ತದೆ ಸಮಸ್ಯೆ ಎದುರಾಗಿದೆ. ಹೂಳೆತ್ತಿದರೆ ಸಮಸ್ಯೆ ನಿವಾರಣೆಯಾಗಲಿದೆ' ಎಂದು ಸಂಸದರು ತಿಳಿಸಿದರು.

ಚಿಕ್ಕಪೇಟೆ, ಅವೆನ್ಯೂ ರಸ್ತೆ ಪ್ರದೇಶಗಳ ಮೋರಿಗಳ ಹೂಳೆತ್ತಿ, ಮಳೆನೀರು ಸರಾಗವಾಗಿ ಹರಿಯುವಂತೆ ಕ್ರಮವಹಿಸಬೇಕು. ಮಳೆನೀರು ಚರಂಡಿ ಮತ್ತು ರಾಜಕಾಲುವೆಗಳನ್ನು ವೈಜ್ಞಾನಿಕವಾಗಿ ಜೋಡಣೆ ಮಾಡಬೇಕು. ನೀರು ಮತ್ತು ಕೊಳಚೆ ನೀರಿನ ಕೊಳವೆಗಳ ಸಂಪರ್ಕ ಎಲ್ಲೆಲ್ಲಿ ಕಡಿತಗೊಂಡಿದೆ, ಯಾವ ಭಾಗದಲ್ಲಿ ಕೊಳವೆಗಳು ಬ್ಲಾಕ್ ಆಗಿವೆ ಎಂಬುದನ್ನು ಜಿಐಎಸ್ ನಕ್ಷೆ ಆಧಾರದಲ್ಲಿ ಗುರುತಿಸಬೇಕು. ಇಲ್ಲಿಗೆ ಎಷ್ಟು ಸಾಮರ್ಥ್ಯದ ಕೊಳವೆಗಳ ಅಗತ್ಯವಿದೆ ಎಂಬ ಕುರಿತ ಸಮಗ್ರ ವಿವರ ಸಿದ್ಧಪಡಿಸಿ, ಹಂತ-ಹಂತವಾಗಿ ಕಾಮಗಾರಿಗಳನ್ನು ಕೈಗೊಳ್ಳಬೇಕು. ನೀರು ಕಟ್ಟಿಕೊಳ್ಳುವ ಸ್ಥಳಗಳನ್ನು ಜೆಟ್ಟಿಂಗ್ ಯಂತ್ರದ ಮೂಲಕ ಸರಿಪಡಿಸಬೇಕು. ಮ್ಯಾನ್‌ಹೋಲ್‌ಗಳಿಗೆ ಮಳೆ ನೀರು ನುಗ್ಗದಂತೆ ಕ್ರಮವಹಿಸಬೇಕು ಎಂದು ಎಂದು ಆಡಳಿತಾಧಿಕಾರಿ ಸಲಹೆ ನೀಡಿದರು.

ಸುಲ್ತಾನ್‌ಪೇಟೆ ಮುಖ್ಯ ರಸ್ತೆಯಲ್ಲಿ 300 ಎಂ.ಎಂ. ಸುತ್ತಳತೆಯ ಒಳಚರಂಡಿ ಕೊಳವೆಗಳಗಳನ್ನು ರಸ್ತೆಯಲ್ಲೇ ಹಾಕಲಾಗಿದೆ. ಇದರಿಂದ ವಾಹನ ಸವಾರರಿಗೆ ಸಮಸ್ಯೆಯಾಗುತ್ತಿರುವುದನ್ನು ಗಮನಿಸಿದ ಆಡಳಿತಾಧಿಕಾರಿ, 'ಕೊಳವೆಗಳನ್ನು ಬೇರೆಡೆ ಸ್ಥಳಾಂತರಿಸಿ' ಎಂದು ಜಲಮಂಡಳಿ ಅಧಿಕಾರಿಗಳಿಗೆ ಸೂಚಿಸಿದರು.

ಅವೆನ್ಯೂ ರಸ್ತೆ (1 ಕಿ.ಮೀ ಉದ್ದ) ಅಭಿವೃದ್ಧಿ ಕಾಮಗಾರಿಯನ್ನು ಕೂಡಲೇ ಕೈಗೆತ್ತಿಕೊಳ್ಳುವ ಸಲುವಾಗಿ ವಾಹನ ಸವಾರರಿಗೆ ಬದಲಿ ರಸ್ತೆಯನ್ನು ಗುರುತಿಸಬೇಕು. ಅವಶ್ಯವಿದ್ದಲ್ಲಿ ವಿನ್ಯಾಸ ಮಾರ್ಪಡಿಸಿ ವಾರದೊಳಗೆ ಸಮಗ್ರ ಮಾಹಿತಿ ನೀಡಬೇಕು ಎಂದು ಸ್ಮಾರ್ಟ್ ಸಿಟಿ ಮುಖ್ಯ ಎಂಜಿನಿಯರ್ ರಂಗನಾಥ್ ನಾಯ್ಕ್ ಅವರಿಗೆ ಆಡಳಿತಾಧಿಕಾರಿ ನಿರ್ದೇಶನ ನೀಡಿದರು.

| Date | 26-11-2020 |
|---|---|
| Page No | 4 |

# ನ.30ರಿಂದ ಡಿ.5ರವರೆಗೆ ಸಕಾಲ ಸಪ್ತಾಹ ಆಚರಣೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬಿಬಿಎಂಪಿ ವ್ಯಾಪ್ತಿಯಲ್ಲಿ ಸಕಾಲ ಸೇವೆ ನೀಡುವ ಎಲ್ಲ ಕಚೇರಿಗಳಲ್ಲಿ ನ.30ರಿಂದ ಡಿ.5ರ ವರೆಗೆ ಸಕಾಲ ಸಪ್ತಾಹ ಆಚರಿಸುವಂತೆ ಬಿಬಿಎಂಪಿ ಆಡಳಿತ ವಿಭಾಗದ ವಿಶೇಷ ಆಯುಕ್ತ ಜೆ.ಮಂಜುನಾಥ್ ಆದೇಶಿಸಿದ್ದಾರೆ. ನಗರಾಭಿವೃದ್ಧಿ ಪ್ರಧಾನ ಕಾರ್ಯದರ್ಶಿ ಸೂಚನೆಯ ಮೇರೆಗೆ ಬಿಬಿಎಂಪಿಯಲ್ಲಿ ಸಕಾಲ ಸೇವೆಯನ್ನು ಒದಗಿಸುತ್ತಿರುವ ಕಂದಾಯ ಇಲಾಖೆ, ಕಾಮಗಾರಿ ಇಲಾಖೆ, ಆರೋಗ್ಯ ಇಲಾಖೆ, ಯೋಜನೆ ಇಲಾಖೆ ಹಾಗೂ ಅರಣ್ಯ ಇಲಾಖೆಗಳಲ್ಲಿ ನ.30ರಿಂದ ಡಿ.5ರ ವರೆಗೆ ಸಕಾಲ ಸಪ್ತಾಹ ನಡೆಸುವಂತೆ ಸೂಚಿಸಲಾಗಿದೆ. ಸಪ್ತಾಹದಲ್ಲಿ ಸಕಾಲದಡಿ ಸ್ವೀಕರಿಸಿದ ಅರ್ಜಿಗಳನ್ನು ಕಾಲಮಿತಿಯಲ್ಲಿ ವಿಲೇವಾರಿ ಮಾಡಿ, ಸಕಾಲದಡಿ ಸ್ವೀಕರಿಸಿ ಬಾಕಿ ಉಳಿದ ಅರ್ಜಿಗಳನ್ನು ವಿಲೇವಾರಿ ಮಾಡಿ. ಸಕಾಲದ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಿ ಎಂದು ಸೂಚಿಸಿದ್ದಾರೆ.

ಕನ್ನಡಪ್ರಭ

| Date | 26-11-2020 |
|---|---|
| Page No | 4 |

# ಪಾಲಿಕೆ ಚುನಾವಣೆ: ತೀರ್ಪು ಕಾಯ್ದಿರಿಸಿದ ಹೈಕೋರ್ಟ್

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬಿಬಿಎಂಪಿಗೆ ಪಾಲಿಕೆಗೆ ಶೀಘ್ರ ಚುನಾವಣೆ ನಡೆಸಲು ಆದೇಶಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿಗಳ ವಿಚಾರಣೆ ಪೂರ್ಣಗೊಳಿಸಿರುವ ಹೈಕೋರ್ಟ್ ತೀರ್ಪು ಕಾಯ್ದಿರಿಸಿದೆ.

ಕಾಂಗ್ರೆಸ್ ಪಕ್ಷದ ಪಾಲಿಕೆಯ ಮಾಜಿ ಸದಸ್ಯ ಎಂ.ಶಿವರಾಜು ಮತ್ತಿತರರ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳ ಸಂಬಂಧ ಅರ್ಜಿದಾರ ಮತ್ತು ಸರ್ಕಾರದ ಪರ ವಕೀಲರ ವಾದ-ಪ್ರತಿವಾದ ಆಲಿಸಿದ ಮುಖ್ಯ ನ್ಯಾಯಮೂರ್ತಿ ಎ.ಎಸ್.ಓಕ ನೇತೃತ್ವದ ವಿಭಾಗೀಯ ಪೀಠ ತೀರ್ಪು ಕಾಯ್ದಿರಿಸಿತು. ಸರ್ಕಾರದ ಪರ ಅಡ್ವೋಕೇಟ್ ಜನರಲ್ ಪ್ರಭುಲಿಂಗ ಕೆ.ನಾವದಗಿ, ಸರ್ಕಾರಕ್ಕೆ ಚುನಾವಣೆ ಮುಂದೂಡುವ ಯಾವುದೇ ಉದ್ದೇಶವಿಲ್ಲ, ಬಿಬಿಎಂಪಿ ವಿಸ್ತಾರವಾಗಿ ಬೆಳೆದಿದೆ. ಹೀಗಾಗಿ, ಬಿಬಿಎಂಪಿಯ ವಾರ್ಡ್‌ಗಳನ್ನು ಮರುವಿಂಗಡಣೆ ಮಾಡುವ ಅಗತ್ಯವಿದೆ. ಆ ಕಾರ್ಯ ಪೂರ್ಣಗೊಳಿಸಿ ಚುನಾವಣೆ ನಡೆಸಲಾಗುವುದು ಎಂದು ತಿಳಿಸಿದರು.

ಅರ್ಜಿದಾರರ ಪರ ವಕೀಲರು, ಚುನಾವಣೆ ಮುಂದೂಡುವ ಅಧಿಕಾರ ಸರ್ಕಾರಕ್ಕೆ ಇಲ್ಲ, ಚುನಾಯಿತ ಅವಧಿಗೆ ಮುನ್ನ ಚುನಾವಣೆ ನಡೆಸುವುದು ಚುನಾವಣಾ ಆಯೋಗದ ಸಾಂವಿಧಾನಿಕ ಕರ್ತವ್ಯ. ಈ ವಿಚಾರದಲ್ಲಿ ಸರ್ಕಾರಕ್ಕೆ ಯಾವುದೇ ಪಾತ್ರವಿಲ್ಲ, ಚುನಾವಣೆ ನಡೆಸುವಂತೆ ಆಯೋಗಕ್ಕೆ ಆದೇಶಿಸಬೇಕು ಎಂದು ಕೋರಿದರು.

ಕನ್ನಡಪ್ರಭ

| Date | 26-11-2020 |
| --- | --- |
| Page No | 4 |


# ಸೋಂಕಿಗೆ ಬಲಿ ಆದವರ ಸಂಖ್ಯೆ 4100ಕ್ಕೆ ಏರಿಕೆ

ಬೆಂಗಳೂರು: ರಾಜಧಾನಿ ಬೆಂಗಳೂರಿನಲ್ಲಿ ಬುಧವಾರ ಕೊರೋನಾ ಸೋಂಕಿನಿಂದ 11 ಮಂದಿ ಮೃತಪಟ್ಟ ವರದಿಯಾಗಿದ್ದು, ಒಟ್ಟು ಮೃತರ ಸಂಖ್ಯೆ 4,101ಕ್ಕೆ ಏರಿಕೆಯಾಗಿದೆ. ಬುಧವಾರ ಮೃತಪಟ್ಟ 11 ಮಂದಿಯ ಪೈಕಿ 9 ಪುರುಷರು ಹಾಗೂ ಇಬ್ಬರು ಮಹಿಳೆಯರಾಗಿದ್ದಾರೆ. ಈವರೆಗೆ ನಗರದಲ್ಲಿ ಮೃತಪಟ್ಟ 4,101 ಮಂದಿಯ ಪೈಕಿ 2,671 ಪುರುಷರು, 1,427 ಮಹಿಳೆಯರು ಹಾಗೂ ಮೂವರು ಲೈಂಗಿಕ ಅಲ್ಪಸಂಖ್ಯಾತರಾಗಿದ್ದಾರೆ. ಬುಧವಾರ ನಗರದಲ್ಲಿ 912 ಹೊಸ ಸೋಂಕು ಪ್ರಕರಣ ಪತ್ತೆಯಾಗಿದ್ದು, ಈ ಮೂಲಕ ಸತತ ಮೂರು ದಿನ ಒಂದು ಸಾವಿರಕ್ಕಿಂತ ಕಡಿಮೆ ಸೋಂಕು ಪತ್ತೆಯಾದಂತಾಗಿದೆ. ಒಟ್ಟು ಸೋಂಕಿತರ ಸಂಖ್ಯೆ 3,66,233 ತಲುಪಿದೆ. ಬುಧವಾರ 602 ಮಂದಿ ಗುಣಮುಖರಾಗಿ ಬಿಡುಗಡೆಯಾಗಿದ್ದು, ಒಟ್ಟು ಸಂಖ್ಯೆ 3,43,771ಕ್ಕೆ ಏರಿಕೆಯಾಗಿದೆ. ಇನ್ನೂ 18,360 ಸಕ್ರಿಯ ಪ್ರಕರಣಗಳಿದ್ದು, 202 ಮಂದಿ ವಿವಿಧ ಆಸ್ಪತ್ರೆಯ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಆರೋಗ್ಯ ಇಲಾಖೆ ಮಾಹಿತಿ ನೀಡಿದೆ.

ಕನ್ನಡಪ್ರಭ

| Date | 26-11-2020 |
| --- | --- |
| Page No | 4 |

**ಪರಿಶೀಲನೆ** ಸ್ಮಾರ್ಟ್ ಸಿಟಿ ಯೋಜನೆ ಎಂಜಿನಿಯರ್‌ಗೆ ವರದಿ ನೀಡಲು 1 ವಾರ ಗಡುವು: ಗೌರವ್ ಗುಪ್ತಾ

# ‘ಅವೆನ್ಯೂ ರಸ್ತೆ 1 ಕಿ.ಮೀ. ಅಭಿವೃದ್ಧಿಗೆ ವರದಿ ಸಿದ್ಧಪಡಿಸಿ’

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಸ್ಮಾರ್ಟ್ ಸಿಟಿ ಯೋಜನೆಯಡಿ ನಗರದ ಅವೆನ್ಯೂ ಮುಖ್ಯರಸ್ತೆಯನ್ನು (ಒಂದು ಕಿ.ಮೀ ವ್ಯಾಪ್ತಿಯಷ್ಟು) ಅಭಿವೃದ್ಧಿಗೆ ವಾರದೊಳಗೆ ಯೋಜನಾ ವರದಿ ಸಿದ್ಧಪಡಿಸಿ ಸಲ್ಲಿಸುವಂತೆ ಸ್ಮಾರ್ಟ್ ಸಿಟಿ ಯೋಜನೆಯ ಮುಖ್ಯ ಎಂಜಿನಿಯರ್‌ಗೆ ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತಾ ಸೂಚಿಸಿದ್ದಾರೆ.

ಬುಧವಾರ ಸಂಸದ ಪಿ.ಸಿ. ಮೋಹನ್ ಹಾಗೂ ಆಡಳಿತಾಧಿಕಾರಿ ಗೌರವ್ ಗುಪ್ತಾ ಜಂಟಿಯಾಗಿ ನಗರದ ಅವೆನ್ಯೂ ಮುಖ್ಯರಸ್ತೆ, ಗುಂಡಪ್ಪ ರಸ್ತೆ, ಮಾಮೂಲ್ ಪೇಟೆ, ಹಳೇ ತರಗುಪೇಟೆ, ಸುಲ್ತಾನ್‌ಪೇಟೆ, ಓಟಿಸಿ ರಸ್ತೆ, ಅಕ್ಕಿಪೇಟೆ ಹಾಗೂ ಬಳೆಪೇಟೆ ಸೇರಿದಂತೆ ಹಲವು ರಸ್ತೆಗಳನ್ನು ಕಾಲ್ನಡಿಗೆಯಲ್ಲಿ ಪರಿಶೀಲನೆ ನಡೆಸಿದರು.

ಈ ವೇಳೆ ಅವೆನ್ಯೂ ಮುಖ್ಯ ರಸ್ತೆಯ (ಒಂದು ಕಿ.ಮೀ) ಅಭಿವೃದ್ಧಿಗೆ ಯೋಜನಾ ವರದಿ ಜತೆಗೆ ವಾಹನ ಸಂಚಾರಕ್ಕೆ ಬದಲಿ ಮಾರ್ಗದ ಗುರುತಿಸಿ ವಾರದಲ್ಲಿ ಸಲ್ಲಿಕೆ ಮಾಡಬೇಕು. ನಿಗದಿತ ಅವಧಿಯಲ್ಲಿ ಯೋಜನೆ ಪೂರ್ಣಗೊಳಿಸಲು ಕಾರ್ಯ ಯೋಜನೆ ರೂಪಿಸಿ. ಜತೆಗೆ ಸಿಲ್ವರ್ ಜೂಬ್ಲಿ ಪಾರ್ಕ್ ರಸ್ತೆಯನ್ನು (ಎಸ್‌ಜೆಪಿ) ಸ್ಮಾರ್ಟ್ ಸಿಟಿ ಯೋಜನೆಯಡಿ ಅಭಿವೃದ್ಧಿ ಪಡಿಸಲು ಸಾಧ್ಯವೇ ಎಂಬುದರ ಬಗ್ಗೆ ಸಾಧ್ಯತಾ ವರದಿ ಸಲ್ಲಿಸುವಂತೆ ಸ್ಮಾರ್ಟ್ ಸಿಟಿ ಯೋಜನೆಯ ಮುಖ್ಯ ಎಂಜಿನಿಯರ್‌ಗೆ ಆಡಳಿತಾಧಿಕಾರಿ ಗೌರವ್ ಗುಪ್ತಾ ನಿರ್ದೇಶನ ನೀಡಿದರು.



ಸಂಸದ ಪಿ.ಸಿ.ಮೋಹನ್, ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತಾ ಅವರು ನಗರದ ಅವೆನ್ಯೂ ಮುಖ್ಯರಸ್ತೆಯಲ್ಲಿ ವಿವಿಧ ಕಾಮಗಾರಿಗಳನ್ನು ಪರಿಶೀಲಿಸಿದರು.

**ಸ್ಥಳೀಯರಿಂದ ದೂರು:** ಈ ಮಾಮೂಲ್ ಪೇಟೆ ಮುಖ್ಯರಸ್ತೆಯಲ್ಲಿ ಜಲಮಂಡಳಿಯ ಒಳಚರಂಡಿ ಕೊಳವೆ ಅಳವಡಿಕೆಗೆ ರಸ್ತೆ ಅಗೆದಿರುವುದರಿಂದ ವಾಹನಸಂಚಾರಕ್ಕೆತೀವ್ರತೊಂದರೆಉಂಟಾಗುತ್ತಿದೆ ಎಂದು ಸ್ಥಳೀಯರು ದೂರಿದರು.

ಅದಕ್ಕೆ ಪ್ರತಿಕ್ರಿಯೆ ನೀಡಿದ ಸಂಸದ ಪಿ.ಸಿ.ಮೋಹನ್, ರಸ್ತೆಯ ಬದಿಯಲ್ಲಿ ಕಸ ಸುರಿದ ಹಾಗೂ ಹೂಳು ಸುರಿದ ಪರಿಣಾಮ ತೊಂದರೆ ಉಂಟಾಗುತ್ತಿದೆ. ಕೂಡಲೇ ತೆರವುಗೊಳಿಸಲು ಕ್ರಮ ವಹಿಸುವಂತೆ ವಲಯ ಜಂಟಿ ಆಯುಕ್ತರು ಮತ್ತು ಮುಖ್ಯ ಎಂಜಿನಿಯರ್‌ಗೆ ಸೂಚಿಸಿದರು.

ಜಲಮಂಡಳಿ ನೀರು ಮತ್ತು ಕೊಳಚೆ ನೀರಿನ ಕೊಳವೆ ಅಳವಡಿಕೆಗೆ ಹಲವು ಕಡೆ ರಸ್ತೆ ಅಗೆದು ಹಾಕಲಾಗಿದೆ. ಇದರಿಂದ ರಸ್ತೆ ಗುಂಡಿ ಬಿದ್ದು ವಾಹನ ಸಂಚಾರ ತೊಂದರೆ ಆಗುತ್ತಿದೆ. ಸುಲ್ತಾನ್ ಪೇಟೆ ಮುಖ್ಯರಸ್ತೆಯಲ್ಲಿ ಬೃಹತ್ ಗಾತ್ರದ ಸ್ಯಾನಿಟರಿ ಕೊಳವೆ ರಸ್ತೆ ಮಾರ್ಗದಲ್ಲಿ ಹಾಕಿರುವುದರಿಂದ ವಾಹನ ಸವಾರರಿಗೆ ತೊಂದರೆ ಆಗುತ್ತಿದೆ. ಕೂಡಲೇ ಕ್ರಮ ವಹಿಸುವಂತೆ ಆಡಳಿತಾಧಿಕಾರಿ ಜಲಮಂಡಳಿ ಅಧಿಕಾರಿಗಳಿಗೆ ನಿರ್ದೇಶಿಸಿದರು.

ಮಳೆಗಾಲದಲ್ಲಿ ಮ್ಯಾನ್ ಹೋಲ್‌ಗಳಲ್ಲಿ ನೀರು ರಸ್ತೆಗೆ ಹರಿದು ತೊಂದರೆ ಉಂಟಾಗುತ್ತಿದೆ. ಮಳೆ ನೀರು ಕಾಲುವೆಗಳಲ್ಲಿ ಹೂಳು ತುಂಬಿಕೊಂಡಿದ್ದು, ಹೂಳು ತೆಗೆಯುವಂತೆ ಅಧಿಕಾರಿಗಳಿಗೆ ಸೂಚಿಸಿದರು. ತಪಾಸಣೆ ವೇಳೆ ವಿಶೇಷ ಆಯುಕ್ತರಾದ ಬಸವರಾಜು, ತುಳಸಿ ಮದ್ದಿನೇನಿ, ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಎಂ.ಆರ್.ವೆಂಕಟೇಶ್, ವಲಯ ಜಂಟಿ ಆಯುಕ್ತರಾದ ಚಿದಾನಂದ, ವೀರಭದ್ರಸ್ವಾಮಿ, ಸ್ಮಾರ್ಟ್ ಸಿಟಿ ಮುಖ್ಯ ಎಂಜಿನಿಯರ್ ರಂಗನಾಥ್ ನಾಯ್ಕ್, ಜಲಮಂಡಳಿ(ಪಶ್ಚಿಮ) ಮುಖ್ಯ ಎಂಜಿನಿಯರ್ ದೇವರಾಜ್ ಸೇರಿದಂತೆ ಮೊದಲಾದವರು ಇದ್ದರು.

ಕನ್ನಡಪ್ರಭ

| Date | 26-11-2020 |
| --- | --- |
| Page No | 4 |

# ‘ನಗರದಲ್ಲಿ ಕೊರಿಯಾ ಕಾನ್ಸುಲ್ ಕಚೇರಿ ಆರಂಭಕ್ಕೆ ಅವಕಾಶ ನೀಡಿ’

## ಬಿಬಿಎಂಪಿ ಆಯುಕ್ತರೊಂದಿಗೆ ಕೊರಿಯಾ ಕಾನ್ಸುಲರ್ ಚರ್ಚೆ



• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬೆಂಗಳೂರು ನಗರದಲ್ಲಿ ಕೊರಿಯಾ ಕಾನ್ಸುಲ್ ಜನರಲ್ ಕಚೇರಿ ಆರಂಭಿಸುವ ಕುರಿತು ಚೆನ್ನೈ ಕಾನ್ಸುಲ್ ಜನರಲ್ ಹೋಂಗ್-ಯೂಪ್ ಲೀ ಅವರು ಬಿಬಿಎಂಪಿ ಆಯುಕ್ತ ಎನ್. ಮಂಜುನಾಥ ಪ್ರಸಾದ್ ಅವರೊಂದಿಗೆ ಬುಧವಾರ ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ಚರ್ಚೆ ನಡೆಸಿದರು.

ಪಾಲಿಕೆ ಕೇಂದ್ರ ಕಚೇರಿಗೆ ಬುಧವಾರ ಭೇಟಿ ಮಾಡಿದ ಹೋಂಗ್ ಯೂಪ್ ಲೀ ಅವರು, ಬೆಂಗಳೂರಿನಲ್ಲಿ ಒಂದು ಸಾವಿರಕ್ಕೂ ಅಧಿಕ ಕೊರಿಯಾ ಪ್ರಜೆಗಳಿದ್ದಾರೆ. ಜತೆಗೆ, ಪ್ರತಿವರ್ಷ ಭಾರತದಿಂದ ಕೊರಿಯಾಗೆ ಹೋಗುವ ನಾಗರಿಕರಲ್ಲಿ ಶೇ.30ಕ್ಕೂ ಅಧಿಕ ಬೆಂಗಳೂರಿನವರಾಗಿದ್ದಾರೆ. ಹೀಗಾಗಿ, ಬೆಂಗಳೂರು ಮತ್ತು ಕೊರಿಯಾ ನಡುವೆ ಬಾಂಧವ್ಯ ಹೆಚ್ಚಳ ಮಾಡಲು, ಪ್ರಜೆಗಳಿಗೆ ಸೌಕರ್ಯ ಒದಗಿಸಲು ನಗರದಲ್ಲಿ ಕಾನ್ಸುಲ್ ಜನರಲ್ ಕಚೇರಿ ತೆರೆಯಲು ಅವಕಾಶ ನೀಡುವಂತೆ ಬಿಬಿಎಂಪಿ ಆಯುಕ್ತರಿಗೆ ಮನವಿ ಮಾಡಿದ್ದಾರೆ.

ಕೊರಿಯಾ ಮೂಲದ 49 ಕಂಪನಿಗಳು ನಗರದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಅವುಗಳ ನಿರ್ವಹಣೆ ಮತ್ತು ತಂತ್ರಜ್ಞಾನ ಅಭಿವೃದ್ಧಿ ಸಂಬಂಧ ಎರಡೂ ದೇಶಗಳ ಪ್ರಜೆಗಳ ಸಂಚಾರ ಅಗತ್ಯವಾಗಿದೆ. ಕೊರಿಯಾಕ್ಕೆ ಹೋಗಲು ವೀಸಾ ಪಡೆಯುವುದು, ಅದಕ್ಕೆ ಅನುಮತಿ, ಸಹಾಯವಾಣಿ ಸೇರಿ ಎಲ್ಲ ಕಾರ್ಯಕ್ಕೂ ಕಚೇರಿ ನೆರವಾಗಲಿದೆ. ಹೀಗಾಗಿ, ಚೆನ್ನೈ ನಲ್ಲಿರುವ ಕಾನ್ಸುಲ್ ಜನರಲ್ ಮಾದರಿಯಲ್ಲಿ, ಬೆಂಗಳೂರಿನಲ್ಲಿಯೂ ಕಚೇರಿ ತೆರೆಯಲು ಅವಕಾಶ ನೀಡುವಂತೆ ಮನವಿ ಮಾಡಿದ್ದಾರೆ ಎಂದು ಆಯುಕ್ತ ಮಂಜುನಾಥ್ ಪ್ರಸಾದ್ ಮಾಹಿತಿ ನೀಡಿದ್ದಾರೆ. ಬಿಬಿಎಂಪಿ ಘನತ್ಯಾಜ್ಯ ವಿಭಾಗದ ವಿಶೇಷ ಆಯುಕ್ತ ಡಿ. ರಂದೀಪ್ ಇದ್ದರು.

ವಿಜಯ ಕರ್ನಾಟಕ

| Date | 26-11-2020 |
| --- | --- |
| Page No | 7 |

ಮರುವಿಂಗಡಣೆ ಕಾಯಿದೆ ಕಾರಣಕ್ಕೆ ಎಲೆಕ್ಷನ್ ಮುಂದೂಡಿಕೆ ಸರಿಯಲ್ಲ ಎಂದ ಕೋರ್ಟ್

# ಕ್ಲೈಮ್ಯಾಕ್ಸ್‌ನಲ್ಲಿ ಪಾಲಿಕೆ ಚುನಾವಣೆ

■ **ವಿಕ ಸುದ್ದಿಲೋಕ** ಬೆಂಗಳೂರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ಮರು ವಿಂಗಡಣೆಗೆ ಕಾಯಿದೆ ಜಾರಿಗೊಳಿಸಲಾಗಿದೆ ಎಂಬ ಕಾರಣಕ್ಕೆ ಚುನಾವಣೆ ಮುಂದೂಡಿಕೆ ಮಾಡುವ ಸರಕಾರದ ವಾದವನ್ನು ಒಪ್ಪುವುದು ಕಷ್ಟ ಎಂದು ಹೈಕೋರ್ಟ್ ಮೌಖಿಕ ಅಭಿಪ್ರಾಯ ವ್ಯಕ್ತಪಡಿಸಿದೆ. ಅಲ್ಲದೆ, ಸರಕಾರವೇ ಏಕೆ ಕಾಯಿದೆ ಅಮಾನತಿನಲ್ಲಿಟ್ಟು ಚುನಾವಣೆ ನಡೆಸಬಾರದು ಎಂದೂ ಕೋರ್ಟ್ ಪ್ರಶ್ನೆ ಮಾಡಿದೆ.

**ಕಾಯಿದೆ ಅಮಾನತಿನಲ್ಲಿಟ್ಟು ಚುನಾವಣೆ ನಡೆಸಲು ಸಾಧ್ಯವಿಲ್ಲವೇ ಎಂದು ಪ್ರಶ್ನೆ**

ಪಾಲಿಕೆಗೆ ಶೀಘ್ರ ಚುನಾವಣೆ ನಡೆಸುವಂತೆ ಕೋರಿ ಕಾಂಗ್ರೆಸ್ ಪಕ್ಷದ ಪಾಲಿಕೆಯ ಮಾಜಿ ಸದಸ್ಯ ಎಂ. ಶಿವರಾಜು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಕುರಿತು ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕ್ ನೇತೃತ್ವದ ವಿಭಾಗೀಯ ಪೀಠ ಬುಧವಾರ ವಿಚಾರಣೆ ನಡೆಸಿತು. ವಾದ ಪ್ರತಿವಾದ ದಾಖಲಿಸಿಕೊಂಡ ಪೀಠ, ತೀರ್ಪು ಕಾಯ್ದಿರಿಸಿರುವುದಾಗಿ ತಿಳಿಸಿತು.

''ಪಾಲಿಕೆಯ ಅಧಿಕಾರವಧಿ ಮುಗಿದ ಬಳಿಕ ವಾರ್ಡ್ ಮರು ವಿಂಗಡಣೆಗೆ ಕಾಯಿದೆ ಜಾರಿಗೊಳಿಸಲಾಗಿದೆ, ಹಾಗಾಗಿ, ಚುನಾವಣೆ ನಡೆಸಲಾಗುತ್ತಿಲ್ಲ ಎಂದು ಸರಕಾರ ಹೇಳುತ್ತಿದೆ. ನಾವು ಸರಕಾರದ ವಾದ ಒಪ್ಪಿದರೆ, ಸಕಾಲದಲ್ಲಿ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸಬೇಕೆಂಬ ಸಾಂವಿಧಾನಿಕ ನಿಯಮ ಉಲ್ಲಂಘನೆ ಮಾಡಿದಂತಾಗಿದೆ. ಹಾಗಾಗಿ ನ್ಯಾಯಾಲಯ ಸರಕಾರದ ವಾದವನ್ನು ಒಪ್ಪುವುದು ಕಷ್ಟ'' ಎಂದು ಹೇಳಿತು.

''ಅಲ್ಲದೆ, ಚುನಾವಣೆಗೆ ಎಲ್ಲ ಸಿದ್ಧತೆಗಳು ಪೂರ್ಣಗೊಂಡಿರುವುದರಿಂದ ಮತದಾರರ ಪಟ್ಟಿ ಸಿದ್ಧಪಡಿಸಲು ಕೋಟ್ಯಂತರ ರೂ. ವೆಚ್ಚ ಆಗಿರುವ ಕಾರಣ, ಸರಕಾರವೇ ಕಾಯಿದೆಯನ್ನು ಬದಿಗಿಟ್ಟು ಚುನಾವಣೆ ನಡೆಸಿದರೆ ಸಾಂವಿಧಾನಿಕ ನಿಯಮಗಳನ್ನು ಪಾಲಿಸಿದಂತಾಗುತ್ತದೆಯಲ್ಲವೇ'' ಎಂದು ನ್ಯಾಯಪೀಠ ಪ್ರಶ್ನಿಸಿತು.



## ಅರ್ಜಿದಾರರು ಹೇಳಿದ್ದೇನು ?

ಅರ್ಜಿದಾರರ ಪರ ವಾದ ಮಂಡಿಸಿದ ಹಿರಿಯ ನ್ಯಾಯವಾದಿ ಪ್ರೊ.ರವಿವರ್ಮ ಕುಮಾರ್, ''ಜಂಟಿ ಸದನ ಸಮಿತಿಯ ಶಿಫಾರಸು ಆಧರಿಸಿ ಪಾಲಿಕೆಯ ವಾರ್ಡ್‌ಗಳ ಪುನರ್ ವಿಂಗಡಣೆಗೆ ಕಾನೂನು ಜಾರಿಗೊಳಿಸಲಾಗಿದೆ ಎಂದು ಸರಕಾರ ಹೇಳಿದೆ. ಆದರೆ, ಸರಕಾರ ಸಮಿತಿ ಬಗ್ಗೆ ತಪ್ಪು ಮಾಹಿತಿ ನೀಡುತ್ತಿದೆ. ಸಮಿತಿ ರಚನೆ ಮಾಡಿದ್ದು ಬಿಬಿಎಂಪಿಗೆ ಹೊಸ ಕಾಯಿದೆ ರಚಿಸುವ ಸಲುವಾಗಿಯೇ ಹೊರತು, ವಾರ್ಡ್‌ಗಳ ಪುನರ್ ವಿಂಗಡಣೆಗೆ ಶಿಫಾರಸು ಮಾಡುವ ಉದ್ದೇಶಕ್ಕಲ್ಲ. ಕಾನೂನು ಜಾರಿಗೊಳಿಸಿರುವುದು ಪಾಲಿಕೆಯ ಅಧಿಕಾರಾವಧಿ ಮುಕ್ತಾಯದ ಬಳಿಕ. ಹಾಗಾಗಿ ಅದನ್ನು ಒಪ್ಪಲಾಗದು. ಸಾಂವಿಧಾನದ ಕಲಂ 243(ಯು) ಅನ್ವಯ ಚುನಾವಣೆಗಳನ್ನು ನಡೆಸಲೇಬೇಕು'' ಎಂದು ಹೇಳಿದರು.



''ಈಗಾಗಲೇ ಹೈಕೋರ್ಟ್ ವಿಭಾಗೀಯಪೀಠ ಗ್ರಾಮ ಪಂಚಾಯ್ತಿ ಚುನಾವಣೆ ತೀರ್ಪಿನಲ್ಲಿ ಚುನಾವಣೆ ನಡೆಸುವ ವಿಚಾರವಾಗಿ ಸ್ಪಷ್ಟ ನಿರ್ದೇಶನ ನೀಡಿದೆ. ಚುನಾವಣೆ ಮುಂದೂಡುವ ಅಧಿಕಾರ ಸರಕಾರಕ್ಕಿಲ್ಲ,'' ಎಂದು ವಿವರಿಸಿದರು.

## ಚುನಾವಣಾ ಆಯೋಗದ ವಾದ

ರಾಜ್ಯ ಚುನಾವಣಾ ಆಯೋಗದ ಪರ ವಾದ ಮಂಡಿಸಿದ ಹಿರಿಯ ನ್ಯಾಯವಾದಿ ಕೆ.ಎನ್. ಫಣೀಂದ್ರ ''ಹೊಸದಾಗಿ ವಾರ್ಡ್‌ಗಳ ಮರು ವಿಂಗಡಣೆ ಮಾಡುವಾಗ ಒಂದೇ ವಾರ್ಡ್ ಹಲವು ವಿಧಾನಸಭಾ ಕ್ಷೇತ್ರಗಳಲ್ಲಿ ಹರಡಿ ಹಂಚಿಹೋಗುವುದನ್ನು ತಪ್ಪಿಸಲಾಗುವುದು ಎಂದು ಸರಕಾರ ಹೇಳಿದೆ. ಆದರೆ, ಹಾಲಿ ಇರುವ ವಾರ್ಡ್‌ಗಳಲ್ಲಿಯೇ ಆ ರೀತಿ ಕ್ರಮ ಜರುಗಿಸಲಾಗಿದ್ದು, ಯಾವ ವಾರ್ಡ್ ಕೂಡ ಎರಡು-ಮೂರು ವಿಧಾನಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವುದಿಲ್ಲ'' ಎಂದರು. ''ಅಲ್ಲದೆ, ಬಿಬಿಎಂಪಿ ವ್ಯಾಪ್ತಿಯಲ್ಲಿ ಏನೂ ಬದಲಾವಣೆಯಾಗಿಲ್ಲ. ಜತೆಗೆ ಸರಕಾರ ಬಿಬಿಎಂಪಿ ಕಾಯಿದೆ ಜಾರಿಗೆ ತಂದಿರುವುದು ಅಕ್ಟೋಬರ್‌ನಲ್ಲಿ. ಆಯೋಗ ಹೈಕೋರ್ಟ್‌ನಲ್ಲಿ ರಿಟ್ ಅರ್ಜಿ ಸಲ್ಲಿಸಿದ ನಂತರ ಸಮಿತಿ ರಚನೆ ಮಾಡಲಾಗಿದೆ'' ಎಂದು ವಿವರಿಸಿದರು.

## ಸರಕಾರದ ಸ್ಪಷ್ಟನೆ

ಸರಕಾರದ ಪರ ವಾದ ಮಂಡಿಸಿದ ಅಡ್ವೊಕೇಟ್ ಜನರಲ್ ಪ್ರಭುಲಿಂಗ ಕೆ. ನಾವದಗಿ, ''ಸರಕಾರಕ್ಕೆ ಚುನಾವಣೆ ಮುಂದೂಡುವ ಯಾವುದೇ ಉದ್ದೇಶವಿಲ್ಲ, ಬಿಬಿಎಂಪಿಯ ವ್ಯಾಪ್ತಿ ಇದೀಗ ವಿಸ್ತಾರವಾಗಿ ಬೆಳೆದಿದೆ. ಹಾಗಾಗಿ, ಬಿಬಿಎಂಪಿಯ ವಾರ್ಡ್‌ಗಳನ್ನು ಮರುವಿಂಗಡಣೆ ಮಾಡುವ ಅಗತ್ಯವಿದೆ. ಜಂಟಿ ಸದನ ಸಮಿತಿಯ ಶಿಫಾರಸಿನಂತೆ ವಾರ್ಡ್‌ಗಳ ಮರುವಿಂಗಡಣೆಗೆ ಪ್ರತ್ಯೇಕ ಕಾಯಿದೆ ಜಾರಿಗೊಳಿಸಲಾಗಿದೆ. ಹಾಗಾಗಿ, ಸದ್ಯಕ್ಕೆ ಚುನಾವಣೆ ನಡೆಸಲು ಸಾಧ್ಯವಾಗುತ್ತಿಲ್ಲ, ಮರು ವಿಂಗಡಣಾ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಚುನಾವಣೆ ನಡೆಸಲಾಗುವುದು'' ಎಂದರು. ''ವಾರ್ಡ್ ಪುನರ್ ವಿಂಗಡಣೆ ಕಾರ್ಯ ಕೈಗೆತ್ತಿಕೊಳ್ಳಲು ವಿಳಂಬವಾಗಿದ್ದಕ್ಕೆ ಕೋವಿಡ್ ಮತ್ತಿತರ ಕಾರಣಗಳಿವೆ. ಆದರೂ ಘನ ಉದ್ದೇಶದಿಂದಲೇ ಸರಕಾರ ಕಾಯಿದೆ ರೂಪಿಸಿದೆ'' ಎಂದರು.

VK
ವಿಜಯ ಕರ್ನಾಟಕ

| Date | 26-11-2020 |
| --- | --- |
| Page No | 7 |


## 'ಬೆಂಗಳೂರು ಕಟ್ಟೋಣ ಬನ್ನಿ' ಅಭಿಯಾನದ ಫಲಶ್ರುತಿ

# ಚಿಕ್ಕಪೇಟೆಗೆ ಅಭಿವೃದ್ಧಿ ಸ್ಪರ್ಶ

**ವಿಕ ಸುದ್ದಿಲೋಕ** ಬೆಂಗಳೂರು

ರಾಜಧಾನಿಯ ಪ್ರಮುಖ ವಾಣಿಜ್ಯ ಕೇಂದ್ರವಾಗಿರುವ ಚಿಕ್ಕಪೇಟೆ ಮತ್ತು ಸುತ್ತಮುತ್ತಲ ಪ್ರದೇಶಗಳ ಚಹರೆಯನ್ನೇ ಬದಲಿಸುವ ಕಾರ್ಯವನ್ನು ಬಿಬಿಎಂಪಿ ಕೈಗೆತ್ತಿಕೊಳ್ಳುತ್ತಿದೆ. ಜಲ ಮಂಡಳಿ ಕಾಮಗಾರಿಯಿಂದ ಹದಗೆಟ್ಟು ಹೋಗಿದ್ದ ರಸ್ತೆಗಳಿಂದ ಹೈರಾಣಾಗಿ ಹೋಗಿದ್ದ ವರ್ತಕರು ಮತ್ತು ಗ್ರಾಹಕರು ನಿಟ್ಟುಸಿರು ಬಿಡುವ ಕಾಲ ಸನ್ನಿಹಿತವಾಗಿದೆ.

ಇದೆಲ್ಲವೂ ಸಾಧ್ಯವಾಗಿದ್ದು 'ವಿಜಯ ಕರ್ನಾಟಕ' ಕೈಗೊಂಡಿರುವ 'ಬೆಂಗಳೂರು ಕಟ್ಟೋಣ ಬನ್ನಿ' ಅಭಿಯಾನದಿಂದ. ಅವೆನ್ಯೂ ರಸ್ತೆ, ಚಿಕ್ಕಪೇಟೆ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿನ ರಸ್ತೆಗಳು ಅಧ್ವಾನವಾಗಿದ್ದು, ಅಭಿವೃದ್ಧಿಪಡಿಸಲು ಬಿಬಿಎಂಪಿಗೆ ಸೂಚಿಸಬೇಕೆಂದು ಅಭಿಯಾನದ ಮಾರ್ಗದರ್ಶಕರಾಗಿರುವ ಸಂಸದ ಪಿ.ಸಿ.ಮೋಹನ್ ಅವರು ನ. 21ರಂದು ಎಫ್‌ಕೆಸಿಸಿಐ ಸಭಾಂಗಣದಲ್ಲಿ ನಡೆದ ಉದ್ಘಾಟನಾ ಕಾರ್ಯಕ್ರಮದಲ್ಲಿ ಸಿಎಂ ಬಿ.ಎಸ್.ಯಡಿಯೂರಪ್ಪ ಅವರಲ್ಲಿ ಮನವಿ ಮಾಡಿಕೊಂಡಿದ್ದರು. ಇದಕ್ಕೆ ಸ್ಪಂದಿಸಿದ ಸಿಎಂ, ಒಂದು ತಿಂಗಳೊಳಗೆ ಚಿಕ್ಕಪೇಟೆ ಮತ್ತು ಸುತ್ತಮುತ್ತಲ ರಸ್ತೆಗಳ ಅಭಿವೃದ್ಧಿಗೆ ಕ್ರಮ ಕೈಗೊಳ್ಳುವಂತೆ ಪಾಲಿಕೆ ಆಡಳಿತಾಧಿಕಾರಿಗೆ ಸೂಚಿಸುವುದಾಗಿ ಭರವಸೆ ನೀಡಿದ್ದರು.

ಅದರಂತೆ, ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತ ಅವರು ಅಧಿಕಾರಿಗಳ ತಂಡದೊಂದಿಗೆ ಕೆ.ಆರ್. ಮಾರುಕಟ್ಟೆ, ಅವೆನ್ಯೂ ರಸ್ತೆ, ಕಾಟನ್ ಪೇಟೆ, ಬಿವಿಕೆ ಅಯ್ಯಂಗಾರ್ ರಸ್ತೆ, ಗುಂಡಪ್ಪ ಸ್ಟ್ರೀಟ್, ಮಾಮೂಲು ಪೇಟೆ, ಹಳೆ ತರಗುಪೇಟೆ, ಸುಲ್ತಾನಪೇಟೆ, ಓಟಿಸಿ ರಸ್ತೆ, ಬಳೇಪೇಟೆ ರಸ್ತೆಗಳಲ್ಲಿ ಬುಧವಾರ ತಪಾಸಣೆ ನಡೆಸಿದರು. ಇವರಿಗೆ ಸಂಸದ ಪಿ.ಸಿ. ಮೋಹನ್ ಕೂಡ ಸಾಥ್ ನೀಡಿದ್ದರು. 'ಜಲಮಂಡಳಿಯು ಕೊಳವೆಗಳನ್ನು ಅಳವಡಿಸಲು ಅಗೆದಿರುವ ರಸ್ತೆಗಳಿಗೆ ಡಾಂಬರು ಅಥವಾ ಕಾಂಕ್ರೀಟ್ ಹಾಕಿ ದುರಸ್ತಿಪಡಿಸಬೇಕು' ಎಂದು ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು. »08



ಸಂಸದ ಪಿ.ಸಿ. ಮೋಹನ್ ಮತ್ತು ಪಾಲಿಕೆ ಆಡಳಿತಾಧಿಕಾರಿ ಗೌರವ್ ಗುಪ್ತಾ ಅವರು ಚಿಕ್ಕಪೇಟೆ ಸುತ್ತಮುತ್ತಲ ಪ್ರದೇಶದಲ್ಲಿ ಪರಿಶೀಲನೆ ನಡೆಸಿದರು.

**ಸಂಸದ ಪಿ.ಸಿ. ಮೋಹನ್, ಆಡಳಿತಾಧಿಕಾರಿ ಗೌರವ್ ಗುಪ್ತಾ ಪರಿಶೀಲನೆ**



22.11.2020
ವಿಜಯ ಕರ್ನಾಟಕ
ಬೆಂಗಳೂರು ಪುನಶ್ಚೇತನಕ್ಕೆ ವಿಕ ಅಭಿಯಾನ

ಚಿಕ್ಕಪೇಟೆ ಮತ್ತು ಸುತ್ತಮುತ್ತಲ ರಸ್ತೆಗಳು ಹದಗೆಟ್ಟು ಹೋಗಿದ್ದು, ಕೂಡಲೇ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಬೇಕು. ಪ್ರಮುಖ ವಾಣಿಜ್ಯ ತಾಣವಾಗಿರುವ ಈ ಪ್ರದೇಶದಲ್ಲಿ ಅಗತ್ಯ ಮೂಲಸೌಕರ್ಯ ಕಲ್ಪಿಸಬೇಕು. ರಸ್ತೆ ಬದಿಯ ಚರಂಡಿಗಳ ಹೂಳು ತೆರವುಗೊಳಿಸಿ, ನೀರು ಸರಾಗವಾಗಿ ಹರಿದು ಹೋಗುವಂತೆ ಮಾಡಬೇಕು. ಕಾಲಮಿತಿಯೊಳಗೆ ರಸ್ತೆಗಳ ದುರಸ್ತಿಗೆ ಕ್ರಮ ವಹಿಸಬೇಕು.

**-ಪಿ.ಸಿ.ಮೋಹನ್** ಸಂಸದ

### ಚರಂಡಿ ಹೂಳು ತೆಗೆಯಲು ಸೂಚನೆ

ಜಲಮಂಡಳಿಯು ಒಳಚರಂಡಿ ಕೊಳವೆಗಳ ಅಳವಡಿಕೆಗೆ ಮಾಮೂಲ್ ಪೇಟೆ ಮುಖ್ಯರಸ್ತೆಯನ್ನು ಅಗೆದಿರುವುದರಿಂದ ಓಡಾಟಕ್ಕೆ ತೊಂದರೆಯಾಗುತ್ತಿದೆ. ಮಳೆ ಬಂದಾಗ ನೀರು ರಸ್ತೆಯಲ್ಲೇ ನಿಲ್ಲುತ್ತಿದೆ ಎಂದು ಸ್ಥಳೀಯ ವ್ಯಾಪಾರಿಗಳು, ನಿವಾಸಿಗಳು ದೂರಿದರು. ಇದಕ್ಕೆ ಸ್ಪಂದಿಸಿದ ಆಡಳಿತಾಧಿಕಾರಿ, ಕೂಡಲೇ ಚರಂಡಿ ಹೂಳು ತೆರವುಗೊಳಿಸಲಾಗುವುದು ಎಂದರು.

### ಸುಗಮ ಸಂಚಾರಕ್ಕೆ ಅನುವು

ಸುಲ್ತಾನ್ ಪೇಟೆ ಮುಖ್ಯರಸ್ತೆಯಲ್ಲಿ ಒಳಚರಂಡಿ ಕೊಳವೆಗಳನ್ನು ಹಾಕಿರುವುದರಿಂದ ಟ್ರಾಫಿಕ್‌ಜಾಮ್ ಉಂಟಾಗುತ್ತಿರುವುದನ್ನು ಗಮನಿಸಿದ ಪಾಲಿಕೆ ಆಡಳಿತಾಧಿಕಾರಿ, "ಕೂಡಲೇ ಕೊಳವೆಗಳನ್ನು ಬೇರೆಡೆಗೆ ಸ್ಥಳಾಂತರಿಸಿ, ವಾಹನಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕು. ತ್ವರಿತವಾಗಿ ಒಳಚರಂಡಿ ಕೊಳವೆ ಅಳವಡಿಕೆ ಕಾಮಗಾರಿ ಪೂರ್ಣಗೊಳಿಸಬೇಕು," ಎಂದು ತಾಕೀತು ಮಾಡಿದರು.

ವಿಜಯ ಕರ್ನಾಟಕ

| Date | 26-11-2020 |
|---|---|
| Page No | 7 |


# ಇಂದು ಭಾರಿ ಮಳೆ ಸಾಧ್ಯತೆ

**ಬೆಂಗಳೂರು:** ಬಂಗಾಳ ಕೊಲ್ಲಿಯಲ್ಲಿ ಸೃಷ್ಟಿಯಾಗಿರುವ ನಿವಾರ್ ಚಂಡಮಾರುತದ ಪರಿಣಾಮ ಬೆಂಗಳೂರು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬುಧವಾರ ಸಂಜೆಯಿಂದ ಮಳೆ ಆರಂಭವಾಗಿದ್ದು, ಗುರುವಾರ ಭಾರಿ ವರ್ಷಧಾರೆಯಾಗಲಿದೆ.

ಬಿಬಿಎಂಪಿ ವ್ಯಾಪ್ತಿಯಲ್ಲಿ ಬುಧವಾರ ಇಡೀ ದಿನ ಮೋಡ ಮುಸುಕಿದ ವಾತಾವರಣ ಇತ್ತು. ಮಧ್ಯಾಹ್ನ ಕೆಲ ಗಂಟೆ ಬಿಸಿಲಿದ್ದರೂ, ಝಳ ಕಡಿಮೆಯಿತ್ತು. ಸಂಜೆ ಬಳಿಕ ಮೋಡದ ವಾತಾವರಣ ಎಲ್ಲೆಡೆ ಕಾಣಿಸಿಕೊಂಡು ಕೆಲವೆಡೆ ತುಂತುರು ಮಳೆಯಾಗಿದೆ. ಗುರುವಾರ ಬೆಳಗ್ಗೆಯಿಂದಲೇ ಮಳೆಯಾಗಲಿದ್ದು, ಸಂಜೆ ವೇಳೆಗೆ ಅದರ ತೀವ್ರತೆ ಹೆಚ್ಚಾಗಲಿದೆ. ಸೀಮಿತ ಪ್ರದೇಶಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

VK ವಿಜಯ ಕರ್ನಾಟಕ

| Date | 26-11-2020 |
|---|---|
| Page No | 8 |


ಎಲ್ಲೆಂದರಲ್ಲಿ ಕಸ ಹಾಕಿದ್ರೆ ಸಿಕ್ಕಿ ಬೀಳ್ತೀರಿ ಹುಷಾರ್ | ಪ್ರಮುಖ ಪ್ರದೇಶಗಳಲ್ಲಿ ಕ್ಯಾಮೆರಾ ಅಳವಡಿಕೆ

# ಕಸಕೋರರ ಮೇಲೆ ಕ್ಯಾಮೆರಾ ಕಣ್ಗಾವಲು

■ ನಾಗಪ್ಪ ನಾಗನಾಯಕನಹಳ್ಳಿ ಬೆಂಗಳೂರು
nagappa.narayanappa@timesgroup.com

ಸಾಂದರ್ಭಿಕ ಚಿತ್ರ




ಸಿಲಿಕಾನ್ ಸಿಟಿಯನ್ನು ತೀವ್ರವಾಗಿ ಕಾಡುತ್ತಿರುವ ತ್ಯಾಜ್ಯ ಸಮಸ್ಯೆಯನ್ನು ನಿವಾರಿಸಲು ಇನ್ನಿಲ್ಲದ ಕಸರತ್ತು ನಡೆಸುತ್ತಿರುವ ಬಿಬಿಎಂಪಿ, ಎಲ್ಲೆಂದರಲ್ಲಿ ಕಸ ಬಿಸಾಡುವವರು ಹಾಗೂ ಅಪರಾಧ ಕೃತ್ಯಗಳ ಮೇಲೆ ಹದ್ದಿನ ಕಣ್ಣಿಡಲು ಸಿಸಿಟಿವಿ ಕ್ಯಾಮೆರಾಗಳ 'ಪಹರೆ' ಯ ವ್ಯವಸ್ಥೆ ಮಾಡುತ್ತಿದೆ. ಕ್ಯಾಮೆರಾಗಳಲ್ಲಿ ಸೆರೆಯಾಗುವ ದೃಶ್ಯಾವಳಿಗಳನ್ನು ಸಾಕ್ಷ್ಯವಾಗಿಟ್ಟುಕೊಂಡು, ನಿಯಮ ಉಲ್ಲಂಘಿಸುವವರಿಗೆ ದಂಡದ ಬಿಸಿ ಮುಟ್ಟಿಸಲಾಗುತ್ತದೆ.

ಪಾಲಿಕೆಯಿಂದ ನಿಯೋಜಿಸಲ್ಪಟ್ಟ ಪೌರ ಕಾರ್ಮಿಕರು ಮನೆ- ಮನೆಗಳಿಂದ ಕಸ ಸಂಗ್ರಹಿಸುತ್ತಿದ್ದರೂ, ಬ್ಲಾಕ್‌ಸ್ಪಾಟ್ (ತ್ಯಾಜ್ಯ ರಾಶಿ ಬಿದ್ದ ಪ್ರದೇಶ)ಗಳು ಕಡಿಮೆಯಾಗಿಲ್ಲ. ಪ್ರತಿ ವಾರ್ಡ್‌ಗೊಬ್ಬರಂತೆ ಮಾರ್ಷಲ್‌ಗಳನ್ನು ನಿಯೋಜಿಸಿದ್ದರೂ ಎಲ್ಲೆಂದರಲ್ಲಿ ಕಸ ಹಾಕುವವರಿಗೆ ಕಡಿವಾಣ ಬಿದ್ದಿಲ್ಲ. ಹಾಗಾಗಿ, ಪಾಲಿಕೆಯು ನಗರದ ನೈರ್ಮಲ್ಯ ಕಾಪಾಡಲು ಸಿಸಿಟಿವಿ ಕ್ಯಾಮೆರಾಗಳ ಮೊರೆ ಹೋಗಿದೆ. ತ್ಯಾಜ್ಯ ಸಮಸ್ಯೆ ಹೆಚ್ಚಿರುವ ಪ್ರದೇಶಗಳಲ್ಲಿ ಕ್ಯಾಮೆರಾಗಳ ಕಣ್ಗಾವಲು

## ದಾಖಲಾಗಿರುವ ದೃಶ್ಯಾವಳಿ ಆಧರಿಸಿ ದಂಡ

ಹಾಕಲಾಗುತ್ತಿದೆ. ಆ ಮೂಲಕ ರಾತ್ರಿ ಅಥವಾ ಮುಂಜಾನೆ ವೇಳೆ ಕಸದ ಮೂಟೆ, ಕವರ್‌ಗಳನ್ನು ಹೊತ್ತು ತಂದು ಬಿಸಾಡುವ ವಾಣಿಜ್ಯ ಮಳಿಗೆದಾರರು, ನಿವಾಸಿಗಳನ್ನು ಪತ್ತೆ ಮಾಡಿ ದಂಡ ವಿಧಿಸಲು ತೀರ್ಮಾನಿಸಲಾಗಿದೆ.

## ಮಹದೇವಪುರದಲ್ಲಿ 5 ಕೋಟಿ ವೆಚ್ಚದಲ್ಲಿ ಕ್ಯಾಮೆರಾ ಅಳವಡಿಕೆ

**5 ಕೋಟಿ ರೂ. ವೆಚ್ಚ:** ಮಹದೇವಪುರ ವಲಯದ ಎಲ್ಲ ವಾರ್ಡ್‌ಗಳಲ್ಲಿ ಕ್ಯಾಮೆರಾಗಳನ್ನು ಹಾಕಲು ಒಟ್ಟು 5 ಕೋಟಿ ರೂ. ಒದಗಿಸಲಾಗಿದೆ. ಮಹದೇವಪುರ ವಲಯದ ಬಸನಪುರ, ದೇವಸಂದ್ರ, ಕೆ.ಆರ್.ಪುರ, ರಾಮಮೂರ್ತಿನಗರ, ಎ.ನಾರಾಯಣಪುರ, ಎಚ್‌ಎಎಲ್ ವಿಮಾನ ನಿಲ್ದಾಣ ಮತ್ತು ವಿಜ್ಞಾನನಗರ ವಾರ್ಡ್‌ಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲು ಪಾಲಿಕೆಯ ಎಂಜಿನಿಯರಿಂಗ್ ವಿಭಾಗವು ಟೆಂಡರ್ ಕರೆದಿದೆ. ಎ.ನಾರಾಯಣಪುರ, ಬಸವನಪುರ ಮತ್ತು ದೇವಸಂದ್ರದಲ್ಲಿ ಕ್ಯಾಮೆರಾಗಳ ಅಳವಡಿಕೆಗೆ ಒಟ್ಟು 55 ಲಕ್ಷ ರೂ. ಮೀಸಲಿಡಲಾಗಿದೆ.

"ಘನತ್ಯಾಜ್ಯ ನಿರ್ವಹಣೆ ವಿಭಾಗದ ಅಧಿಕಾರಿಗಳು ಸೂಚಿಸುವ ಕಡೆ ಕ್ಯಾಮೆರಾಗಳನ್ನು ಅಳವಡಿಸಲಾಗುತ್ತಿದೆ. ವಲಯವಾರು ನಿಯಂತ್ರಣ ಕೊಠಡಿ ಮತ್ತು ಮಾರ್ಷಲ್ ನಿಯಂತ್ರಣ ಕೊಠಡಿಗಳಲ್ಲಿನ ಪರದೆಗಳಲ್ಲಿ ಆ ದೃಶ್ಯಾವಳಿಗಳು ಪ್ರದರ್ಶಿತವಾಗುವಂತೆ ಸಂಪರ್ಕ ಕಲ್ಪಿಸಬೇಕೆಂದು ಸಂಬಂಧಪಟ್ಟವರಿಗೆ ಸೂಚಿಸಲಾಗಿದೆ," ಎಂದು ಪಾಲಿಕೆ ಘನತ್ಯಾಜ್ಯ ನಿರ್ವಹಣೆ ವಿಭಾಗದ ಅಧಿಕಾರಿ ಮಾಹಿತಿ ನೀಡಿದರು.

### ಕಸ ವಿಂಗಡಣೆಯಲ್ಲಿ ವಿಫಲ

ಸಿಲಿಕಾನ್ ಸಿಟಿಯಲ್ಲಿ ನಿತ್ಯ 1105 ಟನ್ ಹಸಿ ತ್ಯಾಜ್ಯ ಮತ್ತು 2488 ಟನ್ ಮಿಶ್ರ ತ್ಯಾಜ್ಯ ಸೇರಿ ಒಟ್ಟು 5000 ಟನ್‌ನಷ್ಟು ಕಸ ಉತ್ಪತ್ತಿಯಾಗುತ್ತಿದೆ. ಕಸ ವಿಂಗಡಣೆ ಕಡ್ಡಾಯಗೊಳಿಸಿ, ಮೂರು ವರ್ಷ ಕಳೆದರೂ ನಿರೀಕ್ಷಿತ ಗುರಿ ಸಾಧಿಸಲು ಸಾಧ್ಯವಾಗಿಲ್ಲ. ಸದ್ಯ ಶೇ 30.7ರಷ್ಟು ಮಾತ್ರ ಕಸ ವಿಂಗಡಣೆಯಾಗುತ್ತಿದೆ.

### ಬ್ಲಾಕ್‌ಸ್ಪಾಟ್ ಮೇಲೆ ನಿಗಾಕ್ಕೆ ಮೊಬೈಲ್ ಆ್ಯಪ್

ನಗರದಾದ್ಯಂತ ಸದ್ಯ 1800 ಬ್ಲಾಕ್‌ಸ್ಪಾಟ್‌ಗಳನ್ನು ಗುರುತಿಸಲಾಗಿದೆ. ಇಂಥ ಬ್ಲಾಕ್‌ಸ್ಪಾಟ್‌ಗಳಿರುವ ಪ್ರದೇಶಗಳಲ್ಲಿ ಕ್ಯಾಮೆರಾಗಳನ್ನು ಹಾಕಲು ಉದ್ದೇಶಿಸಲಾಗಿದೆ. "ನಗರದಲ್ಲಿನ ಬ್ಲಾಕ್‌ಸ್ಪಾಟ್‌ಗಳ ನಿರ್ಮೂಲನೆಗಾಗಿ ಮೊಬೈಲ್ ಆ್ಯಪ್ ಅಭಿವೃದ್ಧಿಪಡಿಸಲಾಗುತ್ತಿದ್ದು, ಮುಂದಿನ ಒಂದು ವಾರದೊಳಗೆ ಸಿದ್ಧವಾಗಲಿದೆ. 1800 ಬ್ಲಾಕ್‌ಸ್ಪಾಟ್‌ಗಳ ಪೈಕಿ 600 ಕಡೆ ನಿತ್ಯ ಕಸ ತೆಗೆದು ವಿಲೇವಾರಿ ಮಾಡಲಾಗುತ್ತಿದೆ. ಮೊಬೈಲ್ ಆ್ಯಪ್ ಅನ್ನು ಮಾರ್ಷಲ್‌ಗಳಿಗೆ ಒದಗಿಸಲಾಗುವುದು. ಅವರು ಬ್ಲಾಕ್‌ಸ್ಪಾಟ್‌ಗಳ ಚಿತ್ರಗಳನ್ನು ತೆಗೆದು ಕಳುಹಿಸಲಿದ್ದಾರೆ. ಇದರಿಂದ ಹಲವು ದಿನಗಳಿಂದ ಉಳಿದಿರುವ ಬ್ಲಾಕ್‌ಸ್ಪಾಟ್‌ಗಳನ್ನು ಪತ್ತೆ ಮಾಡಿ ನಿರ್ಮೂಲನೆ ಮಾಡಲು ಸಾಧ್ಯವಾಗಲಿದೆ," ಎಂದು ಅಧಿಕಾರಿಯೊಬ್ಬರು ತಿಳಿಸಿದರು.

### ಹಲವೆಡೆ ನಿಗಾ

ಈಗಾಗಲೇ ಪಾಲಿಕೆ ವ್ಯಾಪ್ತಿಯ ಹಲವೆಡೆ ಮಹಿಳೆಯರ ಸುರಕ್ಷತೆಗಾಗಿ ಮತ್ತು ಅಪರಾಧಗಳ ನಿಯಂತ್ರಣಕ್ಕೆ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಈ ಕ್ಯಾಮೆರಾಗಳ ನೆರವಿನಿಂದಲೂ ಘನತ್ಯಾಜ್ಯ ನಿರ್ವಹಣೆ ನಿಯಮಗಳನ್ನು ಉಲ್ಲಂಘಿಸುವವರ ವಿರುದ್ಧ ಕ್ರಮ ಜರುಗಿಸಲಾಗುತ್ತಿದೆ. ಈ ಹಿಂದೆ ಪಾಲಿಕೆಯು ಅನಧಿಕೃತವಾಗಿ ಕಸ ಹಾಕುವವರಿಗೆ ಕಡಿವಾಣ ಹಾಕಲು 2500 ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲು ತೀರ್ಮಾನಿಸಿತ್ತು. ಆಗ ಪ್ರತಿ ವಾರ್ಡ್‌ಗೆ 10 ಲಕ್ಷ ರೂ. ಅನುದಾನ ಒದಗಿಸಲಾಗಿತ್ತು.

ವಿಜಯ ಕರ್ನಾಟಕ

| Date | 26-11-2020 |
| --- | --- |
| Page No | 8 |


# ನಗರದಲ್ಲಿ 916 ಮಂದಿಗೆ ಕೊರೊನಾ ಸೋಂಕು

**ಬೆಂಗಳೂರು:** ನಗರದಲ್ಲಿ ಹೊಸದಾಗಿ 916 ಮಂದಿಗೆ ಕೊರೊನಾ ಸೋಂಕು ತಗಲಿರುವುದು ದೃಢಪಟ್ಟಿದೆ. 11 ಮಂದಿ ಸಾವನ್ನಪ್ಪಿದ್ದಾರೆ. ನಗರ ಜಿಲ್ಲೆಯಲ್ಲಿ ಇದುವರೆಗೆ ಸೋಂಕಿತರ ಸಂಖ್ಯೆ 3,66,233ಕ್ಕೆ ಏರಿದೆ. ಈ ಪೈಕಿ 3,43,771 ಮಂದಿ ಚೇತರಿಸಿಕೊಂಡಿದ್ದು, ಉಳಿದ 18,360 ರೋಗಿಗಳು ನಿಗದಿತ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಕೋವಿಡ್ ಸೋಂಕಿಗೊಳಗಾದವರಲ್ಲಿ 4101 ಮಂದಿ ಮೃತಪಟ್ಟಿದ್ದಾರೆ.



| Date | 26-11-2020 |
|---|---|
| Page No | 8 |

# ಚಿಕ್ಕಪೇಟೆಗೆ ಅಭಿವೃದ್ಧಿ ಸ್ಪರ್ಶ

» ನಮ್ಮ ಮೊದಲ ಪುಟದಿಂದ

"ಬಿಬಿಎಂಪಿ ವತಿಯಿಂದ ಈಗಾಗಲೇ ಕಾಟನ್ ಪೇಟೆ ರಸ್ತೆಯನ್ನು ಟೆಂಡರ್ ಶ್ಯೂರ್ ಮಾದರಿಯಡಿ ಅಭಿವೃದ್ಧಿಪಡಿಸಲಾಗಿದೆ. ಅದೇ ರೀತಿ ಬಿವಿಕೆ ಅಯ್ಯಂಗಾರ್ ರಸ್ತೆಯನ್ನೂ ಅಭಿವೃದ್ಧಿ ಮಾಡಲಾಗುವುದು. ಇದಲ್ಲದೆ, ಒಂದು ಕಿ.ಮೀ ಉದ್ದದ ಅವೆನ್ಯೂ ರಸ್ತೆಯನ್ನು ಸ್ಮಾರ್ಟ್ ಸಿಟಿ ಯೋಜನೆಯಡಿ ಅಭಿವೃದ್ಧಿಪಡಿಸಲು ಯೋಜನೆ ರೂಪಿಸಲಾಗಿದೆ," ಎಂದು ಆಡಳಿತಾಧಿಕಾರಿ ಗೌರವ್ ಗುಪ್ತ ತಿಳಿಸಿದರು.

"ಅವೆನ್ಯೂ ರಸ್ತೆಯಲ್ಲಿ ಜಲ ಮಂಡಳಿಯು ಒಳಚರಂಡಿ ಕಾಮಗಾರಿ ಪೂರ್ಣಗೊಳಿಸಿದ್ದು, ವಾಹನ ಸವಾರರಿಗೆ ತೊಂದರೆಯಾಗದಂತೆ ತಾತ್ಕಾಲಿಕವಾಗಿ ಡಾಂಬರು ಹಾಕಿ ದುರಸ್ತಿಪಡಿಸಲಾಗುವುದು' ಎಂದು ಹೇಳಿದ ಅವರು, 'ಈ ರಸ್ತೆಯಲ್ಲಿ ಟೆಂಡರ್ ಶ್ಯೂರ್ ಮಾದರಿಯಲ್ಲಿ ಅಭಿವೃದ್ಧಿಪಡಿಸುವ ಕಾಮಗಾರಿ ಶುರು ಮಾಡುವುದಕ್ಕೆ ಮುನ್ನ ವಾಹನ ಸಂಚಾರಕ್ಕೆ ಪರ್ಯಾಯ ರಸ್ತೆ ಮಾರ್ಗ ಗುರುತಿಸಬೇಕು. ಒಂದು ವಾರದೊಳಗೆ ಮಾಸ್ಟರ್ ಪ್ಲಾನ್ ಸಿದ್ಧಪಡಿಸಿ, ಕಾಲಮಿತಿಯೊಳಗೆ ಕೆಲಸ ಮುಗಿಸಬೇಕು," ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

"ಎಸ್‌ಜೆಪಿ ರಸ್ತೆಯನ್ನೂ ಸ್ಮಾರ್ಟ್‌ಸಿಟಿ ಯೋಜನೆಯಡಿ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳಲಾಗಿದ್ದು, ಸಾಧ್ಯತಾ ವರದಿಯನ್ನು ಸಿದ್ಧಪಡಿಸಬೇಕು. ಚಿಕ್ಕಪೇಟೆ ಮತ್ತು ಸುತ್ತಮುತ್ತಲ ಪ್ರದೇಶಗಳಲ್ಲಿ ಕುಡಿಯುವ ನೀರು, ಒಳಚರಂಡಿ ಸಂಪರ್ಕ ವ್ಯವಸ್ಥೆಯ ನಕ್ಷೆ ಆಧರಿಸಿ, ಎಲ್ಲೆಲ್ಲಿ ಸಂಪರ್ಕ ಕಡಿತಗೊಂಡಿದೆ? ಯಾವ ಭಾಗದಲ್ಲಿ ಕೊಳವೆಗಳು ಬ್ಲಾಕ್ ಆಗಿವೆ, ಅವುಗಳ ಸಾಮರ್ಥ್ಯದ ಕುರಿತಂತೆ ಮಾಸ್ಟರ್ ಪ್ಲಾನ್ ಸಿದ್ಧಪಡಿಸಿ, ಹಂತ-ಹಂತವಾಗಿ ಯಾವ್ಯಾವ ಕಾಮಗಾರಿಗಳನ್ನು ಕೈಗೊಳ್ಳಬೇಕು ಎಂಬುದರ ಬಗ್ಗೆ ವರದಿ ಸಿದ್ಧಪಡಿಸಬೇಕು. ಜೆಟ್ಟಿಂಗ್ ಯಂತ್ರಗಳನ್ನು ಬಳಸಿಕೊಂಡು ಬ್ಲಾಕ್ ಆಗಿರುವ ಸ್ಥಳಗಳನ್ನು ಸರಿಪಡಿಸಿ, ನೀರು ಸರಾಗವಾಗಿ ಹರಿದು ಹೋಗುವಂತೆ ಮಾಡಬೇಕು. ಮ್ಯಾನ್ ಹೋಲ್‌ಗಳಲ್ಲಿ ಮಳೆ ನೀರು ಹರಿಯದಂತೆ ಎಚ್ಚರ ವಹಿಸಬೇಕು," ಎಂದು ಸೂಚಿಸಿದರು.



ವಿಶೇಷ ಆಯುಕ್ತರಾದ ಬಸವರಾಜು, ತುಳಸಿ ಮದ್ದಿನೇನಿ, ಪ್ರಧಾನ ಎಂಜಿನಿಯರ್ ಎಂ.ಆರ್.ವೆಂಕಟೇಶ್, ವಲಯ ಜಂಟಿ ಆಯುಕ್ತರಾದ ಚಿದಾನಂದ, ವೀರಭದ್ರಸ್ವಾಮಿ, ಸ್ಮಾರ್ಟ್ ಸಿಟಿಯ ಮುಖ್ಯ ಎಂಜಿನಿಯರ್ ರಂಗನಾಥ ನಾಯ್ಕ್, ದೇವರಾಜ್ ಉಪಸ್ಥಿತರಿದ್ದರು.

ವಿಕ ವಿಜಯ ಕರ್ನಾಟಕ

| Date | 26-11-2020 |
|---|---|
| Page No | 9 |

### ತಮಿಳುನಾಡಿನಿಂದ ಆನೇಕಲ್ ಪಟ್ಟಣದ ಮೂಲಕ ನಗರ ಪ್ರವೇಶ

# ಕಳ್ಳದಾರಿಯಲ್ಲಿ ಟಿಪ್ಪರ್ ಸಂಚಾರ

ವಿಕ ವಿಶೇಷ

■ **ಸಾಗರ್ ಎಂ.** ಆನೇಕಲ್

ಜಲ್ಲಿ, ಎಂ.ಸ್ಯಾಂಡ್ ಸಾಗಿಸುವ ಟಿಪ್ಪರ್‌ಗಳು ತಮಿಳುನಾಡಿನಿಂದ ಚೆಕ್‌ಪೋಸ್ಟ್ ತಪ್ಪಿಸಿ ಕಳ್ಳದಾರಿ ಮೂಲಕ ಆನೇಕಲ್ ಪಟ್ಟಣ ಹಾಗೂ ನಗರ ಪ್ರವೇಶಿಸುತ್ತಿವೆ. ನಿಗದಿತ ಸಾಮರ್ಥ್ಯಕ್ಕಿಂತ ಹೆಚ್ಚು ಭಾರ ಹೊತ್ತು ಸಾಗುವ ಲಾರಿಗಳಿಂದಾಗಿ ರಸ್ತೆ ಹಾಳಾಗುತ್ತಿವೆಯಲ್ಲದೆ, ಮಾಲಿನ್ಯ ಉಂಟಾಗುತ್ತಿದೆ. ಜತೆಗೆ ರಾಜ್ಯದ ಬೊಕ್ಕಸಕ್ಕೂ ನಷ್ಟವಾಗುತ್ತಿದೆ.

ತಮಿಳುನಾಡಿನ ಹೊಸೂರು ಮತ್ತು ತಳಿ ಭಾಗಗಳಿಂದ ಬರುವ ಟಿಪ್ಪರ್ ಸೇರಿ ಯಾವುದೇ ವಾಹನಗಳು ಅತ್ತಿಬೆಲೆ ಚೆಕ್‌ಪೋಸ್ಟ್ ಮೂಲಕ ನಗರ ಪ್ರವೇಶಿಸಬೇಕು. ಆದರೆ, ಟಿಪ್ಪರ್ ಲಾರಿಗಳು ಆನೇಕಲ್ ತಾಲೂಕಿನ ಸಮಂದೂರು ಗಡಿಭಾಗದಿಂದ ಆನೇಕಲ್ ಪಟ್ಟಣ ಮಾರ್ಗವಾಗಿ ನಗರದ ನಾನಾ ಕಡೆ ಸಾಗುತ್ತಿವೆ. ಸಮಂದೂರಿನಲ್ಲಿ ಯಾವುದೇ ಚೆಕ್‌ಪೋಸ್ಟ್ ಇಲ್ಲ.

ಚೆಕ್‌ಪೋಸ್ಟ್‌ನಲ್ಲಿ ನೀಡಬೇಕಾದ ಸುಂಕ ತಪ್ಪಿಸಲು ಟಿಪ್ಪರ್‌ಗಳು ಕಳ್ಳದಾರಿಯಲ್ಲಿ ಸಂಚರಿಸುತ್ತಿವೆ.

**ಲಕ್ಷಾಂತರ ರೂ. ನಷ್ಟ :** ಸರಕಾರದ ಸುತ್ತೋಲೆ ಪ್ರಕಾರ, ಪ್ರತಿ ಟನ್‌ಗೆ 70 ರೂ.ನಂತೆ ಗಣಿಗಾರಿಕಾ ಇಲಾಖೆಗೆ ಸುಂಕ ಪಾವತಿಸಬೇಕು. ಒಂದು ಟಿಪ್ಪರ್ ಗರಿಷ್ಠ 16 ರಿಂದ 18 ಟನ್ ತೂಕದ ಸರಕು ಹೊತ್ತೊಯ್ಯಬಹುದು. ಹೆಚ್ಚುವರಿ ತೂಕ ಇದ್ದಲ್ಲಿ ದಂಡ ಕಟ್ಟಬೇಕಾಗುತ್ತದೆ. ಇವೆಲ್ಲವನ್ನೂ ಲೆಕ್ಕ ಹಾಕಿದರೆ ಟಿಪ್ಪರ್ ಒಂದು ರಾಜ್ಯ ಪ್ರವೇಶಿಸಬೇಕಾದರೆ ಚೆಕ್‌ಪೋಸ್ಟ್‌ನಲ್ಲಿ 2500 ರಿಂದ 2800 ರೂ. ಸುಂಕ ಪಾವತಿಸಬೇಕು.

ಅಂದಾಜು ದಿನಕ್ಕೆ 500 ರಿಂದ 800 ಟಿಪ್ಪರ್ ಲಾರಿಗಳು ಅಕ್ರಮವಾಗಿ ಪಟ್ಟಣ ಪ್ರವೇಶ ಮಾಡುತ್ತಿವೆ. ಪ್ರತಿ ಲಾರಿಯಿಂದ 2500 ರೂ. ನಂತೆ ದಿನಕ್ಕೆ ಅಂದಾಜು ಹನ್ನೆರಡು ಲಕ್ಷಕ್ಕೂ ಹೆಚ್ಚು ಸುಂಕದ ಹಣ ರಾಜ್ಯ ಸರಕಾರಕ್ಕೆ ನಷ್ಟವಾಗುತ್ತಿದೆ. ವರ್ಷಕ್ಕೆ ಕೋಟಿ ರೂ. ಲೆಕ್ಕದಲ್ಲಿ ನಷ್ಟವಾಗುತ್ತಿದ್ದರೂ ಅಧಿಕಾರಿಗಳು ಕಣ್ಮುಚ್ಚಿ ಕುಳಿತಿದ್ದಾರೆ. ಟಿಪ್ಪರ್ ಲಾರಿಗಳ ಓಡಾಟದಿಂದ ಪಟ್ಟಣದ ರಸ್ತೆಗಳು ಸಂಪೂರ್ಣ ಹಾಳಾಗಿವೆ.



ಆನೇಕಲ್ ಪಟ್ಟಣದಲ್ಲಿ ಟಿಪ್ಪರ್ ಲಾರಿಗಳ ಸಂಚಾರ

**ನಿಗದಿತ ಸಾಮರ್ಥ್ಯಕ್ಕಿಂತ ಹೆಚ್ಚು ಜಲ್ಲಿ ತುಂಬಿಸಿ ಸಾಗಣೆ**

**ರಸ್ತೆ ಹಾಳು, ಧೂಳಿನ ಕಿರಿಕಿರಿ। ರಾಜ್ಯ ಸರಕಾರದ ಬೊಕ್ಕಸಕ್ಕೆ ನಷ್ಟ**

ಟಿಪ್ಪರ್ ಲಾರಿಗಳು ಅಕ್ರಮವಾಗಿ ಪಟ್ಟಣ ಪ್ರವೇಶಿಸುತ್ತಿರುವುದು ಗಮನಕ್ಕೆ ಬಂದಿದೆ. ಈ ಸಂಬಂಧ ಕ್ರಮ ಕೈಗೊಳ್ಳುವಂತೆ ಆರ್‌ಟಿಒ, ಪೊಲೀಸ್ ಮತ್ತು ಗಣಿಗಾರಿಕೆ ಇಲಾಖೆಗಳಿಗೆ ಈಗಾಗಲೇ ಪತ್ರ ಬರೆದಿದ್ದೇನೆ. ಅವರು ಕ್ರಮ ಕೈಗೊಳ್ಳದಿದ್ದಲ್ಲಿ ನಾವೇ ಬೀದಿಗಿಳಿದು ಲಾರಿ ಸಂಚಾರ ತಡೆಯುತ್ತೇವೆ.

**ಎನ್.ಎಸ್ ಪದ್ಮನಾಭ,** ಅಧ್ಯಕ್ಷ, ಆನೇಕಲ್ ಪುರಸಭೆ

ನಿಗದಿತ ಸಾಮರ್ಥ್ಯಕ್ಕಿಂತ ಹೆಚ್ಚು ತೂಕದ ಸರಕು ಹೊತ್ತು ಕಳ್ಳದಾರಿಯಲ್ಲಿ ಸಂಚರಿಸುವ ಲಾರಿಗಳ ವಿರುದ್ಧ ದೂರು ದಾಖಲಿಸುತ್ತಿದ್ದೇವೆ. ನಮ್ಮಲ್ಲಿ ಸಿಬ್ಬಂದಿ ಕೊರತೆ ಇದ್ದು ಲಾರಿಗಳ ಅಕ್ರಮ ಸಂಚಾರಕ್ಕೆ ಕಡಿವಾಣ ಹಾಕಲು ಸಾಧ್ಯವಾಗಿಲ್ಲ.

**ನಾಗಿರೆಡ್ಡಿ,** ಪ್ರಾದೇಶಿಕ ಸಾರಿಗೆ ಅಧಿಕಾರಿ, ಆನೇಕಲ್

ಟಿಪ್ಪರ್‌ಗಳ ಅಕ್ರಮ ಸಂಚಾರಕ್ಕೆ ಕಡಿವಾಣ ಹಾಕಲು ಇನ್ನೆರಡು ದಿನದಲ್ಲಿ ಹೊಸ ಚೆಕ್‌ಪೋಸ್ಟ್ ನಿರ್ಮಿಸಿ, ಸಿಬ್ಬಂದಿ ನಿಯೋಜಿಸಲಾಗುವುದು.

**ಪ್ರತಿಮಾ,** ಹಿರಿಯ ಭೂ ವಿಜ್ಞಾನಿ, ಗಣಿ ಮತ್ತು ಭೂವಿಜ್ಞಾನ ಇಲಾಖೆ



ಟಿಪ್ಪರ್ ಲಾರಿಗಳಿಂದ ಹಾಳಾಗಿರುವ ರಸ್ತೆ

VK ವಿಜಯ ಕರ್ನಾಟಕ

| Date | 26-11-2020 |
| --- | --- |
| Page No | 9 |

# ನ.30ರಿಂದ ಸಕಾಲ ಸಪ್ತಾಹ

■ **ವಿಕ ಸುದ್ದಿಲೋಕ** ಬೆಂಗಳೂರು

ಬಿಬಿಎಂಪಿಯು ಎಲ್ಲ ಪ್ರಮುಖ ಕಚೇರಿಗಳಲ್ಲಿ ನ.30ರಿಂದ ಡಿ.5ರವರೆಗೆ ಸಕಾಲ ಸಪ್ತಾಹವನ್ನು ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಸಕಾಲದಡಿ ಅರ್ಜಿ ಸಲ್ಲಿಸಿ, ಸೇವೆಗಳನ್ನು ಪಡೆಯಬಹುದಾಗಿದೆ.

**ನಿಗದಿತ ಕಾಲಾವಧಿಯಲ್ಲಿ ವಿಲೇವಾರಿ**

ಪಾಲಿಕೆಯ ಎಲ್ಲ ವಲಯಗಳ ಸಹಾಯಕ ಕಂದಾಯ ಅಧಿಕಾರಿಗಳ ಕಚೇರಿಗಳು, ವಲಯ ಆರೋಗ್ಯ ವೈದ್ಯಾಧಿಕಾರಿಗಳು, ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್‌ಗಳು, ಸಹಾಯಕ ನಿರ್ದೇಶಕರು (ನಗರ ಯೋಜನೆ), ಕಾರ್ಯನಿರ್ವಾಹಕ ಎಂಜಿನಿಯರ್‌ಗಳು(ಯೋಜನೆ ಕೇಂದ್ರ-1) ಮತ್ತು ಉಪ ಅರಣ್ಯ ಸಂರಕ್ಷಣಾಧಿಕಾರಿಯವರ ಕೇಂದ್ರ ಕಚೇರಿಗಳಲ್ಲಿ ಸಕಾಲ ಸಪ್ತಾಹ ನಡೆಯಲಿದೆ.

ಖಾತಾ ವರ್ಗಾವಣೆ, ನೋಂದಣಿ, ವಿಭಜನೆ, ಖಾತಾ ಒಗ್ಗೂಡುವಿಕೆ ಸೇರಿದಂತೆ ಇನ್ನಿತರೆ ಸೇವೆಗಳನ್ನು ಕಂದಾಯ ಇಲಾಖೆಯಿಂದ ಪಡೆದುಕೊಳ್ಳಬಹುದಾಗಿದೆ. ನಾನಾ ಪ್ರಮಾಣ ಪತ್ರ ಪಡೆಯಲು ಅರ್ಜಿ ಸಲ್ಲಿಸಬಹುದಾಗಿದೆ.

ಸಕಾಲದಡಿ ಹೊಸದಾಗಿ ಸ್ವೀಕರಿಸುವ ಅರ್ಜಿಗಳನ್ನು ನಿಗದಿತ ಕಾಲಮಿತಿಯೊಳಗೆ ವಿಲೇವಾರಿ ಮಾಡಬೇಕು. ಇಲಾಖೆಗಳ ಕಚೇರಿಗಳಲ್ಲಿ ಸಕಾಲ ಸಪ್ತಾಹ, ಸೇವೆಗಳ ವಿವರವನ್ನೊಳಗೊಂಡ ಬ್ಯಾನರ್‌ಗಳನ್ನು ಪ್ರದರ್ಶಿಸಬೇಕು. ಸಪ್ತಾಹದ ಅಂತ್ಯದಲ್ಲಿ ವಿಲೇವಾರಿ ಮಾಡಲಾದ ಅರ್ಜಿಗಳ ಕುರಿತು ಸಕಾಲ ಮಿಷನ್‌ಗೆ ವರದಿ ನೀಡಬೇಕು ಎಂದು ಪಾಲಿಕೆಯ ಸಕಾಲ ನೋಡಲ್ ಅಧಿಕಾರಿ ಮಂಜುನಾಥ್ ಆದೇಶಿಸಿದ್ದಾರೆ.

ವಿಜಯವಾಣಿ
ಕನ್ನಡಿಗರ ಧ್ವನಿ

| Date | 26-11-2020 |
| --- | --- |
| Page No | 3 |

# ಬುಧವಾರ ನಗರದಲ್ಲಿ 916 ಹೊಸ ಪ್ರಕರಣ

**ಬೆಂಗಳೂರು:** ಸಿಲಿಕಾನ್ ಸಿಟಿಯಲ್ಲಿ ಬುಧವಾರ 916 ಜನರಲ್ಲಿ ಕರೊನಾ ಸೋಂಕು ಪತ್ತೆಯಾಗುವ ಮೂಲಕ ಒಟ್ಟು ಪ್ರಕರಣಗಳ ಸಂಖ್ಯೆ 3,66,233ಕ್ಕೆ ಏರಿಕೆಯಾಗಿದೆ. 602 ಮಂದಿ ಗುಣಮುಖರಾಗಿದ್ದು, ಈವರೆಗೆ 3,43,771 ಮಂದಿ ಆಸ್ಪತ್ರೆಯಿಂದ ಬಿಡುಗಡೆಗೊಂಡಿದ್ದಾರೆ. ಬುಧವಾರ 11 ಮಂದಿ ಬಲಿಯಾಗಿದ್ದು, ಒಟ್ಟು ಕೋವಿಡ್ ಸಾವಿನ ಸಂಖ್ಯೆ 4,101ಕ್ಕೆ ಏರಿಕೆಯಾಗಿದೆ. ಕೋವಿಡ್ ನಿಗದಿತ ಆಸ್ಪತ್ರೆ, ಆರೈಕೆ ಕೇಂದ್ರಗಳು ಹಾಗೂ ಮನೆ ನಿಗಾದಲ್ಲಿ 1,83,60 ಜನರಿದ್ದಾರೆ. 206 ಮಂದಿ ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

**» ಕರೊನಾದಿಂದ 602 ಮಂದಿ ಗುಣಮುಖ, 11 ಸಾವು**

ವಿಜಯವಾಣಿ
ಕನ್ನಡಿಗರ ಧ್ವನಿ

| Date | 26-11-2020 |
|---|---|
| Page No | 4 |

# 30ರಿಂದ ಸಕಾಲ ಸಪ್ತಾಹ

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯ ಕಚೇರಿಗಳಲ್ಲಿ ನ.30ರಿಂದ ಡಿ.5ರವರೆಗೆ ಸಕಾಲ ಸಪ್ತಾಹ ಆಚರಿಸುವಂತೆ ಪಾಲಿಕೆ ಆಡಳಿತ ವಿಭಾಗದ ವಿಶೇಷ ಆಯುಕ್ತ ಜೆ. ಮಂಜುನಾಥ್ ಆದೇಶಿಸಿದ್ದಾರೆ. ಸಕಾಲ ಸೇವೆ ಅಡಿಯಲ್ಲಿ ಕಂದಾಯ ಇಲಾಖೆ, ಕಾಮಗಾರಿ ಇಲಾಖೆ, ಆರೋಗ್ಯ ಇಲಾಖೆ, ಯೋಜನೆ ಇಲಾಖೆ ಹಾಗೂ ಅರಣ್ಯ ಇಲಾಖೆಗಳಲ್ಲಿ ನ.30ರಿಂದ ಡಿ.5ರವರೆಗೆ ಖಾತಾ ವರ್ಗಾವಣೆ, ನೋಂದಣಿ, ವಿಭಜನೆ, ಒಗ್ಗೂಡುವಿಕೆ, ಕಟ್ಟಡ ಪರವಾನಗಿ, ವಾಣಿಜ್ಯ ಪರವಾನಗಿ, ರಸ್ತೆ ಅಗೆಯುವ ಅನುಮತಿಯಂತಹ ಸೇವೆಗಳನ್ನು ಶೀಘ್ರ ಇತ್ಯರ್ಥ ಮಾಡುವಂತೆ ಸೂಚಿಸಲಾಗಿದೆ. ಸಕಾಲದಡಿ ಹೊಸದಾಗಿ ಸ್ವೀಕರಿಸುವ ಅರ್ಜಿಗಳನ್ನು ನಿಗದಿತ ಕಾಲಮಿತಿಯಲ್ಲಿ ವಿಲೇವಾರಿ ಮಾಡಬೇಕು ಎಂದು ತಿಳಿಸಿದ್ದಾರೆ. ಸಾರ್ವಜನಿಕರು 98 ಇಲಾಖೆಗಳ 1,025 ಸೇವೆಗಳನ್ನು 'ಸಕಾಲ'ದಡಿ ಪಡೆಯಬಹುದು. ವಿವರಕ್ಕೆ 080- 4455 4455 ಸಂಪರ್ಕಿಸಿ.

» **98 ಇಲಾಖೆಗಳ 1,025 ಸೇವೆ**

| Date | 26-11-2020 |
|---|---|
| Page No | 5A |

ವಿಜಯವಾಣಿ
ಕನ್ನಡಿಗರ ಧ್ವನಿ

### ಪಾಲಿಕೆ ಆಡಳಿತಾಧಿಕಾರಿ ಗೌರವ್ ಗುಪ್ತ ಹೇಳಿಕೆ | ಚಿಕ್ಕಪೇಟೆ, ಬಿವಿಕೆ ಅಯ್ಯಂಗಾರ್ ರಸ್ತೆ ಪರಿಶೀಲನೆ

# ಅವೆನ್ಯೂ ರಸ್ತೆ ಸ್ಮಾರ್ಟ್ ಕಾಮಗಾರಿ ಶೀಘ್ರ

**ಬೆಂಗಳೂರು:** ಸ್ಮಾರ್ಟ್ ಸಿಟಿ ಯೋಜನೆಯಡಿ ನಗರದ ಅವೆನ್ಯೂ ಮುಖ್ಯರಸ್ತೆ ಅಭಿವೃದ್ಧಿಗೆ ಯೋಜನೆ ರೂಪಿಸಲಾಗಿದ್ದು, ಈ ರಸ್ತೆಯಲ್ಲಿ ವಾಹನ ಸಂಚಾರ ನಿಷೇಧಿಸಿ, ಬದಲಿ ಮಾರ್ಗಕ್ಕೆ ವ್ಯವಸ್ಥೆ ಮಾಡುತ್ತಲೇ ಕಾಮಗಾರಿ ಆರಂಭಿಸಬೇಕು ಎಂದು ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತ ಅಧಿಕಾರಿಗಳಿಗೆ ಆದೇಶಿಸಿದ್ದಾರೆ.

ಅವೆನ್ಯೂ ರಸ್ತೆ, ಚಿಕ್ಕಪೇಟೆ, ಬಿವಿಕೆ ಅಯ್ಯಂಗಾರ್ ರಸ್ತೆಗಳ ಕಾಮಗಾರಿಯನ್ನು ಬುಧವಾರ ತಪಾಸಣೆ ನಡೆಸಿ ಮಾತನಾಡಿದ ಗೌರವ್, ಅವೆನ್ಯೂ ರಸ್ತೆಯ 1 ಕಿ.ಮೀ. ಅಭಿವೃದ್ಧಿ ಕಾಮಗಾರಿಯನ್ನು ಕೂಡಲೇ ಕೈಗೆತ್ತಿಕೊಳ್ಳುವ ಸಂಬಂಧ ವಾಹನ ಸವಾರರಿಗೆ ಬದಲಿ ಮಾರ್ಗ ಗುರುತಿಸಬೇಕು. ಕಾಮಗಾರಿ ಆರಂಭ, ಮುಕ್ತಾಯ ಹಾಗೂ ಅವಶ್ಯವಿದ್ದಲ್ಲಿ ವಿನ್ಯಾಸ ಮಾರ್ಪಡಿಸಿ ವಾರದೊಳಗೆ ಪಾಲಿಕೆಗೆ ಮಾಸ್ಟರ್ ಪ್ಲಾನ್ ಸಲ್ಲಿಸಬೇಕು. ಜತೆಗೆ ಎಸ್‌ಜೆಪಿ ರಸ್ತೆ ಅಭಿವೃದ್ಧಿಗೆ ಕಾಮಗಾರಿ ಅನುಷ್ಠಾನಗೊಳಿಸಲು ಸಾಧ್ಯವೇ ಎಂಬ ಬಗ್ಗೆ ವರದಿ ನೀಡುವಂತೆ ಸ್ಮಾರ್ಟ್ ಸಿಟಿ ಮುಖ್ಯ ಇಂಜಿನಿಯರ್‌ಗೆ ಸೂಚಿಸಿದರು.

**» ಅಗೆದಿರುವ ರಸ್ತೆಗಳಲ್ಲಿ ಡಾಂಬರೀಕರಣ ಮಾಡಲು ಆದೇಶ**

ಅವೆನ್ಯೂ ರಸ್ತೆಯಲ್ಲಿ ಜಲಮಂಡಳಿಯ ಒಳಚರಂಡಿ ಕಾಮಗಾರಿ ಪೂರ್ಣಗೊಂಡು ತಾತ್ಕಾಲಿಕ ಡಾಂಬರೀ ಕರಣ ಮಾಡಲಾಗಿದೆ. ಇನ್ನು ಚಿಕ್ಕಪೇಟೆ ವ್ಯಾಪ್ತಿಯ ಗುಂಡಪ್ಪ ಬೀದಿ, ಮಾಮೂಲ್‌ಪೇಟೆ, ಹಳೇ ತರಗುಪೇಟೆ, ಸುಲ್ತಾನ್ ಪೇಟೆ, ಒಟಿಸಿ ರಸ್ತೆ, ಅಕ್ಕಿಪೇಟೆ ಹಾಗೂ ಬಳೆಪೇಟೆ ಸೇರಿ ಹಲವು ರಸ್ತೆಗಳಲ್ಲಿ ಜಲಮಂಡಳಿ ಕಾಮಗಾರಿ ಪೂರ್ಣಗೊಂಡ ನಂತರ ಕಾಂಕ್ರೀಟ್‌ನಿಂದ ರಸ್ತೆ ದುರಸ್ತಿ ಮಾಡಲಾಗಿದೆ. ಇನ್ನೂ ಕೆಲವೆಡೆ ರಸ್ತೆ ಅಗೆದಿರುವ ಸ್ಥಳದಲ್ಲಿ ಕಾಂಕ್ರೀಟ್ ಅಥವಾ ಡಾಂಬರೀಕರಣ ಮಾಡಬೇಕು ಎಂದು ಆದೇಶಿಸಿದರು. ಸಂಸದ ಪಿ.ಸಿ. ಮೋಹನ್, ವಿಶೇಷ ಆಯುಕ್ತರಾದ ಬಸವರಾಜು, ತುಳಸಿ ಮದ್ದಿನೇನಿ, ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಎಂ.ಆರ್. ವೆಂಕಟೇಶ್, ವಲಯ ಜಂಟಿ ಆಯುಕ್ತರಾದ ಚಿದಾನಂದ, ವೀರಭದ್ರ ಸ್ವಾಮಿ, ಸ್ಮಾರ್ಟ್ ಸಿಟಿ ಮುಖ್ಯ ಇಂಜಿನಿಯರ್ ರಂಗನಾಥ್ ನಾಯ್ಕ್, ಜಲಮಂಡಳಿ (ಪಶ್ಚಿಮ) ಮುಖ್ಯ ಇಂಜಿನಿಯರ್ ದೇವರಾಜ್ ಮತ್ತಿತರ ಅಧಿಕಾರಿಗಳು ಹಾಜರಿದ್ದರು.



ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತ ಬುಧವಾರ ಚಿಕ್ಕಪೇಟೆಯಲ್ಲಿ ಕಾಮಗಾರಿಗಳ ಪರಿಶೀಲನೆ ನಡೆಸಿದರು. ಸಂಸದ ಪಿ.ಸಿ.ಮೋಹನ್, ಪಾಲಿಕೆ ಅಧಿಕಾರಿಗಳು ಜತೆಗಿದ್ದರು.

## ಮಾಸ್ಟರ್ ಪ್ಲಾನ್ ಆಧರಿಸಿ ಆರಂಭವಾಗಲಿದೆ ಕೆಲಸ

ಚಿಕ್ಕಪೇಟೆ ಸುತ್ತಲಿನ ಪ್ರದೇಶಗಳಲ್ಲಿ ಜಲಮಂಡಳಿಯು ನೀರು ಮತ್ತು ಕೊಳಚೆ ನೀರಿನ ಕೊಳವೆಗಳ ವ್ಯವಸ್ಥೆಗೆ ಜಿಐಎಸ್ ಮ್ಯಾಪ್ ಲಭ್ಯ ಇವೆ. ಎಲ್ಲೆಲ್ಲಿ ನೀರಿನ ಸಂಪರ್ಕ ಕಡಿತಗೊಂಡಿದೆ, ಕೊಳವೆಗಳು ಬ್ಲಾಕ್ ಆಗಿವೆ. ಇಲ್ಲಿ ಎಷ್ಟು ಸಾಮರ್ಥ್ಯದ ಕೊಳವೆಗಳು ಅಗತ್ಯವಿದೆ ಎಂಬುದರ ಮಾಸ್ಟರ್ ಪ್ಲಾನ್ ಸಿದ್ಧಪಡಿಸಬೇಕು. ನಂತರ ಹಂತಹಂತವಾಗಿ ಕೈಗೊಳ್ಳುವ ಕಾಮಗಾರಿಗಳ ಬಗ್ಗೆ ವರದಿ ಸಿದ್ಧಪಡಿಸಬೇಕು. ಇಂದಿನ ತಪಾಸಣೆಯಲ್ಲಿ ಸೂಚಿಸಿದ ಎಲ್ಲ ಕಾರ್ಯಗಳ ಸಿದ್ಧತೆ ಬಗ್ಗೆ ಮುಂದಿನ ವಾರ ಸಭೆ ಕರೆದು ಪರಿಶೀಲಿಸಲಾಗುವುದು ಎಂದು ಗೌರವ್ ಗುಪ್ತ ಎಚ್ಚರಿಕೆ ನೀಡಿದರು.

## ವಾಹನ ಸಂಚಾರಕ್ಕೆ ತೊಂದರೆ ಎಂದ ಜನರು

ಮಾಮೂಲ್‌ಪೇಟೆ ಮತ್ತು ಸುಲ್ತಾನ್‌ಪೇಟೆಗಳಲ್ಲಿ ಒಳಚರಂಡಿ ಪೈಪ್ ಅಳವಡಿಕೆಗೆ ರಸ್ತೆಗಳನ್ನು ಅಗೆದಿದ್ದು, ವಾಹನಗಳ ಸಂಚಾರಕ್ಕೆ ತೀವ್ರ ಸಮಸ್ಯೆ ಆಗುತ್ತಿದೆ. ರಸ್ತೆ ಇಕ್ಕೆಲಗಳ ಮೋರಿಗಳಲ್ಲಿನ ಹೂಳು ತೆಗೆದು, ನೀರು ಹರಿಯಲು ವ್ಯವಸ್ಥೆ ಮಾಡುವಂತೆ ಸ್ಥಳೀಯರು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಗೌರವ್ ಗುಪ್ತ, ಎಲ್ಲ ರಸ್ತೆಗಳ ಪಕ್ಕದ ಮೋರಿಗಳ ಹೂಳು ತೆಗೆಯಬೇಕು. ಜತೆಗೆ, ಸುಲ್ತಾನ್ ಪೇಟೆ ಮುಖ್ಯ ರಸ್ತೆಯಲ್ಲಿ ಸ್ಯಾನಿಟರಿ ಲೈನ್ ಮಾಡಲು 300 ಎಂಎಂ ಪೈಪ್‌ಗಳನ್ನು ರಸ್ತೆಯಲ್ಲಿ ಹಾಕಲಾಗಿದ್ದು, ಅವುಗಳನ್ನು ಬೇರೆಡೆ ಸ್ಥಳಾಂತರಿಸಿ ವಾಹನ ಸಂಚಾರಕ್ಕೆ ಅನುಕೂಲ ಮಾಡಿಕೊಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ವಿಶ್ವವಾಣಿ

| Date | 26-11-2020 |
| --- | --- |
| Page No | 4 |


# ಪಾಲಿಕೆಯಲ್ಲಿ ಕನ್ನಡ ರಾಜ್ಯೋತ್ಸವ ನಾಳೆ

**ಬೆಂಗಳೂರು:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನೌಕರರ ಕನ್ನಡ ಸಂಘದ ವತಿಯಿಂದ ಪಾಲಿಕೆ ಕೇಂದ್ರ ಕಚೇರಿ ಆವರಣದಲ್ಲಿ ನ.27ರ ಬೆ.10ಕ್ಕೆ ಕರ್ನಾಟಕ ರಾಜ್ಯೋತ್ಸವ ಆಚರಣೆ ನಡೆಯಲಿದೆ. ಮ.3ಕ್ಕೆ ಪದ್ಮ ಭೂಷಣ ಡಾ.ರಾಜಕುಮಾರ್ ಪುತ್ಥಳಿ ಅನಾವರಣ ಕಾರ್ಯಕ್ರಮ ನಡೆಯಲಿದೆ.

ಉದಯವಾಣಿ
ಜನಮನದ ಜೀವನಾಡಿ

| | |
|---|---|
| Date | 26-11-2020 |
| Page No | II |



ಉದಯವಾಣಿ
ಜನಮನದ ಜೀವನಾಡಿ

| Date | 26-11-2020 |
| --- | --- |
| Page No | II |




ನಗರದ ಅವೆನ್ಯೂ ರಸ್ತೆ ಸೇರಿದಂತೆ ಅದರ ಸುತ್ತಮುತ್ತಲ ಪ್ರದೇಶಗಳಿಗೆ ಸಂಸದ ಪಿ.ಸಿ.ಮೋಹನ್ ಜತೆ ಪಾಲಿಕೆ ಆಡಳಿತಾಧಿಕಾರಿ ಗೌರವ್ ಗುಪ್ತಾ ಬುಧವಾರ ಭೇಟಿ ನೀಡಿ ರಸ್ತೆಗಳ ತಪಾಸಣೆ ನಡೆಸಿದರು.

ಉದಯವಾಣಿ
ಜನಮನದ ಜೀವನಾಡಿ

| Date | 26-11-2020 |
|---|---|
| Page No | 2 |

# ಬಿಬಿಎಂಪಿ ಚುನಾವಣೆ: ಸರ್ಕಾರದ ವಾದ ಒಪ್ಪದ 'ಹೈ'

## ವಾರ್ಡ್ ಪುನರ್‌ವಿಂಗಡಣೆ ಕಾಯ್ದೆ ಅಮಾನತ್ತಿನಲ್ಲಿಟ್ಟು ಚುನಾವಣೆ ನಡೆಸಬಹುದಲ್ಲವೇ: ಸರ್ಕಾರಕ್ಕೆ ಪ್ರಶ್ನೆ

**ಬೆಂಗಳೂರು:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ಪುನರ್‌ವಿಂಗಡಣೆಗೆ ಕಾಯ್ದೆ ಜಾರಿಗೊಳಿಸಿರುವುದೇ ಚುನಾವಣೆ ಮುಂದೂಡಿಕೆಗೆ ಕಾರಣ ಎಂದು ಮೌಖಿಕ ಅಭಿಪ್ರಾಯಪಟ್ಟಿರುವ ಹೈಕೋರ್ಟ್, ಕಾಯ್ದೆಯನ್ನು ಅಮಾನತ್ತಿನಲ್ಲಿಟ್ಟು ಚುನಾವಣೆ ನಡೆಸಬಹುದಲ್ಲವೇ ಎಂದು ಸರ್ಕಾರವನ್ನು ಪ್ರಶ್ನಿಸಿದೆ.



ಪಾಲಿಕೆಗೆ ಶೀಘ್ರ ಚುನಾವಣೆ ನಡೆಸುವಂತೆ ಕೋರಿ ಕಾಂಗ್ರೆಸ್ ಪಾಲಿಕೆಯ ಮಾಜಿ ಸದಸ್ಯ ಎಂ.ಶಿವರಾಜು ಹಾಗೂ ಇತರರು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಎ.ಎಸ್.ಓಕ್ ನೇತೃತ್ವದ ವಿಭಾಗೀಯ ನ್ಯಾಯಪೀಠ ಬುಧವಾರ ವಿಚಾರಣೆ ನಡೆಸಿತು.

ಸರ್ಕಾರದ ಪರ ವಾದ ಮಂಡಿಸಿದ ಅಡ್ವೋಕೇಟ್ ಜನರಲ್ ಪ್ರಭುಲಿಂಗ ಕೆ.ನಾವದಗಿ, ಚುನಾವಣೆ ಮುಂದೂಡುವ ಯಾವುದೇ ಉದ್ದೇಶ ಸರ್ಕಾರಕ್ಕಿಲ್ಲ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇದೀಗ ವಿಸ್ತಾರವಾಗಿ ಬೆಳೆದಿದೆ. ಬಿಬಿಎಂಪಿ ವಾರ್ಡ್‌ಗಳನ್ನು ಮರು ವಿಂಗಡಣೆ ಮಾಡುವ ಅಗತ್ಯವಿದೆ. ಜಂಟಿ ಸದನ ಸಮಿತಿ ಶಿಫಾರಸ್ಸಿನಂತೆ ವಾರ್ಡ್‌ಗಳ ಮರು ವಿಂಗಡಣೆಗೆ ಪ್ರತ್ಯೇಕ ಕಾಯ್ದೆ ಜಾರಿಗೊಳಿಸಲಾಗಿದೆ. ಹಾಗಾಗಿ ಸದ್ಯಕ್ಕೆ ಚುನಾವಣೆ ನಡೆಸಲು ಸಾಧ್ಯವಾಗುತ್ತಿಲ್ಲ, ಮರು ವಿಂಗಡಣೆ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಚುನಾವಣೆ ನಡೆಸಲಾಗುವುದು. ವಾರ್ಡ್ ಪುನರ್ ವಿಂಗಡಣೆ ಕಾರ್ಯ ಕೈಗೆತ್ತಿಕೊಳ್ಳಲು ವಿಳಂಬವಾಗಿದ್ದಕ್ಕೆ ಕೋವಿಡ್ ಮತ್ತಿತರ ಕಾರಣಗಳಿವೆ. ಸದುದ್ದೇಶದಿಂದಲೇ ಸರ್ಕಾರ ಕಾಯ್ದೆ ರೂಪಿಸಿದೆ. ನ್ಯಾಯಾಲಯ ಅದನ್ನು ಅರ್ಥ ಮಾಡಿಕೊಳ್ಳಬೇಕು. ನ್ಯಾಯಾಲಯ ಹೇಳಿದಂತೆ ಕಾಯ್ದೆ ಜಾರಿಯಲ್ಲಿರುವಾಗಅದನ್ನುಅಮಾನತ್ತಿನಲ್ಲಿರಿಸಿ ಚುನಾವಣೆ ನಡೆಸಲಾಗದು ಎಂದು ಹೇಳಿದರು.

ರಾಜ್ಯ ಚುನಾವಣಾ ಆಯೋಗದ ಪರ ವಾದ ಮಂಡಿಸಿದ ಹಿರಿಯ ನ್ಯಾಯವಾದಿ ಕೆ.ಎನ್.ಫಣೀಂದ್ರ ಹೊಸದಾಗಿ ವಾರ್ಡ್‌ಗಳ ಪುನರ್ ವಿಂಗಡಣೆ ಮಾಡುವಾಗ ಒಂದೇ ವಾರ್ಡ್ ಹಲವು ವಿಧಾನಸಭಾ ಕ್ಷೇತ್ರಗಳಲ್ಲಿ ಹಂಚಿ ಹೋಗುವುದನ್ನು ತಪ್ಪಿಸಲಾಗುವುದು ಎಂದು ಸರ್ಕಾರ ಹೇಳಿದೆ. ಆದರೆ, ಹಾಲಿ ವಾರ್ಡ್‌ಗಳಲ್ಲಿಯೇ ಆ ರೀತಿ ಕ್ರಮ ಜರುಗಿಸಲಾಗಿದ್ದು, ಯಾವ ವಾರ್ಡ್ 2-3 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವುದಿಲ್ಲ ಎಂದರು. ಅಲ್ಲದೆ, ಬಿಬಿಎಂಪಿ ವ್ಯಾಪ್ತಿಯಲ್ಲಿ ಏನೂ ಬದಲಾವಣೆಯಾಗಿಲ್ಲ, ಜತೆಗೆ ಸರ್ಕಾರ ಕಾಯ್ದೆ ಜಾರಿಗೆ ತಂದಿರುವುದು ಅಕ್ಟೋಬರ್‌ನಲ್ಲಿ, ಅದಕ್ಕೆ ಸಮಿತಿ ರಚನೆ ಮಾಡಿರುವುದು ಆಯೋಗ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ಎಂದು ವಿವರಿಸಿದರು.

ಅರ್ಜಿದಾರರ ಪರ ವಾದ ಮಂಡಿಸಿದ ಹಿರಿಯ ನ್ಯಾಯವಾದಿ ಪ್ರೊ.ರವಿವರ್ಮ ಕುಮಾರ್, ಜಂಟಿ ಸದನ ಸಮಿತಿ ಶಿಫಾರಸು ಆಧರಿಸಿ ಪಾಲಿಕೆ ವಾರ್ಡ್‌ಗಳ ಪುನರ್‌ವಿಂಗಡಣೆಗೆ ಕಾನೂನು ಜಾರಿಗೊಳಿಸಲಾಗಿದೆ ಎಂದು ಸರ್ಕಾರ ಹೇಳಿದೆ. ಆದರೆ ಸರ್ಕಾರ ಸಮಿತಿ ಬಗ್ಗೆ ತಪ್ಪು ಮಾಹಿತಿ ನೀಡುತ್ತಿದೆ. ಸಮಿತಿ ರಚನೆ ಮಾಡಿದ್ದು ಬಿಬಿಎಂಪಿಗೆ ಹೊಸ ಕಾಯ್ದೆ ರಚಿಸುವ ಸಲುವಾಗಿಯೇ ಹೊರತು, ವಾರ್ಡ್‌ಗಳ ಪುನರ್‌ವಿಂಗಡಣೆಗೆ ಶಿಫಾರಸು ಮಾಡಲು ಅಲ್ಲ, ಕಾನೂನು ಜಾರಿಗೊಳಿಸಿರುವುದು ಪಾಲಿಕೆಯ ಅಧಿಕಾರಾವಧಿ ಮುಕ್ತಾಯದ ಬಳಿಕ. ಹೀಗಾಗಿ ಅದನ್ನು ಒಪ್ಪಲಾಗದು, ಸಾಂವಿಧಾನದ ಕಲಂ 243(ಯು) ಅನ್ವಯ ಚುನಾವಣೆಗಳನ್ನು ನಡೆಸಲೇಬೇಕು ಎಂದು ಹೇಳಿದರು.

ಈಗಾಗಲೇ ಹೈಕೋರ್ಟ್ ವಿಭಾಗೀಯ ನ್ಯಾಯಪೀಠ ಗ್ರಾಪಂ ಚುನಾವಣೆ ತೀರ್ಪಿನಲ್ಲಿ ಚುನಾವಣೆ ನಡೆಸುವ ವಿಚಾರವಾಗಿ ಸ್ಪಷ್ಟ ನಿರ್ದೇಶನ ನೀಡಿದೆ. ಚುನಾವಣೆ ಮುಂದೂಡುವ ಅಧಿಕಾರ ಸರ್ಕಾರಕ್ಕಿಲ್ಲ, ಅವಧಿಗೆ ಮುನ್ನ ಚುನಾವಣೆ ನಡೆಸುವುದು ಚುನಾವಣಾ ಆಯೋಗದ ಸಾಂವಿಧಾನಿಕ ಕರ್ತವ್ಯ. ಈ ವಿಚಾರದಲ್ಲಿ ಸರ್ಕಾರದ ಯಾವುದೇ ಪಾತ್ರವಿಲ್ಲ, ಹಾಗೆಯೇ ಸರ್ಕಾರದ ನಿಲುವು ಮುಖ್ಯವಲ್ಲ ಎಂದು ಸ್ಪಷ್ಟಪಡಿಸಲಾಗಿದೆ ಎಂದು ವಿವರಿಸಿದರು.

### ಕೋವಿಡ್‌ಗಿಂತ ಕಾಯ್ದೆ ಜಾರಿಯೇ ಚುನಾವಣೆ ವಿಳಂಬಕ್ಕೆ ಕಾರಣ



**ಈ ವೇಳೆ ಚುನಾವಣೆ ವಿಳಂಬಕ್ಕೆ ಪ್ರಮುಖ ಕಾರಣ ಕೋವಿಡ್-19. ಇದರ ಜತೆಗೆ ವಾರ್ಡ್ ಪುನರ್‌ವಿಂಗಡಣೆಗೆ ಕಾಯ್ದೆ ಜಾರಿಗೊಳಿಸಿರುವುದರಿಂದ ಸದ್ಯಕ್ಕೆ ಚುನಾವಣೆ ನಡೆಸಲು ಸಾಧ್ಯವಾಗುತ್ತಿಲ್ಲ ಎಂಬ ಸರ್ಕಾರದ ವಾದ ಒಪ್ಪುವಂತಹದ್ದಲ್ಲ. ಕೋವಿಡ್‌ಗಿಂತ ಕಾಯ್ದೆ ಜಾರಿಯೇ ಚುನಾವಣೆ ವಿಳಂಬಕ್ಕೆ ಕಾರಣ. ಒಂದೊಮ್ಮೆ ಕಾಯ್ದೆ ಜಾರಿಗೊಳಿಸಿರುವುದನ್ನು ನ್ಯಾಯಾಲಯ ಎತ್ತಿಹಿಡಿದರೆ, ಸಕಾಲದಲ್ಲಿ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸಬೇಕು ಎಂಬ ಸಾಂವಿಧಾನಿಕ ಬಾಧ್ಯತೆಗೆ ಸೋಲು ಕಾಣಿಸಿದಂತಾಗುತ್ತದೆ. ಈಗಾಗಲೇ ಚುನಾವಣೆಗೆ ಸಿದ್ಧತೆ ಮಾಡಿಕೊಳ್ಳಲಾಗಿದೆ. ಕೋಟ್ಯಂತರ ರೂ.ವೆಚ್ಚ ಮಾಡಿ ಮತದಾರರ ಪಟ್ಟಿ ಸಿದ್ಧಪಡಿಸಲಾಗಿದೆ. ಹೀಗಾಗಿ ಕಾಯ್ದೆಯನ್ನು ಅಮಾನತ್ತಿನಲ್ಲಿಟ್ಟು ಚುನಾವಣೆ ನಡೆಸಿದರೆ ಸಾಂವಿಧಾನಿಕ ಬಾಧ್ಯತೆ ಪಾಲಿಸಿದಂತಾಗುತ್ತದಲ್ಲವೇ ಎಂದು ಸರ್ಕಾರವನ್ನು ಪ್ರಶ್ನಿಸಿತು. ಕೊನೆಗೆ ಸರ್ಕಾರ, ಚುನಾವಣಾ ಆಯೋಗ ಹಾಗೂ ಅರ್ಜಿದಾರರ ವಾದ-ಪ್ರತಿವಾದ ಆಲಿಸಿ ವಿಚಾರಣೆ ಪೂರ್ಣಗೊಳಿಸಿದ ನ್ಯಾಯಪೀಠ ತೀರ್ಪು ಕಾಯ್ದಿರಿಸಿತು.**

ಸಂಯುಕ್ತ ಕರ್ನಾಟಕ

| Date | 26-11-2020 |
| --- | --- |
| Page No | 8 |

# 916 ಮಂದಿಗೆ ಕೊರೊನಾ

**ಬೆಂಗಳೂರು:** ರಾಜಧಾನಿ ಬೆಂಗಳೂರಿನಲ್ಲಿ ಕಳೆದ 24 ಗಂಟೆಗಳಲ್ಲಿ 916 ಮಂದಿಗೆ ಕೊರೊನಾ ಸೋಂಕು ದೃಢಪಟ್ಟಿದೆ. ಬುಧವಾರ ಬೆಂಗಳೂರಿನಲ್ಲಿ 11 ಮಂದಿ ಕೊರೊನಾ ಮಹಾಮಾರಿಗೆ ಬಲಿಯಾಗಿದ್ದಾರೆ. ರಾಜ್ಯದಲ್ಲಿ ಕಳೆದ 24 ಗಂಟೆಗಳಲ್ಲಿ 1630 ಹೊಸ ಕೊರೊನಾ ಪ್ರಕರಣಗಳು ದಾಖಲಾಗಿವೆ. ಈ ಮೂಲಕ ಒಟ್ಟು ಸೋಂಕಿತರ ಸಂಖ್ಯೆ 8,78,055ಕ್ಕೆ ಏರಿಕೆಯಾಗಿದೆ. ಇನ್ನು ಸದ್ಯ ರಾಜ್ಯದಲ್ಲಿ 24,890 ಸಕ್ರಿಯ ಪ್ರಕರಣಗಳಿವೆ.

ರಾಜ್ಯದಲ್ಲಿ ಬುಧವಾರ 19 ಮಂದಿ ಕೊರೊನಾಗೆ ಬಲಿಯಾಗಿದ್ದು ಒಟ್ಟು ಸಾವಿನ ಸಂಖ್ಯೆ 11,714ಕ್ಕೆ ತಲುಪಿದೆ. ಮಹಾಮಾರಿಯಿಂದ ಗುಣಮುಖವಾಗಿ 1333 ಮಂದಿ ಡಿಸ್ಚಾರ್ಜ್ ಆಗಿದ್ದಾರೆ. ಈ ಮೂಲಕ ಒಟ್ಟು ಗುಣಮುಖರಾದವರ ಸಂಖ್ಯೆ 8,41,432ಕ್ಕೆ ಏರಿದೆ ಎಂದು ಇಲಾಖೆ ತಿಳಿಸಿದೆ.

ಸಂಯುಕ್ತ ಕರ್ನಾಟಕ

| Date | 26-11-2020 |
| --- | --- |
| Page No | 11 |

# ಬಿಬಿಎಂಪಿ ಚುನಾವಣೆ ತೀರ್ಪು ಕಾಯ್ದಿರಿಕೆ

**ಸಂ.ಕ.ಸಮಾಚಾರ ಬೆಂಗಳೂರು**

ಬಿಬಿಎಂಪಿಗೆ ಶೀಘ್ರ ಚುನಾವಣೆ ನಡೆಸುವಂತೆ ಕೋರಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ಪೂರ್ಣಗೊಳಿಸಿರುವ ಹೈಕೋರ್ಟ್ ತೀರ್ಪು ಕಾಯ್ದಿರಿಸಿದೆ.

ಬಿಬಿಎಂಪಿಗೆ ಶೀಘ್ರ ಚುನಾವಣೆ ನಡೆಸುವಂತೆ ಕೋರಿ ಮಾಜಿ ಕಾರ್ಪೊರೇಟರ್‌ಗಳಾದ ಎಂ. ಶಿವರಾಜು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಎ.ಎಸ್ ಓಕಾ ನೇತೃತ್ವದ ವಿಭಾಗೀಯ ಪೀಠ ವಿಚಾರಣೆ ನಡೆಸಿತು.



ಅಡ್ವೊಕೇಟ್ ಜನರಲ್ ಪ್ರಭುಲಿಂಗ ಕೆ. ನಾವದಗಿ ವಾದ ಮಂಡಿಸಿ, ಸರ್ಕಾರಕ್ಕೆ ಚುನಾವಣೆ ಮುಂದೂಡುವ ಯಾವುದೇ ಉದ್ದೇಶವಿಲ್ಲ. ಬೆಂಗಳೂರು ನಗರ ವಿಸ್ತಾರವಾಗಿ ಬೆಳೆದಿದೆ. ಹೀಗಾಗಿ ಬಿಬಿಎಂಪಿಯ ವಾರ್ಡ್‌ಗಳನ್ನು ಮರುವಿಂಗಡಣೆ ಮಾಡುವ ಅಗತ್ಯವಿದೆ. ಮರುವಿಂಗಡಣೆ ಬಳಿಕ ಚುನಾವಣೆ ನಡೆಸಲಾಗುವುದು ಎಂದು ಸಮರ್ಥಿಸಿಕೊಂಡರು.

ಇದಕ್ಕೆ ಆಕ್ಷೇಪಿಸಿದ ಅರ್ಜಿದಾರರ ಪರ ವಕೀಲ ಪ್ರೊ. ರವಿವರ್ಮಕುಮಾರ್, ಈಗಾಗಲೇ ಹೈಕೋರ್ಟ್ ವಿಭಾಗೀಯ ಚುನಾವಣೆ ಮುಂದೂಡುವ ಅಧಿಕಾರ ಸರ್ಕಾರಕ್ಕಿಲ್ಲ. ಅವಧಿಗೆ ಮುನ್ನ ಚುನಾವಣೆ ನಡೆಸುವುದು ಚುನಾವಣಾ ಆಯೋಗದ ಸಾಂವಿಧಾನಿಕ ಕರ್ತವ್ಯ ಎಂದು ವಾದಿಸಿದರು.

## ಚಾನೆಲ್ ಮುಖ್ಯಸ್ಥೆಗೆ ಜಾಮೀನು

ಟಿಆರ್‌ಪಿ ಹಗರಣದಲ್ಲಿ ಆರೋಪಿಯಾಗಿರುವ ಖಾಸಗಿ ಸುದ್ದಿ ವಾಹಿನಿಯ ಸಿಒಒ ಪ್ರಿಯಾ ಮುಖರ್ಜಿ ಅವರಿಗೆ ಹೈಕೋರ್ಟ್ 20 ದಿನಗಳ ಕಾಲ ಟ್ರಾನ್ಸಿಟ್ ನಿರೀಕ್ಷಣಾ ಜಾಮೀನು ನೀಡಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಎಫ್‌ಐಆರ್ ದಾಖಲಿಸಿರುವ ಮುಂಬೈ ಪೊಲೀಸರು ಬೆಂಗಳೂರಿನ ಬನ್ನೇರುಘಟ್ಟ ಪೊಲೀಸ್ ಠಾಣೆಗೆ ವಿಚಾರಣೆಗೆ ಹಾಜರಾಗುವಂತೆ ಸೂಚಿಸಿ ನೋಟಿಸ್ ಜಾರಿ ಮಾಡಿದ್ದರಿಂದ ಬಂಧನ ಭೀತಿಯಿಂದ ಪ್ರಿಯಾ ಮುಖರ್ಜಿ ನಿರೀಕ್ಷಣಾ ಜಾಮೀನು ಕೋರಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

**ಟಿಆರ್‌ಪಿ ಹಗರಣ**

ಅರ್ಜಿ ವಿಚಾರಣೆ ನಡೆಸಿದ ನ್ಯಾ.ಎಚ್.ಪಿ. ಸಂದೇಶ್ ಅವರಿದ್ದ ಏಕ ಸದಸ್ಯ ಪೀಠ, ಪ್ರಿಯಾ ಮುಖರ್ಜಿ ಅವರಿಗೆ 20 ದಿನಗಳ ಕಾಲ ಟ್ರಾನ್ಸಿಟ್ ಜಾಮೀನು ನೀಡಿ ಆದೇಶಿಸಿದೆ. ಈ ಅವಧಿಯಲ್ಲಿ ಪೊಲೀಸರು ಒಂದು ವೇಳೆ ಬಂಧಿಸಿದರೆ, 20 ಲಕ್ಷ ಮೊತ್ತದ ಬಾಂಡ್ ಹಾಗೂ ಇಬ್ಬರು ವ್ಯಕ್ತಿಗಳ ಭದ್ರತೆ ಪಡೆದು ಬಿಡುಗಡೆ ಮಾಡಬೇಕು ಎಂದು ನಿರ್ದೇಶಿಸಿದೆ. ಈ 20 ದಿನಗಳ ಬಳಿಕ ಸೂಕ್ತ ಕಾನೂನು ಪರಿಹಾರ ಕಂಡುಕೊಳ್ಳಬಹುದು ಎಂದು ಸ್ಪಷ್ಟಪಡಿಸಿದೆ.

ಸಂಯುಕ್ತ ಕರ್ನಾಟಕ

| Date | 26-11-2020 |
| --- | --- |
| Page No | 11 |


### ವರದಿಗೆ ಒಂದು ವಾರ ಗಡುವು । ಕೂಡಲೇ ರಸ್ತೆ ದುರಸ್ತಿಗೆ ತಾಕೀತು

# ಅವೆನ್ಯೂ ರಸ್ತೆ ಸ್ಮಾರ್ಟ್

**ಸಂ.ಕ.ಸಮಾಚಾರ ಬೆಂಗಳೂರು**

ಒಂದು ಕಿ.ಮೀ ಅವೆನ್ಯೂ ಮುಖ್ಯರಸ್ತೆಯನ್ನು ಸ್ಮಾರ್ಟ್‌ಸಿಟಿ ಯೋಜನೆಯಡಿ ಅಭಿವೃದ್ಧಿಗೆ ಒಂದು ವಾರದಲ್ಲಿ ಯೋಜನಾ ವರದಿ ಸಲ್ಲಿಸುವಂತೆ ಸ್ಮಾರ್ಟ್‌ಸಿಟಿ ಮುಖ್ಯ ಎಂಜಿನಿಯರ್‌ಗೆ ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತ ಸೂಚಿಸಿದ್ದಾರೆ.

ಅವೆನ್ಯೂ ರಸ್ತೆ ಹಾಗೂ ಸುತ್ತಮುತ್ತಲಿನ ಪ್ರದೇಶದ ರಸ್ತೆಗಳ ತಪಾಸಣೆ ನಡೆಸಿದ ಬಳಿಕ ಮಾತನಾಡಿದ ಅವರು, ಒಂದು ಕಿ.ಮೀ ಅವೆನ್ಯೂ ರಸ್ತೆಯನ್ನು ಅಭಿವೃದ್ಧಿಗೆ ಯೋಜನಾ ವರದಿ ಹಾಗೂ ವಾಹನ ಸಂಚಾರಕ್ಕೆ ಬದಲಿ ಮಾರ್ಗದ ಗುರುತಿಸಿ ಒಂದು ವಾರದಲ್ಲಿ ವರದಿ ಸಲ್ಲಿಕೆ ಮಾಡಬೇಕು. ಯೋಜನೆಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವ ನಿಟ್ಟಿನಲ್ಲಿ ಕಾರ್ಯಯೋಜನೆ ರೂಪಿಸಬೇಕು ಹಾಗೂ ಎಸ್‌ಜೆಪಿ ರಸ್ತೆಯನ್ನು ಸಹ ಸ್ಮಾರ್ಟ್‌ಸಿಟಿ ಯೋಜನೆಯಡಿ ಅಭಿವೃದ್ಧಿಪಡಿಸಲು ಸಾಧ್ಯವೇ ಎಂದು ಪ್ರಶ್ನಿಸಿದ್ದಾರೆ.

ಗುಂಡಪ್ಪರಸ್ತೆ, ಮಾಮೂಲ್‌ಪೇಟೆ, ಹಳೇ ತರಗುಪೇಟೆ, ಸುಲ್ತಾನ್‌ಪೇಟೆ, ಓಟಿಸಿ ರಸ್ತೆ, ಅಕ್ಕಿಪೇಟೆ ಹಾಗೂ ಬಳೆಪೇಟೆ ಸೇರಿದಂತೆ ಹಲವು ರಸ್ತೆಗಳನ್ನು ಕಾಲ್ನಡಿಗೆಯಲ್ಲಿ ಸ್ಥಳ ಪರಿಶೀಲನೆ ನಡೆಸಿದರು. ಈ ವೇಳೆ ಜಲಮಂಡಳಿ ನೀರು ಮತ್ತು ಕೊಳಚೆ ನೀರಿನ ಕೊಳವೆ ಅಳವಡಿಕೆಗೆ ರಸ್ತೆ ಅಗೆದು ಹಾಕಲಾಗಿದೆ. ಇದರಿಂದ ರಸ್ತೆ ಗುಂಡಿ ಬಿದ್ದು ವಾಹನ ಸಂಚಾರ ತೊಂದರೆ ಆಗುತ್ತಿದೆ. ಕೂಡಲೇ ರಸ್ತೆ ದುರಸ್ತಿ ಮಾಡುವಂತೆ ತಿಳಿಸಿದರು.

ಮಾಮೂಲ್ ಪೇಟೆ ಮುಖ್ಯರಸ್ತೆಯಲ್ಲಿ ಜಲಮಂಡಳಿಯ ಒಳಚರಂಡಿ ಕೊಳವೆ ಅಳವಡಿಕೆಗೆ ರಸ್ತೆ ಅಗೆದಿರುವುದರಿಂದ ವಾಹನ ಸಂಚಾರಕ್ಕೆ ತೀವ್ರ ತೊಂದರೆ ಉಂಟಾಗುತ್ತಿದೆ ಎಂದು ಸ್ಥಳೀಯರು ದೂರು ಹೇಳಿದರು. ಅದಕ್ಕೆ ಪ್ರತಿಕ್ರಿಯೆ ನೀಡಿದ ಸಂಸದ ಪಿ.ಸಿ.ಮೋಹನ್, ಮಳೆ ನೀರು ಗಾಲುವೆಗಳಲ್ಲಿ ಹೂಳು ತುಂಬಿಕೊಂಡಿದೆ. ಹೂಳು ತೆಗೆದರೆ ಬಹುತೇಕ ಸಮಸ್ಯೆ ನಿವಾರಣೆಯಾಗಲಿದೆ ಎಂದು ತಿಳಿಸಿದರು. ಅದಕ್ಕೆ ಆಡಳಿತಾಧಿಕಾರಿಗಳು ಕೂಡಲೇ ಕ್ರಮ ವಹಿಸುವಂತೆ ವಲಯ ಜಂಟಿ ಆಯುಕ್ತರು ಮತ್ತು ಮುಖ್ಯ ಎಂಜಿನಿಯರ್‌ಗೆ ಸೂಚಿಸಿದರು.

ಈ ವೇಳೆ ವಿಶೇಷ ಆಯುಕ್ತರಾದ ಬಸವರಾಜು, ತುಳಸಿ ಮದ್ದಿನೇನಿ, ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಎಂ.ಆರ್.ವೆಂಕಟೇಶ್, ವಲಯ ಜಂಟಿ ಆಯುಕ್ತ ಚಿದಾನಂದ, ವೀರಭದ್ರಸ್ವಾಮಿ, ಸ್ಮಾರ್ಟ್‌ಸಿಟಿ ಮುಖ್ಯ ಎಂಜಿನಿಯರ್ ರಂಗನಾಥ್ ನಾಯ್ಕ್, ಜಲಮಂಡಳಿ (ಪಶ್ಚಿಮ) ಮುಖ್ಯ ಎಂಜಿನಿಯರ್ ದೇವರಾಜ್ ಮತ್ತಿತರರಿದ್ದರು.



**ಅವೆನ್ಯೂ ರಸ್ತೆ ಹಾಗೂ ಸುತ್ತಮುತ್ತಲಿನ ರಸ್ತೆಗಳನ್ನು ಪಾಲಿಕೆ ಆಡಳಿತಾಧಿಕಾರಿ ಗೌರವ್ ಗುಪ್ತ, ಸಂಸದ ಪಿ.ಸಿ.ಮೋಹನ್ ಮತ್ತಿತರರು ಪರಿಶೀಲನೆ ನಡೆಸಿದರು.**

> “ಸುಲ್ತಾನ್‌ಪೇಟೆ ಮುಖ್ಯರಸ್ತೆಯಲ್ಲಿ ಸ್ಯಾನಿಟರಿಲೈನ್ ಮಾಡಲು 300 ಎಂ.ಎಂ ಪೈಪ್‌ಗಳನ್ನು ರಸ್ತೆ ಮಾರ್ಗದಲ್ಲೇ ಹಾಕಿರುವ ಪರಿಣಾಮ ವಾಹನ ಸವಾರರಿಗೆ ತೀರಾ ಸಮಸ್ಯೆ ಆಗುತ್ತಿರುವುದನ್ನು ಗಮನಿಸಿ, ಕೂಡಲೇ ಪೈಪ್‌ಗಳನ್ನು ಬೇರೆಡೆ ಸ್ಥಳಾಂತರಿಸಲು ಜಲಮಂಡಳಿ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.
>
> ■ **ಗೌರವ್ ಗುಪ್ತ** | ಪಾಲಿಕೆ ಆಡಳಿತಾಧಿಕಾರಿ

ಹೊಸ ದಿಗಂತ

| Date | 26-11-2020 |
|---|---|
| Page No | 12 |

ಹೊಸ ದಿಗಂತ

12

26 Nov 2020


ಬಿಬಿಎಂಪಿ ಚುನಾವಣೆ | ಹೈಕೋರ್ಟ್ ಮುಂದೆ ಸರ್ಕಾರ ಸ್ಪಷ್ಟನೆ | ವಾರ್ಡ್ ವಿಂಗಡಣೆ ಪ್ರಕ್ರಿಯೆಗೆ ಚಾಲನೆ

# ಚುನಾವಣೆ ಮುಂದೂಡಿಕೆ ಉದ್ದೇಶ ಇಲ್ಲ

- ಬೆಂಗಳೂರು ನಗರವೀಗ ಬೆಳೆದಿದೆ
- ವಾರ್ಡುಗಳ ಪುನರ್‌ವಿಂಗಡಣೆಯೂ ಆಗಬೇಕಿದೆ
- ವಾರ್ಡ್ ವಿಂಗಡಣೆಗೆ ಸಮಯಾವಕಾಶ ಅಗತ್ಯ
- ಸರ್ಕಾರದ ಪರವಾಗಿ ಎಜಿ ವಾದ ಮಂಡನೆ
- ಅವಧಿ ಮುಗಿಯುವ ಮುನ್ನ ಚುನಾವಣೆ: ರವಿವರ್ಮ

**ಬೆಂಗಳೂರು:** ಬಿಬಿಎಂಪಿ ವಾರ್ಡುಗಳ ವಿಂಗಡಣೆ ಪ್ರಕ್ರಿಯೆ ಪೂರ್ಣಗೊಳ್ಳಬೇಕಿದೆ. ಆದರೆ ಚುನಾವಣೆಗಳನ್ನು ಮುಂದೂಡುವ ಉದ್ದೇಶ ಸರ್ಕಾರಕ್ಕೆ ಇಲ್ಲ ಎಂದು ಅಡ್ವೋಕೇಟ್ ಜನರಲ್ ಹೈಕೋರ್ಟ್ ಮುಂದೆ ಸ್ಪಷ್ಟಪಡಿಸಿದ್ದಾರೆ.

ಮುಖ್ಯ ನ್ಯಾಯಮೂರ್ತಿ ಎ.ಎಸ್ ಓಕಾ ಅವರಿದ್ದ ವಿಭಾಗೀಯ ಪೀಠದ ಮುಂದೆ ಬುಧವಾರದಂದು ವಾದ ಮಂಡಿಸಿದ ಅಡ್ವೋಕೇಟ್ ಜನರಲ್ ಪ್ರಭುಲಿಂಗ ನಾವಡಗಿ, ಸರ್ಕಾರದ ನಿಲುವನ್ನು ಪ್ರತಿಪಾದಿಸಿದರು. ಬೃಹತ್ ಬೆಂಗಳೂರ ಮಹಾನಗರ ಪಾಲಿಕೆ ವಿಸ್ತಾರವಾಗಿ ಬೆಳೆದಿದ್ದು, ವಾರ್ಡ್‌ಗಳನ್ನು ಮರುವಿಂಗಡಣೆ ಮಾಡುವ ಅವಶ್ಯಕತೆ ಇದೆ. ಹೊರತಾಗಿ ಚುನಾವಣೆ ಮುಂದೂಡುವ ಯಾವುದೇ ಉದ್ದೇಶ ಸರ್ಕಾರಕ್ಕೆ ಇಲ್ಲ ಎಂದು ತಿಳಿಸಿದರು. ಅವಧಿ ಮುಗಿದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ)ಗೆ ಶೀಘ್ರವಾಗಿ ಚುನಾವಣೆ ನಡೆಸುವಂತೆ ಆದೇಶ ಕೋರಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ಪೂರ್ಣಗೊಳಿಸಿದ ಹೈಕೋರ್ಟ್ ಬುಧವಾರದಂದು ತೀರ್ಪು ಕಾದಿರಿಸಿತು ಇದೇ ವೇಳೆ ಅರ್ಜಿದಾರರ ಪರ ವಕೀಲ ಪ್ರೊ.ರವಿವರ್ಮ ಕುಮಾರ್ ವಾದಿಸಿ, ಹೈಕೋರ್ಟ್ ನ ವಿಭಾಗೀಯ ಪೀಠ ಪಂಚಾಯತ್ ವ್ಯಾಪ್ತಿಯ ಚುನಾವಣೆ ತೀರ್ಪಿನಲ್ಲಿ ಚುನಾವಣೆ ನಡೆಸುವಂತೆ ಸ್ಪಷ್ಟ ನಿರ್ದೇಶನ ನೀಡಿದೆ. ಅವಧಿ ಮುಗಿಯುವ ಮುನ್ನವೇ ಚುನಾವಣೆ ನಡೆಸುವುದು ಚುನಾವಣಾ ಆಯೋಗದ ಸಾಂವಿಧಾನಿಕ ಕರ್ತವ್ಯವಾಗಿದೆ. ಆದರೆ ಚುನಾವಣೆ ಮುಂದೂಡುವ ಅಧಿಕಾರ ಸರ್ಕಾರಕ್ಕೆ ಇಲ್ಲ ಎಂದು ತಿಳಿಸಿದರು. ವಾದ ಪ್ರತಿವಾದ ಆಲಿಸಿದ ವಿಭಾಗೀಯ ಪೀಠ ತೀರ್ಪು ಕಾಯ್ದಿರಿಸಿದೆ.



## ಸ್ಮಾರ್ಟ್ ಸಿಟಿ ಯೋಜನಾ ವರದಿ ಸಲ್ಲಿಕೆಗೆ ವಾರ ಗಡುವು



**ಬೆಂಗಳೂರು:** ನಗರದ ಒಂದು ಕಿ.ಮೀ ಅವೆನ್ಯೂ ರಸ್ತೆ(1 ಕಿ.ಮೀ ಉದ್ದ)ಯನ್ನು ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಅಭಿವೃದ್ಧಿಗೆ ಒಂದು ವಾರದಲ್ಲಿ ಯೋಜನಾ ವರದಿ ಸಲ್ಲಿಸುವಂತೆ ಸ್ಮಾರ್ಟ್ ಸಿಟಿ ಮುಖ್ಯ ಎಂಜಿನಿಯರ್‌ಗೆ ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತಾ ಸೂಚಿಸಿದ್ದಾರೆ. ನಗರದ ಅವೆನ್ಯೂರಸ್ತೆ ಗುಂಡಪ್ಪ ರಸ್ತೆ, ಮಾಮೂಲ್ ಪೇಟೆ, ಹಳೇ ತರಗುಪೇಟೆ, ಸುಲ್ತಾನ್‌ಪೇಟೆ, ಓಟಿಸಿ ರಸ್ತೆ, ಅಕ್ಕಿಪೇಟೆ ಹಾಗೂ ಬಳೆಪೇಟೆ ಸೇರಿದಂತೆ ಹಲವು ರಸ್ತೆಗಳನ್ನು ಕಾಲ್ನಡಿಗೆಯಲ್ಲಿ ಸ್ಥಳ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಒಂದು ಕಿ.ಮೀ ಅವೆನ್ಯೂ ರಸ್ತೆಯನ್ನು ಅಭಿವೃದ್ಧಿಗೆ ಯೋಜನಾ ವರದಿ ಹಾಗೂ ವಾಹನ ಸಂಚಾರಕ್ಕೆ ಬದಲಿ ಮಾರ್ಗದ ಗುರುತಿಸಿ ಒಂದು ವಾರದಲ್ಲಿ ಸಲ್ಲಿಕೆ ಮಾಡಬೇಕು. ಯೋಜನೆಯನ್ನು ನಿಗಧಿತ ಅವಧಿಯಲ್ಲಿ ಮುಕ್ತಾಯಗೊಳಿಸುವ ನಿಟ್ಟಿನಲ್ಲಿ ಕಾರ್ಯಯೋಜನೆ ರೂಪಿಸುವಂತೆ ಸ್ಮಾರ್ಟ್ ಸಿಟಿ ಯೋಜನೆಯ ಮುಖ್ಯ ಎಂಜಿನಿಯರ್‌ಗೆ ಸೂಚನೆ ನೀಡಿದರು. ಜತೆಗೆ ಎಸ್‌ಜೆಪಿ ರಸ್ತೆಯನ್ನು ಸಹ ಸ್ಮಾರ್ಟ್ ಸಿಟಿ ಯೋಜನೆಯಡಿ ಅಭಿವೃದ್ಧಿ ಪಡಿಸಲು ಸಾಧ್ಯವೇ ಎಂಬುದರ ಸಾಧ್ಯತಾ ವರದಿ ಸಲ್ಲಿಸುವಂತೆ ಸೂಚಿಸಿದರು. ಮಾಮೂಲ್ ಪೇಟೆ ಮುಖ್ಯರಸ್ತೆಯಲ್ಲಿ ಜಲಮಂಡಳಿಯ ಒಳಚರಂಡಿ ಕೊಳವೆ ಅಳವಡಿಕೆಗೆ ರಸ್ತೆಅಗೆದಿರುವುದರಿಂದ ವಾಹನ ಸಂಚಾರಕ್ಕೆ ತೀವ್ರ ತೊಂದರೆ ಉಂಟಾಗುತ್ತಿದೆ ಎಂದು ಸ್ಥಳೀಯರು ದೂರು ಹೇಳಿದರು. ಅದಕ್ಕೆ ಪ್ರತಿಕ್ರಿಯೆ ನೀಡಿದ ಸಂಸದ ಪಿ.ಸಿ.ಮೋಹನ್, ಮಳೆ ನೀರು ಗಾಲುವೆಗಳಲ್ಲಿ ಹೂಳು ತುಂಬಿಕೊಂಡಿದೆ. ಹೂಳು ತೆಗೆದರೆ ಬಹುತೇಕ ಸಮಸ್ಯೆ ನಿವಾರಣೆಯಾಗಲಿದೆ ಎಂದು ತಿಳಿಸಿದರು. ಅದಕ್ಕೆ ಆಡಳಿತಾಧಿಕಾರಿಗಳು ಕೂಡಲೇ ಕ್ರಮ ವಹಿಸುವಂತೆ ವಲಯ ಜಂಟಿ ಆಯುಕ್ತರು ಮತ್ತು ಮುಖ್ಯ ಎಂಜಿನಿಯರ್‌ಗೆ ಸೂಚಿಸಿದರು. ತಪಾಸಣೆ ವೇಳೆ ಸಂಸದ ಪಿ.ಸಿ.ಮೋಹನ್, ವಿಶೇಷ ಆಯುಕ್ತರಾದ ಬಸವರಾಜು, ತುಳಸಿ ಮದ್ದಿನೇನಿ, ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಎಂ.ಆರ್.ವೆಂಕಟೇಶ್, ವಲಯ ಜಂಟಿ ಆಯುಕ್ತರಾದ ಚಿದಾನಂದ, ವೀರಭದ್ರಸ್ವಾಮಿ, ಸ್ಮಾರ್ಟ್ ಸಿಟಿ ಮುಖ್ಯಎಂಜಿನಿಯರ್ ರಂಗನಾಥ್ ನಾಯ್ಕ್, ಜಲಮಂಡಳಿ(ಪಶ್ಚಿಮ) ಮುಖ್ಯ ಎಂಜಿನಿಯರ್ ದೇವರಾಜ್ ಇದ್ದರು.

### ರಸ್ತೆಬದಿ ಚರಂಡಿ ಅಭಿವೃದ್ಧಿ ಪಡಿಸಲು ಸೂಚನೆ

ಜಲಮಂಡಳಿ ನೀರು ಮತ್ತು ಕೊಳಚೆ ನೀರಿನ ಕೊಳವೆ ಅಳವಡಿಕೆಗೆ ರಸ್ತೆ ಅಗೆದು ಹಾಕಲಾಗಿದೆ. ಇದರಿಂದ ರಸ್ತೆ ಗುಂಡಿ ಬಿದ್ದು ವಾಹನ ಸಂಚಾರ ತೊಂದರೆ ಆಗುತ್ತಿದೆ. ಕೂಡಲೇ ರಸ್ತೆ ದುರಸ್ತಿ ಮಾಡಬೇಕು. ಮಳೆಗಾಲದಲ್ಲಿ ಮ್ಯಾನ್ ಹೋಲ್‌ಗಳಲ್ಲಿ ನೀರು ರಸ್ತೆಗೆ ಹರಿದು ತೊಂದರೆ ಉಂಟಾಗುತ್ತಿದೆ. ಅದನ್ನು ಕೂಡಲೇ ಪರಿಹಾರ ಮಾಡುವಂತೆ ಸೂಚಿಸಿದರು. ಮಳೆ ನೀರು ಕಾಲುವೆಗಳಲ್ಲಿ ಹೂಳು ತುಂಬಿಕೊಂಡಿರುವುದನ್ನು ಗಮನಿಸಿದ ಆಡಳಿತಾಧಿಕಾರಿಗಳು ಹೂಳು ತೆಗೆಯುವಂತೆ ನಿರ್ದೇಶಿಸಿದರು. ಸುಲ್ತಾನ್‌ಪೇಟೆ ಮುಖ್ಯರಸ್ತೆಯಲ್ಲಿ ಬೃಹತ್ ಗಾತ್ರದ ಸ್ಯಾನಿಟರಿ ಕೊಳವೆ ರಸ್ತೆ ಮಾರ್ಗದಲ್ಲಿ ಹಾಕಿರುವುದರಿಂದ ವಾಹನ ಸವಾರರಿಗೆ ತೊಂದರೆ ಆಗುತ್ತಿದೆ. ಕೂಡಲೆ ಪೈಪ್‌ಗಳನ್ನು ಬೇರೆಡೆ ಸ್ಥಳಾಂತರಿಸಲು ಜಲಮಂಡಳಿ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಹೊಸ ದಿಗಂತ
12
26 Nov 2020

# ಕೊರಿಯಾ ಕೌನ್ಸಿಲರ್ ಜನರಲ್ ಕಚೇರಿ ತೆರೆಯಲು ಚರ್ಚೆ: ಆಯುಕ್ತ

**ಬೆಂಗಳೂರು:** ನಗರದಲ್ಲಿ ಕೊರಿಯಾ ಕೌನ್ಸಿಲರ್ ಜನರಲ್ ಕಚೇರಿ ತೆರೆಯಲು ಸಹಕರಿಸುವಂತೆ ಚೆನ್ನೈ ಕೌನ್ಸಿಲರ್ ಜನರಲ್ ಹೋಂಗ್-ಯೂಪ್ ಲೀ ಚರ್ಚೆ ನಡೆಸಲಾಯಿತು ಎಂದು ಬಿಬಿಎಂಪಿ ಆಯುಕ್ತ ಎನ್.ಮಂಜುನಾಥ್ ಪ್ರಸಾದ್ ತಿಳಿಸಿದ್ದಾರೆ.

ಪಾಲಿಕೆ ಕೇಂದ್ರ ಕಚೇರಿಗೆ ಬುಧವಾರ ಭೇಟಿ ಮಾಡಿದ ಹೋಂಗ್ ಯೂಪ್ ಲೀ ಅವರು, ಸಿಲಿಕಾನ್ ಸಿಟಿಯಲ್ಲಿ 1 ಸಾವಿರಕ್ಕೂ ಅಧಿಕ ಕೊರಿಯಾ ದೇಶದ ಪ್ರಜೆಗಳಿದ್ದಾರೆ. ಜತೆಗೆ, ಪ್ರತಿವರ್ಷ ಭಾರತದಿಂದ ಕೊರಿಯಾಗೆ ಹೋಗುವ ನಾಗರಿಕರಲ್ಲಿ ಶೇ.30ಕ್ಕೂ ಅಧಿಕ ಬೆಂಗಳೂರಿನವರು ಇರುತ್ತಾರೆ. ಹೀಗಾಗಿ, ಬೆಂಗಳೂರು ಮತ್ತು ಕೊರಿಯಾ ನಡುವೆ ಬಾಂಧವ್ಯ ಹೆಚ್ಚಳ ಮಾಡಲು, ಪ್ರಜೆಗಳಿಗೆ ಸೌಕರ್ಯ ಒದಗಿಸಲು ನಗರದಲ್ಲಿ ಕೌನ್ಸಿಲ್ ಜನರಲ್ ಕಚೇರಿ ತೆರೆಯಲು ಅವಕಾಶ ನೀಡುವಂತೆ ಮನವಿ ಮಾಡಿದ್ದಾರೆ ಎಂದು ತಿಳಿಸಿದರು.

ಕೊರಿಯಾ ಮೂಲದ 49 ಕಂಪನಿಗಳು ನಗರದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಅವುಗಳ ನಿರ್ವಹಣೆ



ಮತ್ತು ತಂತ್ರಜ್ಞಾನ ಅಭಿವೃದ್ಧಿ ಸಂಬಂಧ ಎರಡೂ ದೇಶಗಳ ಪ್ರಜೆಗಳ ಸಂಚಾರ ಅಗತ್ಯವಾಗಿದೆ. ಕೊರಿಯಾಕ್ಕೆ ಹೋಗಲು ವೀಸಾ ಪಡೆಯುವುದು, ಅದಕ್ಕೆ ಅನುಮತಿ, ಸಹಾಯವಾಣಿ ಸೇರಿ ಎಲ್ಲ ಕಾರ್ಯಕ್ಕೂ ಕಚೇರಿ ನೆರವಾಗಲಿದೆ. ಹೀಗಾಗಿ, ಚೆನ್ನೈನಲ್ಲಿರುವ ಕೌನ್ಸಿಲ್ ಜನರಲ್ ಮಾದರಿಯಲ್ಲಿ, ಬೆಂಗಳೂರಿನಲ್ಲಿಯೂ ಕಚೇರಿ ತೆರೆಯಲು ಅನುಕೂಲ ಮಾಡಿಕೊಡುವಂತೆ ಚರ್ಚೆ ನಡೆಸಲಾಯಿತು ಎಂದರು.

ಜನದನಿಯ ಸಾರಥಿ
ವಾರ್ತಾ ಭಾರತಿ

| Date | 26-11-2020 |
|---|---|
| Page No | 3 |

## ಬಿಬಿಎಂಪಿಗೆ ಶೀಘ್ರ ಚುನಾವಣೆ ನಡೆಸಲು ಕೋರಿ ಅರ್ಜಿ

# ತೀರ್ಪು ಕಾಯ್ದಿರಿಸಿದ ಹೈಕೋರ್ಟ್

ಬೆಂಗಳೂರು, ನ.25: ಬಿಬಿಎಂಪಿಗೆ ಶೀಘ್ರ ಚುನಾವಣೆ ನಡೆಸುವಂತೆ ಕೋರಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ಪೂರ್ಣಗೊಳಿಸಿರುವ ಹೈಕೋರ್ಟ್ ಬುಧವಾರ ತೀರ್ಪು ಕಾಯ್ದಿರಿಸಿದೆ.

ಅವಧಿ ಮುಗಿದಿರುವ ಪಾಲಿಕೆಗೆ ಶೀಘ್ರವಾಗಿ ಚುನಾವಣೆ ನಡೆಸುವಂತೆ ಕೋರಿ ಕಾಂಗ್ರೆಸ್ ಪಕ್ಷದ ಪಾಲಿಕೆಯ ಮಾಜಿ ಸದಸ್ಯ ಎಂ. ಶಿವರಾಜು ಸಲ್ಲಿಸಿದ್ದ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಎ.ಎಸ್.ಓಕ ನೇತೃತ್ವದ ವಿಭಾಗೀಯ ಪೀಠ ವಿಚಾರಣೆ ನಡೆಸಿತು.

ಸರಕಾರದ ಪರ ವಾದಿಸಿದ ಅಡ್ವೊಕೇಟ್ ಜನರಲ್ ಪ್ರಭುಲಿಂಗ ಕೆ. ನಾವದಗಿ ಅವರು, ಸರಕಾರಕ್ಕೆ ಚುನಾವಣೆ ಮುಂದೂಡುವ ಯಾವುದೇ ಉದ್ದೇಶವಿಲ್ಲ. ಬಿಬಿಎಂಪಿ ಇದೀಗ ವಿಸ್ತಾರವಾಗಿ ಬೆಳೆದಿದೆ. ಹೀಗಾಗಿ, ಬಿಬಿಎಂಪಿಯ ವಾರ್ಡ್‌ಗಳನ್ನು ಮರುವಿಂಗಡನೆ ಮಾಡಿ ಶೀಘ್ರದಲ್ಲೇ ಚುನಾವಣೆ ನಡೆಸಲಾಗುವುದು ಎಂದು ಪೀಠಕ್ಕೆ ವಿವರಿಸಿದರು.

ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಅರ್ಜಿದಾರರ ಪರ ಹಿರಿಯ ನ್ಯಾಯವಾದಿ, ಮಾಜಿ ಅಡ್ವೊಕೇಟ್ ಜನರಲ್ ಪ್ರೊ.ರವಿವರ್ಮ ಕುಮಾರ್ ಅವರು, ಈಗಾಗಲೇ ಹೈಕೋರ್ಟ್ ವಿಭಾಗೀಯ ಪೀಠ ಗ್ರಾಮ ಪಂಚಾಯತ್ ಚುನಾವಣೆ ತೀರ್ಪಿನಲ್ಲಿ ಚುನಾವಣೆ ನಡೆಸುವ ವಿಚಾರವಾಗಿ ಸ್ಪಷ್ಟ ನಿರ್ದೇಶನ ನೀಡಿದೆ. ಚುನಾವಣೆ ಮುಂದೂಡುವ ಅಧಿಕಾರ ಸರಕಾರಕ್ಕಿಲ್ಲ. ಅವಧಿಗೆ ಮುನ್ನ ಚುನಾವಣೆ ನಡೆಸುವುದು ಚುನಾವಣಾ ಆಯೋಗದ ಸಾಂವಿಧಾನಿಕ ಕರ್ತವ್ಯ. ಈ ವಿಚಾರದಲ್ಲಿ ಸರಕಾರಕ್ಕೆ ಯಾವುದೇ ಪಾತ್ರವಿಲ್ಲ. ಹಾಗೆಯೇ ಸರಕಾರದ ನಿಲುವು ಮುಖ್ಯವಲ್ಲ ಎಂದು ಸ್ಪಷ್ಟ ಪಡಿಸಲಾಗಿದೆ ಎಂದು ವಾದಿಸಿದರು. ವಕೀಲರ ವಾದ ಆಲಿಸಿದ ನ್ಯಾಯಪೀಠ ತೀರ್ಪು ಕಾಯ್ದಿರಿಸಿರುವುದಾಗಿ ತಿಳಿಸಿತು.

ಪ್ರಜಾವಾಣಿ
1982

| Date | 25-11-2020 |
| --- | --- |
| Page No | 7 |



ನಗರದ ವಿವಿಪುರಂ, ಸಜ್ಜನ್ ರಾವ್ ವೃತ್ತದ ರಸ್ತೆಯಲ್ಲಿ ಬಿರುಕು ಬಿಟ್ಟಿರುವ ರಸ್ತೆಗಳಿಗೆ ಪ್ಯಾಚ್ ವರ್ಕ್ ಮಾಡುತ್ತಿರುವ ಕಾರ್ಮಿಕರು.

ಈ ಸಂಜೆ

| Date | 25-11-2020 |
| --- | --- |
| Page No | 6 |

# ರಸ್ತೆ ಅಭಿವೃದ್ಧಿ ಕಾಮಗಾರಿ ಮುಗಿಯೋದು ಯಾವಾಗ ?



**ಬೆಂಗಳೂರು, ನ.25-** ನಗರದ ಮಲ್ಲೇಶ್ವರ-ನವರಂಗ್ ಮುಖ್ಯ ರಸ್ತೆಯಲ್ಲಿ ಕಳೆದ ಕೆಲವು ತಿಂಗಳುಗಳಿಂದ ಆಮೆಗತಿಯಲ್ಲಿ ಸಾಗಿದ್ದ ರಸ್ತೆ ಅಭಿವೃದ್ಧಿ ಕಾಮಗಾರಿ ಬಿರುಸುಗೊಂಡಿದೆ.

ಸತತವಾಗಿ ಸುರಿದ ಮಳೆ ಹಾಗೂ ವಾಹನ ದಟ್ಟಣೆಯಿಂದ ರಸ್ತೆ ಸಂಪೂರ್ಣ ಹಾಳಾಗಿತ್ತು. ಅಲ್ಲಲ್ಲಿ ಗುಂಡಿ ಬಿದ್ದು ವಾಹನ ಸವಾರರಿಗೆ ಭಾರೀ ತೊಂದರೆಯಾಗಿತ್ತು.

ಎಷ್ಟೋ ಬಾರಿ ದ್ವಿಚಕ್ರ ವಾಹನ ಸವಾರರು ಹಳ್ಳಗಳಿಂದಾಗಿ ಬಿದ್ದು ಗಾಯಗೊಂಡ ಉದಾಹರಣೆಗಳು ಇದ್ದವು. ನ್ಯಾಯಾಲಯ ಕೂಡ ನಗರದ ರಸ್ತೆಗಳನ್ನು ಶೀಘ್ರ ಅಭಿವೃದ್ಧಿ ಪಡಿಸುವಂತೆ ತಾಕೀತು ಮಾಡಿತ್ತು.

ಸರ್ಕಾರ ಕಾಮಗಾರಿಗೆ ಚಾಲನೆ ನೀಡಿದ್ದರೂ ಕೋವಿಡ್-19ನಿಂದಾಗಿ ಕಾರ್ಯ ಚುರುಕುಗೊಂಡಿರಲಿಲ್ಲ. ಇದೀಗ ರಸ್ತೆ ಅಭಿವೃದ್ಧಿಯನ್ನು ಸಮರೋಪಾದಿಯಲ್ಲಿ ಕಾರ್ಮಿಕರು ಕೈಗೊಂಡಿದ್ದಾರೆ.

ಈ ಭಾಗದ ರಸ್ತೆ ಹಾಳಾಗಿರುವ ಕುರಿತು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದರು.

ರಸ್ತೆ ಗುಂಡಿಯಿಂದ ಮಲ್ಲೇಶ್ವರಂ ತಿರುವಿನಲ್ಲಿ ಕೆಲವೆಡೆ ಮ್ಯಾನ್‌ಹೋಲ್‌ಗಳನ್ನು ಸರಿಪಡಿಸಿ ಸ್ಲ್ಯಾಬ್ ಹಾಕಿ ಮುಚ್ಚಲಾಗಿದೆ. ರಸ್ತೆ ಗುಂಡಿಗಳಿಗೆ ಜಲ್ಲಿ ತುಂಬಿ ಡಾಂಬರು ಹಾಕಿ ಸರಿಪಡಿಸಲಾಗುತ್ತಿದೆ.

ಕಳೆದ ನಾಲ್ಕೈದು ತಿಂಗಳಿನಿಂದ ಕಾಮಗಾರಿ ನಡೆಯುತ್ತಿತ್ತು. ಇದರಿಂದಾಗಿ ಸಾರ್ವಜನಿಕರು ಓಡಾಡಲು ಕೂಡ ಕಷ್ಟವಾಗುತ್ತಿತ್ತು.

ಕಾಮಗಾರಿ ಪೂರ್ಣಗೊಳಿಸುವಂತೆ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಈಗ ಮತ್ತೆ ಕಾಮಗಾರಿಯನ್ನು ಚುರುಕುಗೊಳಿಸಲಾಗಿದೆ.



ಈ ಸಂಜೆ

| Date | 25-11-2020 |
|---|---|
| Page No | 7 |

# ಇಂದಿನಿಂದ ಮೂರು ದಿನ ಮಳೆ

**ಬೆಂಗಳೂರು, ನ.25-** ಬಂಗಾಳಕೊಲ್ಲಿಯಲ್ಲಿ ಉಂಟಾಗಿರುವ ಚಂಡ ಮಾರುತದ ಪರಿಣಾಮ ಇಂದಿನಿಂದ ಮೂರು ದಿನಗಳ ಕಾಲ ರಾಜ್ಯದಲ್ಲಿ ಮಳೆಯಾಗುವ ಮುನ್ಸೂಚನೆಗಳಿವೆ.



ಬಂಗಾಳಕೊಲ್ಲಿಯಲ್ಲಿ ನಿವಾರ್ ಚಂಡಮಾರುತ ಉಂಟಾಗಿದ್ದು, ಅದರ ಪರಿಣಾಮದಿಂದ ರಾಜ್ಯದ ದಕ್ಷಿಣ ಒಳನಾಡು ಹಾಗೂ ಪೂರ್ವ ಭಾಗದ ಜಿಲ್ಲೆಗಳಲ್ಲಿ ಭಾಗಶಃ ಮೋಡಕವಿದ ವಾತಾ ವರಣ ಕಂಡು ಬರುತ್ತಿದೆ. ಇಂದು ಸಂಜೆಯಿಂದ ಸಾಧಾರಣ ಪ್ರಮಾಣದ ಮಳೆ ಪ್ರಾರಂಭವಾಗುವ ಮುನಸೂಚನೆಗಳಿವೆ ಎಂದು ಹವಾಮಾನ ತಜ್ಞ ವಿ.ಎಸ್.ಪ್ರಕಾಶ್ ತಿಳಿಸಿದರು.

ತಮಿಳುನಾಡಿನ ಕರಾವಳಿ ಭಾಗದಲ್ಲಿ ಚಂಡಮಾರುತ ಕೇಂದ್ರೀಕೃತವಾಗಿದ್ದು, ಇಂದು ಸಂಜೆ ವೇಳೆಗೆ ಭೂ ಸ್ಪರ್ಶವಾಗುವ ಸಾಧ್ಯತೆಗಳಿವೆ. ಇದರಿಂದ ಕೋಲಾರ, ಚಿಕ್ಕಬಳ್ಳಾಪುರ, ಚಾಮರಾಜನಗರ, ಮಂಡ್ಯ, ರಾಮನಗರ, ತುಮಕೂರು, ಬಳ್ಳಾರಿ, ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ. ಇದೇ ರೀತಿ ರಾಜ್ಯದ ಪೂರ್ವ ಭಾಗ ಹಾಗೂ ಈಶಾನ್ಯ ಭಾಗದ ಜಿಲ್ಲೆಗಳಲ್ಲೂ ಮಳೆಯಾಗುವ ಮುನ್ಸೂಚನೆಗಳಿವೆ ಎಂದರು.

ನ.27ರವರೆಗೂ ಮಳೆ ಮುಂದುವರೆಯಲಿದೆ. ಆ ವೇಳೆಗೆ ಚಂಡಮಾರುತ ದುರ್ಬಲಗೊಂಡು ತನ್ನ ಶಕ್ತಿ ಕಳೆದುಕೊಳ್ಳುವ ಸಾಧ್ಯತೆ ಇದ್ದು, ಮಳೆ ಕೂಡ ಕಡಿಮೆಯಾಗಿದೆ. ಇಂದು ಸಂಜೆ ಭೂ ಸ್ಪರ್ಶವಾದ ನಂತರ ಚಂಡಮಾರುತವು ಯಾವ ಸ್ವರೂಪ ಪಡೆಯಲಿದೆ ಮತ್ತು ಯಾವ ದಿಕ್ಕಿನಲ್ಲಿ ಚಲಿಸಲಿದೆ ಎಂಬ ಆಧಾರದ ಮೇಲೆ ಮುಂದಿನ ಮಳೆ ಪ್ರಮಾಣವು ನಿರ್ಧಾರವಾಗಲಿದೆ ಎಂದು ಅವರು ಹೇಳಿದರು.

ಮುಂಗಾರು ಹಂಗಾಮಿನ ರಾಗಿ, ಭತ್ತ, ಜೋಳ, ಶೇಂಗಾ ಸೇರಿದಂತೆ ವಿವಿಧ ಬೆಳಗಳನ್ನು ರೈತರು ಕೊಯ್ಲು ಮಾಡುತ್ತಿದ್ದು, ಮಳೆ ಬರುವುದರಿಂದ ಫಸಲಿಗೆ ಹಾನಿ ಉಂಟಾಗಲಿದೆ. ಹೀಗಾಗಿ ರೈತರು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಮೂರ್‍ನಾಲ್ಕು ದಿನ ಕೈಗೊಳ್ಳುವುದು ಸೂಕ್ತ ಎಂದು ಅವರು ತಿಳಿಸಿದರು.

ಈ ಸಂಜೆ

| Date | 25-11-2020 |
| --- | --- |
| Page No | 8 |

# ಗೋಡೆ ಬರಹ ನಿರ್ಬಂಧ ಆದೇಶ ವಾಪಸ್ ಪಡೆಯಲು ಒತ್ತಾಯ

**ಬೆಂಗಳೂರು, ನ.25-** ಗೋಡೆ ಬರಹಕ್ಕೆ ನಿರ್ಬಂಧ ವಿಧಿಸಿರುವ ಕ್ರಮವನ್ನು ಕೂಡಲೇ ಹಿಂಪಡೆಯಬೇಕು. ಬಡ ಕಲಾವಿದರ ಹೊಟ್ಟೆ ಮೇಲೆ ಹೊಡೆಯಬಾರದು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ನಾಮಫಲಕ ಕಲಾವಿದರ ಸಂಘ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತ, ಆಯುಕ್ತ ಮಂಜುನಾಥ್ ಪ್ರಸಾದ್ ಅವರಿಗೆ ಮನವಿ ಮಾಡಿದ್ದಾರೆ.

ಮನವಿ ಪತ್ರ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಂಘದ ರಾಜ್ಯಾಧ್ಯಕ್ಷ ಬಿ.ಕೆ.ಗುರುರಾಜ್ ಅವರು, ನಾವು ನೂರಾರು ಮಂದಿ ಕಲಾವಿದರಿದ್ದೇವೆ. ಹಲವು ಕಲಾವಿದರು ಒಪ್ಪೊತ್ತಿನ ಊಟಕ್ಕೂ ತೊಂದರೆ ಪಡುತ್ತಿದ್ದಾರೆ. ಚಿತ್ರ ಬರೆಯುವುದು ಬಿಟ್ಟು ನಮಗೆ ಬೇರೆ ಕೆಲಸ ಗೊತ್ತಿಲ್ಲ. ಇಂತಹ ಸಂದರ್ಭದಲ್ಲಿ ಗೋಡೆ ಬರಹ ನಿರ್ಬಂಧಿಸಿದ ಬಿಬಿಎಂಪಿ ಕ್ರಮ ಅಕ್ಷಮ್ಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಆಧುನಿಕ ತಂತ್ರಜ್ಞಾನದ ಜಾಹೀರಾತು ಬಂದ ನಂತರ ಚಿತ್ರಕಲಾವಿದರು ಅಲ್ಲೊಂದು ಇಲ್ಲೊಂದು ಗೋಡೆ ಬರಹ ಬರೆದು ಜೀವನ ಸಾಗಿಸುತ್ತಿದ್ದರು. ಕೋವಿಡ್-19ನಿಂದಾಗಿ ನೂರಾರು ಕಲಾವಿದರು ಕೆಲಸವಿಲ್ಲದೆ ತತ್ತರಿಸಿ ಹೋಗಿದ್ದಾರೆ ಎಂದು ಹೇಳಿದರು.

ಕೊರೊನಾ ಸಂದರ್ಭದಲ್ಲೂ ಹಲವು ಕಲಾವಿದರು ತಮ್ಮ ಸ್ವಂತ ಖರ್ಚಿನಿಂದ ರಾಜ್ಯಾದ್ಯಂತ ರಸ್ತೆ ಮತ್ತು ಗೋಡೆಗಳ ಮೇಲೆ ಕೊರೊನಾ ಕುರಿತು ಜಾಗೃತಿ ಚಿತ್ರ ಬರೆದು ಜನರಲ್ಲಿ ಅರಿವು ಮೂಡಿಸಿದ್ದಾರೆ. ಗೋಡೆ ಬರಹ ಬರೆಯುವಾಗ ನಾವು ಯಾವುದೇ ಹಾನಿಕಾರಕ ರಾಸಾಯನಿಕ ಬಳಸುವುದಿಲ್ಲ. ಆದರೂ ಏಕಾಏಕಿ ಗೋಡೆ ಬರಹ ನಿರ್ಬಂಧಿಸಿರುವುದರಿಂದ ನೂರಾರು ಕಲಾವಿದರು ಬೀದಿಗೆ ಬೀಳುವ ಸ್ಥಿತಿ ಎದುರಾಗಿದೆ. ಆದ್ದರಿಂದ ಕೂಡಲೇ ಈ ಆದೇಶ ವಾಪಸ್ ಪಡೆಯಬೇಕು ಎಂದು ಒತ್ತಾಯಿಸಿದರು.

ಸಂಘದ ಪದಾಧಿಕಾರಿಗಳಾದ ರಂಗನಾಥ್, ಮಹೇಶ್, ನಾಗ ಪ್ರದೀಪ್, ಮಂಜುನಾಥ್, ಗಿರೀಶ್, ರಾಜಣ್ಣ ಮತ್ತಿತರರು ಈ ಸಂದರ್ಭದಲ್ಲಿ ಹಾಜರಿದ್ದರು.